ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು , ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 150
26–11–2025 ಬುಧವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 150

## ರಸ್ತೆ ಅಪಘಾತದಲ್ಲಿ ದಾವಣಗೆರೆ ಜಿಲ್ಲಾಧಿಕಾರಿಯಾಗಿದ್ದ ಮಹಾಂತೇಶ್ ಬೀಳಗಿ ಸಾವು



ಜೇವರ್ಗಿ ಬಳಿ ಕಾರು ಅಫಘಾತದಲ್ಲಿ ಹಿರಿಯ ಐಎಎಸ್ ಅಧಿಕಾರಿ ಮಹಾಂತೇಶ ಬೀಳಗಿ ಸಾವನ್ನಪ್ಪಿದ್ದಾರೆ.

ವಿಜಯಪುರದಿಂದ ಕಲಬುರಗಿಗೆ ಆಗಮಿಸುತ್ತಿದ್ದ ವೇಳೆ ಜೇವರ್ಗಿ ಬೈಪಾಸ್‌ನಲ್ಲಿ ಕಾರು ಅಪಘಾತ ಸಂಭವಿಸಿ ಮಹಾಂತೇಶ ಬೀಳಗಿ ಸೇರಿದಂತೆ ಮೂವರು ಸಾವನ್ನಪ್ಪಿರುವ ಬಗ್ಗೆ ವರದಿಯಾಗಿದೆ. ಮಹಾಂತೇಶ ಬೀಳಗಿ ಕರ್ನಾಟಕ ರಾಜ್ಯ ಮಿನರಲ್ ಕಾರ್ಪೊರೇಷನ್ ಎಂಡಿ ಯಾಗಿದ್ದರು.

## ಚಿನ್ನದ ವ್ಯಾಪಾರಿ ಅಡ್ಡಗಟ್ಟಿ ದರೋಡೆ ಮಾಡಿದ ಇಬ್ಬರ ಪಿಎಸ್‌ಐ ಬಂಧನ

**ದಾವಣಗೆರೆ.ನ.25:** ಇತ್ತೀಚೆಗೆ ಬೆಂಗಳೂರಿನಲ್ಲಿ ಹಾಡಾಗಲೇ ಎಟಿಎಂ ವಾಹನವನ್ನು ಅಡ್ಡಗಟ್ಟಿ ದರೋಡೆ ಮಾಡಿದ್ದ ಪ್ರಕರಣ ಇನ್ನೂ ಜನ ಮಾನಸದಲ್ಲಿ ಇರುವಾಗಲೇ ತಾವು ಐಜಿ ಕಚೇರಿಯ ಅಧಿಕಾರಿಗಳೆಂದು ಹೇಳಿಕೊಂಡು ಬಂದ ಇಬ್ಬರು ಪಿಎಸ್‌ಐಗಳು ಬಂಗಾರದ ವ್ಯಾಪಾರಿಯನ್ನು ಅಡ್ಡಗಟ್ಟಿ ದರೋಡೆ ಮಾಡಿ, ನಂತರ ಪರಾರಿಯಾದ ಘಟನೆ ಇಲ್ಲಿನ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಬಳಿ ನಡೆದಿದೆ.

ಹಾವೇರಿ ಜಿಲ್ಲೆಯ ಪಿಎಸೈಗಳಾದ ಪ್ರವೀಣ್ ಹಾಗೂ ಮಾಳಪ್ಪ ಸೇರಿದಂತೆ ಒಟ್ಟು 7 ಜನರನ್ನು ಬಂಧಿಸಲಾಗಿದೆ. ಕಾರವಾರ ಮೂಲದ ಚಿನ್ನದ ವ್ಯಾಪಾರಿಯೊಬ್ಬ ಸುಮಾರು 80 ಲಕ್ಷ ಮೌಲ್ಯದ ಚಿನ್ನವನ್ನು ಆರ್ಡರ್ ಮಾಡಿದ್ದ ದಾವಣಗೆರೆ ಚಿನ್ನದ ಅಂಗಡಿಗೆ ಕೊಡಲೆಂದು ತಂದಿದ್ದ. ಈ ಬಗ್ಗೆ ಮಾಹಿತಿ ಅರಿತ ಈ ಇಬ್ಬರು ಪಿಎಸ್‌ಐಗಳು ತಮ್ಮ ಸಹಚರರೊಂದಿಗೆ ನಗರದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಆತನನ್ನು ಅಡ್ಡಗಟ್ಟಿ ಆತನಿಂದ ಸುಮಾರು 72ಗ್ರಾಂ ಚಿನ್ನವನ್ನು ದೋಚಿ ಪರಾರಿಯಾಗಿದ್ದಾರೆ.

ಈ ಕುರಿತು ಚಿನ್ನದ ವ್ಯಾಪಾರಿ ಸಂಬಂಧಿಸಿದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು ಮಾಡಿದ್ದು, ತಕ್ಷಣವೇ ಕಾರ್ಯಪ್ರವೃತ್ತರಾದ ಐಜಿಪಿ ಡಾ.ಬಿ.ಆರ್.ರವಿ ಕಾಂತೇಗೌಡ ಕೆಟಿಜೆ ನಗರ ಪೊಲೀಸ್ ಠಾಣೆಯ ಸಿಬ್ಬಂದಿಗಳಿಗೆ ನಿರ್ದೇಶನ ನೀಡಿದ್ದು ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಬಂಧನಕ್ಕೆ ಒಳಗಾಗಿದ್ದ ಇಬ್ಬರು ಪಿಎಸ್‌ಐಗಳನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಲಾಗಿದ್ದು, ನ್ಯಾಯಾಧೀಶರು ನ್ಯಾಯಾಂಗ ಬಂಧನಕ್ಕೆ ಆದೇಶ ನೀಡಿದ್ದಾರೆ. ಕಳ್ಳರನ್ನು ಹಿಡಿದು ಜೈಲಿಗೆ ಕಳಿಸಬೇಕಾಗಿದ್ದ ಪೊಲೀಸರೇ ಇದೀಗ ಜೈಲು ಪಾಲಾಗಿರುವುದು ಬೇಲಿಯೇ ಎದ್ದು ಹೊಲ ಮೇದಂತಾಗಿದೆ.

## ನಾಳೆ ಶರಣ ಸಂಸ್ಕೃತಿ ರೀತಿಯಲ್ಲಿ ಆಡಂಬರವಿಲ್ಲದೆ ಡಾ.ಅನುಷಾ ಅವರ ಸರಳ ವಿವಾಹ ಮಹೋತ್ಸವ

**ದಾವಣಗೆರೆ.ನ.25:** ಸಾಹಿತಿ, ಶಿಕ್ಷಕಿ ಎ.ಸಿ.ಶಶಿಕಲಾ ಶಂಕರಮೂರ್ತಿ ತಮ್ಮ ಮಗಳ ಮದುವೆಯನ್ನು ಶರಣ ಸಂಸ್ಕೃತಿ ರೀತಿಯಲ್ಲಿ ಆಡಂಬರವಿಲ್ಲದೆ ಸರಳವಾಗಿ ನೆರವೇರಿಸಲು ಮುಂದಾಗುವ ಮೂಲಕ ಇತರರಿಗೆ ಮಾದರಿಯಾಗಿದ್ದಾರೆ.

ಇದೇ ನ.27ರಂದು ಬೆಳಿಗ್ಗೆ 7ರಿಂದ 10 ಗಂಟೆಯವರೆಗೆ ನಗರದ ಪಾರ್ವತಮ್ಮ ಶಾಮನೂರು ಶಿವಶಂಕರಪ್ಪ ಕಲ್ಯಾಣ ಮಂಟಪದಲ್ಲಿ ಇವರ ಪುತ್ರಿ ಡಾ.ಎಸ್.ಅನುಷಾ ವಿವಾಹವು ಹಾವೇರಿ ಹಿಮ್ಸ್ ಸಹಾಯಕ ಪ್ರಾಧ್ಯಾಪಕ ಡಾ.ಎ.ಸಿ.ನವೀನ್ ಕುಮಾರ್ ಜೊತೆಗೆ ಶರಣ ತತ್ವದ ಮಾದರಿಯಲ್ಲಿ ವಚನಗಳ ಪಠಣದ ಮೂಲಕ ನೆರವೇರಲಿದೆ.

ಸುದ್ದಿಗೋಷ್ಠಿಯಲ್ಲಿ ಎ.ಸಿ.ಶಶಿಕಲಾ ಶಂಕರಮೂರ್ತಿ ಮಾತನಾಡಿ, ಕಾರ್ಯಕ್ರಮದ ಸಾನಿಧ್ಯವನ್ನು ಕಮ್ಮತ್ತಹಳ್ಳಿ-ಪಾಂಡೋಮಟ್ಟಿ ಮಠದ ಡಾ.ಗುರುಬಸವ ಸ್ವಾಮೀಜಿ, ಸಾಣೆಹಳ್ಳಿ ತರಳಬಾಳು ಶಾಖಾಮಠದ ಡಾ.ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ, ಇಳಕಲ್ ಚಿತ್ತರಗಿ ಸಂಸ್ಥಾನ ಮಠದ ಶ್ರೀ ಗುರುಮಹಾಂತ ಸ್ವಾಮೀಜಿ, ಟಿ.ನರಸೀಪುರ ಮಠದ ಶ್ರೀ ಗೌರಿಶಂಕರ ಸ್ವಾಮೀಜಿ, ಸಿದ್ಧಯ್ಯನಕೋಟೆ ಮಠದ ಶ್ರೀ ಬಸವಲಿಂಗ ಸ್ವಾಮೀಜಿ ವಹಿಸುವರು. ಸಿದ್ಧಗಂಗಾ ವಿದ್ಯಾಸಂಸ್ಥೆ ಮುಖ್ಯಸ್ಥೆ ಡಾ.ಜಸ್ಟಿನ್ ಡಿಸೌಜ ಉಪಸ್ಥಿತರಿರುವರು ಎಂದರು.

ಲಿಂಗಾರ್ಚನೆ ಮತ್ತು ವಚನ ಮಾಂಗಲ್ಯ ಕಾರ್ಯವು ಶರಣ ಸಂಪ್ರದಾಯದಲ್ಲೇ ಪೂಜ್ಯರಿಂದ ವಚನಗಳ ಪಠಣದ ಮೂಲಕವೇ ನೆರವೇರಲಿದೆ. ಶ್ರೀಗಳ ಆಶೀರ್ವಚನದ ನಂತರ ಷಟ್ ಸ್ಥಲ ಧ್ವಜ ಪೂಜೆ, ವಚನ ಗೀತೆಯ ಮೂಲಕ ಕಾರ್ಯಕ್ರಮ ಉದ್ಘಾಟನೆಗೊಳ್ಳಲಿದೆ. ಇದೇ ವೇಳೆ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮಿಗಳ ಶರಣರ ಆದರ್ಶ ಹಾಗೂ ತಾವು ಬರೆದಿರುವ ಗುಣಸಾಗರ, ಶರಣ ದಾಂಪತ್ಯ ದೀಪ್ತಿ ಎಂಬ ಕೃತಿಗಳು ಲೋಕಾರ್ಪಣೆಗೊಳ್ಳಲಿವೆ. ಇಬ್ಬರೂ ವಧು-ವರರು ಗುರು-ಹಿರಿಯರು ನಿಶ್ಚಯಿಸಿದಂತೆ ವಚನ ಕಲ್ಯಾಣ ಮಹೋತ್ಸವಕ್ಕೆ ಮನಸಾರೆ ಒಪ್ಪಿ ಆದರ್ಶವಾಗಿ ವಿವಾಹವಾಗುತ್ತಿದ್ದಾರೆ ಎಂದು ಅವರು ತಿಳಿಸಿದರು.

ಹೆಚ್.ಕೆ.ಲಿಂಗರಾಜು, ರೇಖಾ ಓಂಕಾರಪ್ಪ, ಮಲ್ಲಮ್ಮ ನಾಗರಾಜ್, ಸಾಲಿಗ್ರಾಮ ಗಣೇಶ ಶೆಣೈ, ಜ್ಯೋತಿ ಶೆಣೈ, ಕೆ.ಹೆಚ್.ಮಂಜುನಾಥ್, ವಸಂತಿ ಮಂಜುನಾಥ್ ಇತರರು ಸುದ್ದಿಗೋಷ್ಠಿಯಲ್ಲಿದ್ದರು.

# ಭ್ರಷ್ಟರಿಗೆ ಲೋಕಾಯುಕ್ತ ಶಾಕ್

## ಏಕ ಕಾಲದಲ್ಲಿ ರಾಜ್ಯದ 10 ಕಡೆ ದಾಳಿ– ಪರಿಶೀಲನೆ

**ಬೆಂಗಳೂರು:** ಭ್ರಷ್ಟ ಅಧಿಕಾರಿಗಳಿಗೆ ಲೋಕಾಯುಕ್ತ ಶಾಕ್ ನೀಡಿದೆ. ರಾಜ್ಯದ 10 ಕಡೆಗಳಲ್ಲಿ ಏಕಕಾಲದಲ್ಲಿ ಹಲವು ಸರ್ಕಾರಿ ಅಧಿಕಾರಿಗಳ ಮನೆ ಹಾಗೂ ಕಚೇರಿಗಳ ಮೇಲೆ ದಾಳಿ ಮಾಡಿರುವ ಲೋಕಾಯುಕ್ತ ಅಧಿಕಾರಿಗಳು, ಪರಿಶೀಲನೆ ನಡೆಸುತ್ತಿದ್ದಾರೆ.




- ಬೆಂಗಳೂರು (ಎಲೆಕ್ಟ್ರಾನಿಕ್ ಸಿಟಿ) – RTO ಸೂಪರಿಂಟೆಂಡೆಂಟ್ ಕುಮಾರಸ್ವಾಮಿ
- ಮಂಡ್ಯ – ನಗರ ಪಾಲಿಕೆ CAO ಪುಟ್ಟಸ್ವಾಮಿ
- ಬೀದರ್ – ಕೃಷ್ಣಾ ಮೇಲ್ದಂಡೆ ಯೋಜನೆ ಮುಖ್ಯ ಇಂಜಿನಿಯರ್ ಪ್ರೇಮ್ ಸಿಂಗ್
- ಮೈಸೂರು – ಹೂಟಗಳ್ಳಿ ನಗರ ಪಾಲಿಕೆ ರೆವಿನ್ಯೂ ಇನ್ಸ್‌ಪೆಕ್ಟರ್ ರಾಮಸ್ವಾಮಿ ಸಿ.
- ಧಾರವಾಡ – ಕರ್ನಾಟಕ ವಿವಿಯ ಸಹ ಪ್ರಾಧ್ಯಾಪಕ ಸುಭಾಶ್ ಚಂದ್ರ
- ಧಾರವಾಡ – ಪ್ರಾ.ಪಶು ಕ್ಲಿನಿಕ್ ಹುಲಿಗೋಲ್ ಹಿರಿಯ ಪರೀಕ್ಷಕ ಸತೀಶ್
- ಶಿವಮೊಗ್ಗ – SIMS ಮೆಡಿಕಲ್ ಕಾಲೇಜಿನ FDA ಲಕ್ಷ್ಮೀಪತಿ ಸಿ.ಎನ್
- ದಾವಣಗೆರೆ – APMC ಸಹ ನಿರ್ದೇಶಕ ಪ್ರಭು ಜೆ.
- ಮೈಸೂರು – ಮಡಿಕೇರಿ PWD, ಸ.ಅ. ಇಂಜಿನಿಯರ್ ಗಿರೀಶ್ ಡಿ.ಎಂ
- ಹಾವೇರಿ – ಶೇಕಪ್ಪ, ಇಇ, ಯೋಜನಾ ನಿರ್ದೇಶಕ ಕಚೇರಿ ಹಾವೇರಿ

ಈ ಎಲ್ಲ ಅಧಿಕಾರಿಗಳಿಗೆ ಸಂಬಂಧಿಸಿದೆ ಎನ್ನಲಾದ ಮನೆ ಹಾಗೂ ಕಚೇರಿಗಳ ಮೇಲೆ ದಾಳಿ ನಡೆಸಿರುವ ಲೋಕಾಯುಕ್ತ ಅಧಿಕಾರಿಗಳು, ಸದ್ಯ ಪರಿಶೀಲನೆ ನಡೆಸುತ್ತಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ.

ದಾವಣಗೆರೆ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ (ಎಪಿಎಂಸಿ) ಮಾರಾಟ ವಿಭಾಗದ ಸಹಾಯಕ ನಿರ್ದೇಶಕ ಜೆ. ಪ್ರಭು ಅವರ ಮನೆ ಸೇರಿದಂತೆ ಮೂರು ಸ್ಥಳಗಳ ಮೇಲೆ ಲೋಕಾಯುಕ್ತ ಪೊಲೀಸರು ಮಂಗಳವಾರ ಬೆಳಿಗ್ಗೆ ದಾಳಿ ನಡೆಸಿದ್ದಾರೆ. ನಗರದ ಆಂಜನೇಯ ಬಡಾವಣೆಯ 12 ಕ್ರಾಸ್‌ನಲ್ಲಿರುವ ಪ್ರಭು ಅವರ ಮನೆ, ತಾಲ್ಲೂಕಿನ ದೊಡ್ಡಘಟ್ಟ ಗ್ರಾಮದ ತೋಟದ ಮನೆ ಹಾಗೂ ಕಚೇರಿ ಮೇಲೆ ಲೋಕಾಯುಕ್ತ ಪೊಲೀಸ್ ವರಿಷ್ಠಾಧಿಕಾರಿ ಎಂ.ಎಸ್. ಕೌಲಾಪೂರೆ ನೇತೃತ್ವದಲ್ಲಿ ದಾಳಿ ನಡೆದಿದೆ. ಅಕ್ರಮ ಆಸ್ತಿ ಸಂಪಾದನೆಯ ಆರೋಪದ ಮೇರೆಗೆ ಈ ದಾಳಿ ನಡೆದಿದ್ದು, ದಾಖಲೆಗಳನ್ನು ಪರಿಶೀಲಿಸಲಾಗುತ್ತಿದೆ. ಡಿವೈಎಸ್‌ಪಿ ಕಲಾವತಿ, ಇನ್ಸ್‌ಪೆಕ್ಟರ್ ಗುರುಬಸವರಾಜ್ ತಂಡ ಪರಿಶೀಲನೆ ನಡೆಸುತ್ತಿದೆ ಎಂದು ಲೋಕಾಯುಕ್ತ ಕಚೇರಿ ಮೂಲಗಳು ಮಾಹಿತಿ ನೀಡಿವೆ.

ಕರ್ನಾಟಕ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಸುಭಾಷ ನಾಟಿಕರ್ ಅವರ ನಿವಾಸದಲ್ಲಿ ಲೋಕಾಯಕ್ತ ಪೊಲೀಸರು ಪರಿಶೀಲನೆಯಲ್ಲಿ ತೊಡಗಿದ್ದಾರೆ. ಯಾಲಕ್ಕಿ ಶೆಟ್ಟರ್ ಕಾಲೊನಿಯ ನಿವಾಸಕ್ಕೆ ಬೆಳ್ಳಂಬೆಳಿಗ್ಗೆಯೇ ದಾಳಿ ಮಾಡಿರುವ ಲೋಕಾಯುಕ್ತ ಪೊಲೀಸರು ದಾಖಲೆ, ಇತ್ಯಾದಿ ಪರಿಶೀಲನೆ ನಡೆಸುತ್ತಿದ್ದಾರೆ.

## ಇನ್ನೆರಡು ದಿನಗಳಲ್ಲಿ ಡಿಕೆಶಿ ಸಿಎಂ ಆಗ್ಬೇಕು.. ಇಲ್ಲದೇ ಹೋದರೆ...!

### ಮೈಸೂರಿನ ಶ್ರೀಗಳ ಭವಿಷ್ಯ

**ಮೈಸೂರು:** ರಾಜ್ಯ ರಾಜಕೀಯದಲ್ಲಿ ಸಿಎಂ ಕುರ್ಚಿ ಕದನ ಮುಂದವರಿಯುತ್ತಿರುವುದರ ಮಧ್ಯೆ ನಾಡಿನ ಹಲವು ಮಠಾಧೀಶರು, ಧಾರ್ಮಿಕ ಮುಖಂಡರು ಕೂಡ ಹೇಳಿಕೆ ನೀಡುವುದರಲ್ಲಿ ಹಿಂದೆ ಬಿದ್ದಿಲ್ಲ.



ಮೈಸೂರಿನಲ್ಲಿ ಲಲಿತಾ ಭಾರತಿ ವಿಜಯೇಂದ್ರ ತೀರ್ಥ ಗುರುಗಳು ಡಿಕೆ ಶಿವಕುಮಾರ್ ಮುಖ್ಯಮಂತ್ರಿಯಾಗಲೆಂದು ವಿಶೇಷ ಪೂಜೆ ಸಲ್ಲಿಸಿದ್ದಾರೆ. ಗ್ರಹಗತಿಗಳ ಪ್ರಕಾರ, ಇನ್ನೆರಡು ದಿನಗಳಲ್ಲಿ ಡಿಕೆಶಿ ಸಿಎಂ ಆಗಬೇಕು, ಇಲ್ಲದಿದ್ದರೆ ಈ ಜನ್ಮದಲ್ಲಿ ಆ ಯೋಗವಿಲ್ಲ ಎಂದು ಸ್ಫೋಟಕ ಭವಿಷ್ಯ ನುಡಿದಿದ್ದಾರೆ.

ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿ ಆಗಲಿ ಎಂದು ಮೈಸೂರಿನಲ್ಲಿ ವಿಶೇಷ ಪೂಜೆ ನೆರವೇರಿಸಿದ ಬಳಿಕ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದರು. ರಾಜ್ಯಲಕ್ಷ್ಮೀ ಪೀಠ ಪ್ರಾಪ್ತ್ಯರ್ಥ ಸಂಕಲ್ಪ ಪೂಜೆ ನೆರನೇರಿಕೆ ಮಾಡಲಾಗಿದೆ.

ಹುಡ್ಕೋ ಬಡಾವಣೆಯ ನವಗ್ರಹ ಸಹಿತ ಬಲಮುರಿ ಶಕ್ತಿ ಗಣಪತಿ ದೇವಸ್ಥಾನದಲ್ಲಿ ಪೂಜೆ ನೆರವೇರಿಸಲಾಗಿದೆ. ಗಣಪತಿ ಹಾಗೂ ಲಲಿತಾ ತ್ರಿಪುರಸುಂದರಿ ದೇವಿಗೆ ಪೂಜೆ ಮಾಡಲಾಗಿದೆ. ಪೂಜೆ ಮೂಲಕ ಮುಖ್ಯಮಂತ್ರಿ ಪದವಿ ಪ್ರಾಪ್ತಿಗೆ ಸಂಕಲ್ಪ ಮಾಡಿಕೊಳ್ಳಲಾಗಿದೆ

ಇನ್ನು ಎರಡು ದಿನಗಳಲ್ಲಿ ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿ ಆಗಬೇಕು. ಅದಕ್ಕಾಗಿ ಸಂಕಲ್ಪ ಪೂಜೆ ಮಾಡಿದ್ದೇವೆ. ದೇವಿ ಕೂಡ ಬಲಗಡೆಯಿಂದ ಹೂ ವರ ಕೊಟ್ಟು ಆಶಿರ್ವಾದ ಮಾಡಿದ್ದಾಳೆ.

## ದೇವರ ಮೊರೆ ಹೋದ ಡಿಕೆಶಿ ಬೆಂಬಲಿಗರು

### ಅಯ್ಯಪ್ಪ ಮಾಲಾಧಾರಿಗಳ ವಿಶೇಷ ಪೂಜೆ



**ಮೈಸೂರು:** ಕಾಂಗ್ರೆಸ್‌ನಲ್ಲಿ ಅಧಿಕಾರ ಹಂಚಿಕೆ ವಿಚಾರಕ್ಕೆ ಜಟಾಪಟಿ ನಡೆಯುತ್ತಿರುವ ಬೆನ್ನಲ್ಲೇ, ರಾಜ್ಯದ ವಿವಿಧೆಡೆ ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿ ಆಗಬೇಕೆಂದು ಅಭಿಮಾನಿಗಳು, ಕಾರ್ಯಕರ್ತರು ಪೂಜೆ ಸಲ್ಲಿಸಿ ದೇವರ ಮೊರೆ ಹೋಗಿದ್ದಾರೆ.

ಸೋಮವಾರ ಡಿಕೆಶಿ ಅಭಿಮಾನಿಗಳ ಹಲವು ಚಟುವಟಿಕೆಗಳು ಗಮನ ಸೆಳೆದವು, ವಿಶೇಷವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತವರು ಜಿಲ್ಲೆ ಮೈಸೂರಿನ ಚಾಮುಂಡಿ ಬೆಟ್ಟದ ತಪ್ಪಲಿನಲ್ಲಿ ಇರುವ ಅಯ್ಯಪ್ಪ ಸ್ವಾಮಿ ದೇವಸ್ಥಾನದಲ್ಲಿ ಅಯ್ಯಪ್ಪ ಮಾಲಾಧಾರಿಗಳು ವಿಶೇಷ ಪೂಜೆ ಸಲ್ಲಿಸಿದರು.

ಡಿ.ಕೆ. ಶಿವಕುಮಾರ್ ಅವರ ಉನ್ನತ ಹುದ್ದೆಗೆ ಏರಲು ಪ್ರಾರ್ಥನೆ ಸಲ್ಲಿಸಿ ಶಬರಿಮಲೆಗೆ ತೆರಳಿದರು, ಅವರ ರಾಜಕೀಯ ಯಶಸ್ಸಿಗೆ ತಾವು ಅಯ್ಯಪ್ಪ ದೇವಾಲಯಕ್ಕೆ ಪ್ರಯಾಣ ಮಾಡುತ್ತಿರುವುದಾಗಿ ತಿಳಿಸಿದರು.

ಅಖಿಲ ಕರ್ನಾಟಕ ಅಧ್ಯಕ್ಷ ಡಿಕೆ ಶಿವಕುಮಾರ್ ಅಭಿಮಾನಿ ಬಳಗ ರಾಘವೇಂದ್ರ ಅವರು, "ನಮ್ಮ ಪ್ರಾರ್ಥನೆಗಳು ರಾಜಕೀಯ ಒತ್ತಡವಲ್ಲ, ಆದರೆ ಲಕ್ಷಾಂತರ ಬೆಂಬಲಿಗರು ಅವರಲ್ಲಿ ಭರವಸೆ ಇರಿಸಿದ್ದಾರೆ ಎಂದು ಹೇಳಿದರು.

ಈ ಮಧ್ಯೆ, ಅಖಿಲ ಕರ್ನಾಟಕ ಒಕ್ಕಲಿಗರ ಸಂಘದ ಬ್ಯಾನರ್ ಅಡಿಯಲ್ಲಿ ಒಕ್ಕಲಿಗ ಸಮುದಾಯದ ಸದಸ್ಯರು ಮತ್ತು ಹಲವಾರು ಕನ್ನಡ ಕಾರ್ಯಕರ್ತರು 101 ಗಣಪತಿ ದೇವಸ್ಥಾನದಲ್ಲಿ ಜಮಾಯಿಸಿ ತೆಂಗಿನಕಾಯಿ ಒಡೆದರು.

# ಚನ್ನಗಿರಿಯಲ್ಲಿ ಸಮರ್ಪಕ ದಾಖಲೆ ನೀಡದೇ 4 ಕೋಟಿ ರೂ. ವೆಚ್ಚದಲ್ಲಿ ಅನಧಿಕೃತ ಗುರುಭವನ ನಿರ್ಮಾಣ

### ಪ್ರಜಾಕೀಯ ಪಕ್ಷದ ಚನ್ನಗಿರಿ ವಿಧಾನಸಭಾ ಕ್ಷೇತ್ರದ ಅಭ್ಯರ್ಥಿ ಚಂದ್ರಶೇಖರ್ ಆಯುಕ್ತರಿಗೆ ದೂರು



**ಚನ್ನಗಿರಿ:** ಚನ್ನಗಿರಿ ಪಟ್ಟಣದ ಹೃದಯ ಭಾಗದಲ್ಲಿ ಸುಮಾರು 4 ಕೋಟಿ ರೂ ವೆಚ್ಚದಲ್ಲಿ ಗುರು ಭವನ ಕಟ್ಟಡದ ಕಾಮಗಾರಿ ನಡೆಯುತ್ತಿದ್ದು ಈ ಕಾಮಗಾರಿ ಸಂಬಂಧಿಸಿದ ದಾಖಲೆಗಳನ್ನು ಸಮರ್ಪಕವಾಗಿ ನೀಡದೇ ಅನಧಿಕೃತವಾದ ಕಟ್ಟಡ ನಿರ್ಮಾಣವಾಗುತ್ತಿದೆ ಎಂದು ಪ್ರಜಾಕೀಯ ಪಕ್ಷದ ಚನ್ನಗಿರಿ ವಿಧಾನಸಭಾ ಕ್ಷೇತ್ರದ ಅಭ್ಯರ್ಥಿಯಾಗಿದ್ದ ಚಂದ್ರಶೇಖರ್ ಸಂಬಂಧಿಸಿದ ಸರಕಾರದ ಪ್ರಧಾನ ಕಾರ್ಯದರ್ಶಿಗಳು ಮತ್ತು ಶಿಕ್ಷಣ ಇಲಾಖೆಯ ಆಯುಕ್ತರಿಗೆ ದೂರನ್ನು ಸಹ ಸಲ್ಲಿಸಿದ್ದಾರೆ.



ಕಳೆದ ಸೆ. 20 ರಂದು ಶಿಕ್ಷಣ ಸಚಿವರಾದ ಮಧು ಬಂಗಾರಪ್ಪ ಮತ್ತು ಶಾಸಕ ಬಸವರಾಜು ಶಿವಗಂಗಾ 4 ಕೋಟಿ ವೆಚ್ಚದ ಈ ಕಟ್ಟಡ ಕಾಮಗಾರಿಗೆ ಗುದ್ದಲಿ ಪೂಜೆಯನ್ನು ನೆರವೇರಿಸಿದ್ದು ಕಾಮಗಾರಿಯೂ ಸಹ ತಡವಾಗದೇ ಆರಂಭಗೊಂಡಿದ್ದು ಈಗಾಗಲೇ ಪಿಲ್ಲರ್‌ಗಳನ್ನು ಸಹ ನಿಲ್ಲಿಸಲಾಗಿದೆ. ಅದರೂ ಸಹ ಯಾವುದೇ ಅನುಮತಿಗಳನ್ನು ಸಹ ಪಡೆಯದೇ ಕಟ್ಟಡ ನಿರ್ಮಾಣಕ್ಕೆ ಮುಂದಾಗಿರುವುದು ಪುರಸಭೆಯ ನಿಯಮಗಳಿಗೆ ವಿರುದ್ಧವಾಗಿದೆ.

ಆದರೆ ಸಾಮಾಜಿಕ ಕಾರ್ಯಕರ್ತರು ನೀಡಿದ ದೂರಿನ್ವಯ ಪಟ್ಟಣದ ಹೃದಯ ಬಾಗದಲ್ಲಿರುವಂತಹ ಸರಕಾರಿ ಹಿರಿಯ ಪ್ರಾಥಮಿಕ ಶಾಲಾ ಅವರಣವು ಅಸೆಸ್‌ಮೆಂಟ್ ನಂ 767/686 ರಲ್ಲಿ 903ಥ 400 ಅಡಿಗಳ ವಿಸ್ತೀರ್ಣವನ್ನು ಹೊಂದಿದ್ದು ಈ ಅವರಣದಲ್ಲಿ ಈಗಾಗಲೇ ಕ್ಷೇತ್ರ ಸಮನ್ವಯಾಧಿಕಾರಿಗಳ ಕಚೇರಿ, ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿ, ಬಾಲಕಿಯರ ಸರಕಾರಿ ಪ್ರೌಢಶಾಲೆ, ಗ್ರಂಥಾಲಯ ಕಟ್ಟಡ, ಜಿ.ಪಂ.ಇಂಜಿನಿಯರಿಂಗ್ ಕಚೇರಿ, ವಡ್ನಾಳ್ ರಾಜಣ್ಣ ರಂಗಮಂದಿರ, ಹಿಂದಿನ ಕಾಲದ ಗುರುಭವನಗಳಿಂದ ತುಂಬಿಕೊಂಡಿತ್ತು. ಆದರೆ ಈ ನೂತನ ಗುರುಭವನ ನಿರ್ಮಾಣಕ್ಕೆ 100 ಅಡಿ ಉದ್ದ ಮತ್ತು 60 ಅಡಿ ಆಗಲ ವಿಸ್ತೀರ್ಣವನ್ನು ಹೊಂದಿದ್ದು ಶಾಲಾ ಅವರಣವನ್ನು ಸುಮಾರು ಅರ್ಧಬಾಗದಷ್ಟು ಈಗಾಗಲೇ ಕಬಳಿಸಿದ್ದು ವಿದ್ಯಾರ್ಥಿನಿಯರು ಶಾಲೆಯ ಸಮಯದಲ್ಲಿ ಯಾವುದೇ ಕ್ರೀಡೆಗಳು ಆಟವಾಡದಂತಹ ಪರಿಸ್ಥಿತಿ ನಿರ್ಮಾಣವಾಗುತ್ತಿದೆ. ಮಾತ್ರವಲ್ಲದೇ ಈಗಾಗಲೇ ಖಾಸಗಿ ಶಾಲೆಗಳ ಹಾವಳಿಯಿಂದಾಗಿ ಸರಕಾರಿ ಶಾಲೆಗಳಿಗೆ ಪ್ರವೇಶವನ್ನು ಪಡೆಯುತ್ತಿರುವವರ ವಿದ್ಯಾರ್ಥಿಗಳ ಸಂಖ್ಯೆ ಈಗಾಗಲೇ ಕ್ಷೀಣಿಸುತ್ತಿದ್ದು ಅಟೋಪಾಟಗಳಿಗೆ ಇಂತಹ ಸಮಸ್ಯೆಗಳು ಉಂಟಾದರೆ ವಿದ್ಯಾರ್ಥಿಗಳು ಸರಕಾರಿ ಶಾಲೆಗಳಲ್ಲಿ ದಾಖಲಾತಿ ಪಡೆಯಲಿದ್ದಾರೆಯೇ ಎನ್ನುವುದು ಮುಖ್ಯ ಪ್ರಶ್ನೆಯಾಗಿದೆ.

ಸರಕಾರದ ನಿಯಮಾವಳಿಯ ಪ್ರಕಾರ ಸರಕಾರದ ಆಸ್ತಿಯಲ್ಲಿ ಹೊಸ ಕಟ್ಟಡವನ್ನು ನಿರ್ಮಾಣ ಮಾಡುವ ಮೊದಲು ನಿವೇಶನವನ್ನು ಭವನದ ಹೆಸರಿಗೆ ಖಾತೆ ಮಾಡಬೇಕಿದೆ. ಪುರಸಭೆಯಿಂದ ಪರವಾನಿಗೆ ಪಡೆಯಬೇಕು. ಕಾನೂನಾತ್ಮಕವಾದ ಈ ಯಾವುದೇ ಕ್ರಮಗಳನ್ನು ಅನುಸರಿಸದೇ ನೇರವಾಗಿ ಕಾಮಗಾರಿಯನ್ನು ಆಕ್ರಮವಾಗಿ ಆರಂಭಿಸಿದ್ದಾರೆ.

# ಭಾರತಕ್ಕೆ ಮಹಿಳೆಯರ ಪಾತ್ರ ಅಪಾರ : ಮಹಾವೀರ್. ಮ. ಕರೆಣ್ಣನವರು

**ದಾವಣಗೆರೆ:** ನಮ್ಮ ರಾಷ್ಟ್ರಕ್ಕೆ ಮಹಿಳೆಯರ ಪಾತ್ರ ದೊಡ್ಡದು ಎಂದು ಮಹಿಳೆಯರ ಮೇಲಿನ ದೌರ್ಜನ್ಯ ತಡೆಕಾಯ್ದೆ ಕುರಿತು ಕಾನೂನು ಅರಿವು ಕಾರ್ಯಕ್ರಮದಲ್ಲಿ ಮಾನ್ಯ ಹಿರಿಯ ಸಿವಿಲ್ ನ್ಯಾಯಾಧೀಶರು, ಗೌರವಾನ್ವಿತ ಮಹಾವೀರ್. ಮ. ಕರೆಣ್ಣನವರು ಹೇಳಿದರು.



ನಗರದ ಮಹಾನಗರ ಪಾಲಿಕೆಯ ಸಭಾಂಗಣದಲ್ಲಿ ಮಂಗಳವಾರ ಮಹಿಳೆಯರ ಮೇಲಿನ ಹಿಂಸಾಚಾರ ನಿರ್ಮೂಲನ ಅಂತರಾಷ್ಟ್ರೀಯ ದಿನದ ಅಂಗವಾಗಿ ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲಿನ ದೌರ್ಜನ್ಯ ತಡೆಕಾಯ್ದೆ ಕುರಿತು ಕಾನೂನು ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಜಾಗತಿನಲ್ಲಿ ಪ್ರತಿ ಮೂರು ಮಹಿಳೆಯಲ್ಲಿ ಒಬ್ಬರು ದೈಹಿಕ ಮತ್ತು ಮಾನಸಿಕ ಸಮಸ್ಯೆಯನ್ನು ಹೆದರಿಸುತ್ತಿದ್ದಾರೆ. ಹಾಗಾಗಿ ಲೈಂಗಿಕ ಕಿರುಕುಳ ಸಮಾಜಕ್ಕೆ ಇದು ಕ್ಯಾನ್ಸರ್ ರೋಗವಾಗಿದೆ ಎಂದರು.

ಕೆಲಸದ ಸ್ಥಳದಲ್ಲಿ ಲೈಂಗಿಕ ಕಿರುಕುಳ ಅಥವಾ ಅನುಚಿತ ವರ್ತನೆಯನ್ನು ಎದುರಿಸುತ್ತಿರುವ ಮಹಿಳೆಯರು (ತಡೆಗಟ್ಟುವಿಕೆ ನಿಷೇಧ ಮತ್ತು ಪರಿಹಾರ) ಕಾಯ್ದೆ 2013ರ ಪ್ರಕಾರ ಅಂತರಿಕ ದೂರು ಸಮಿತಿ ಮತ್ತು ಸ್ಥಳೀಯ ದೂರು ಸಮಿತಿಗಳು ದೂರನ್ನು ಗೌಪ್ಯವಾಗಿ ಪ್ರಕರಣವನ್ನು ಪರಿಶೀಲಿಸಲಾಗುವುದು. ಮಹಿಳೆಯರ ರಕ್ಷಣೆಗಾಗಿ ಶೀ-ಬಾಕ್ಸ್ ಆನ್‌ಲೈನ್ ಪೋಟಲ್ ಮೂಲಕ ದೂರು ದಾಖಲಿಸಬಹುದು ಎಂದು ತಿಳಿಸಿದರು.

ಅಪರಾಧಿ ವ್ಯಕ್ತಿಯನ್ನು ಭಾರತೀಯ ನ್ಯಾಯ ಸಂಹಿತೆ 354 ಮತ್ತು 354 ಸಿ ಅಡಿಯಲ್ಲಿ ಶಿಕ್ಷೆ ವಿಧಿಸಲಾಗುವುದು. ತುರ್ತು ಸೇವೆಗಾಗಿ 181 ಮಹಿಳಾ ಸಹಾಯವಾಣಿಗೆ ಕರೆ ಮಾಡಿ ಎಂದು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಉಪನಿರ್ದೇಶಕ, ಶ್ರೀ ರಾಜಾನಾಯ್ಕ ಕೆ.ಎಸ್. ಮತ್ತು ಜಿಲ್ಲಾ ಸಂಯೋಜಕ, ಜಗದೀಶ್, ಹಾಗೂ ಮಹಾನಗರ ಪಾಲಿಕೆಯ ಸಿಬ್ಬಂದಿಗಳು, ಇದ್ದರು.

## ರಾಮಮಂದಿರ ಧ್ವಜಾರೋಹಣ ಸಮಾರಂಭ: ರಾಜ್ಯದಿಂದ ಅಯೋಧ್ಯೆಗೆ ಅಪಾರ ಪ್ರಮಾಣದ ಹೂವು ರವಾನೆ

**ಬೆಂಗಳೂರು:** ಅಯೋಧ್ಯೆಯಲ್ಲಿ ರಾಮ ಮಂದಿರ ನಿರ್ಮಾಣಕ್ಕೆ ಕರ್ನಾಟಕಗಮನಾರ್ಹ ಕೊಡುಗೆಗಳನ್ನು ನೀಡಿದೆ. ಈಗ ದೇವಾಲಯ ನಿರ್ಮಾಣ ಪೂರ್ಣಗೊಂಡ ಸಂಕೇತವಾಗಿ 22 ಅಡಿ ಎತ್ತರದ ಧಾರ್ಮಿಕ ಧ್ವಜಾರೋಹಣಕ್ಕೆ ತನ್ನ ಬೆಂಬಲವನ್ನು ನೀಡುತ್ತಿದೆ.

ಸಮಾರಂಭಕ್ಕಾಗಿ, ಕಳೆದ ಕೆಲವು ದಿನಗಳಿಂದ ಬೆಂಗಳೂರು ಮತ್ತು ಸುತ್ತಮುತ್ತಲಿನ ಜಿಲ್ಲೆಗಳಿಂದ ಹೆಚ್ಚಿನ ಪ್ರಮಾಣದ ಹೂವುಗಳನ್ನು ರವಾನಿಸಲಾಗಿದೆ.

# ಸಹಸ್ರಾರು ಭಕ್ತರ ಸಮ್ಮುಖದಲ್ಲಿ ಅತ್ಯಂತ ಸಡಗರ, ಸಂಭ್ರಮದಿಂದ ಜರುಗಿದ ಶ್ರೀ ಬೀರಪ್ಪ ದೇವರು, ಶ್ರೀ ವೀರಭದ್ರೇಶ್ವರ ದೇವರ ಗುಗ್ಗಳ

**ಹೊನ್ನಾಳಿ:** ಪಟ್ಟಣದ ದೊಡ್ಡಕೇರಿಯ ಶ್ರೀ ಬೀರಲಿಂಗೇಶ್ವರ ದೇವರ 63 ನೇ ವರ್ಷದ ಕಾರ್ತೀಕೋತ್ಸವದ ಅಂಗವಾಗಿ, ಶ್ರೀ ಬೀರಪ್ಪ ದೇವರು ಹಾಗೂ ಶ್ರೀ ವೀರಭದ್ರೇಶ್ವರ ದೇವರ ಗುಗ್ಗಳ ಮಹೋತ್ಸವ ನ. 25 ರಂದು ಸಹಸ್ರಾರು ಭಕ್ತರ ಸಮ್ಮುಖದಲ್ಲಿ ಅತ್ಯಂತ ಸಡಗರ, ಸಂಭ್ರಮದಿಂದ ಜರುಗಿತು.





ಮಂಗಳವಾರ ನಸುಕಿನಲ್ಲಿಯೇ ಹೊಳೆಪೂಜೆಗೆ ಹೊರಟ ದೇವರ ಉತ್ಸವ ಮೂರ್ತಿಗಳು, ದೇವರ ಸೇವೆಗೆ ಮೀಸಲಿದ್ದ ಸೇವಕರು ತುಂಗಭದ್ರಾ ನದಿಗೆ ತೆರಳಿದರು. ಅಲ್ಲಿ ಅಭಿಷೇಕ, ವಿಶೇಷ ಪೂಜೆಗಳು ನಡೆದ ಬಳಿಕ ದೇವರ ಗಣಮಕ್ಕಳಾದ ಶ್ರೀ ಪ್ರಭುಸ್ವಾಮಿ ಹಾಗೂ ಅಣ್ಣಪ್ಪಸ್ವಾಮಿ ಅವರು ತುಂಗಭದ್ರಾ ನದಿಯಲ್ಲಿ ಇಳಿದು ಸ್ನಾನ ಪೂಜಾ ಕೈಂಕರ್ಯಗಳನ್ನು ನೆರವೇರಿಸಿದರು.

ಈ ಸಂದರ್ಭದಲ್ಲಿ ಬೀರಪ್ಪ ದೇವರಿಗೆ ಪ್ರಿಯವಾದ ಡೊಳ್ಳುಗಳನ್ನು ಬಾರಿಸಲಾಯಿತು. ಡೊಳ್ಳುಗಳ ಶಬ್ಧ ಕಿವಿಗಡಚಿಕ್ಕುತ್ತಿದ್ದಂತೆ ಗಣಮಕ್ಕಳ ಮೇಲೆ ದೇವರ ಆವಾಹನೆಯಾದಂತಾಗಿ ದೇವರ ಗಣಮಕ್ಕಳು ನರ್ತಿಸಲಾರಂಭಿಸಿದರು. ಗಣಮಗ ಪ್ರಭುಸ್ವಾಮಿ ಅವರು ಮುಳ್ಳು ಪಲ್ಲಕ್ಕಿಯ ಮೇಲೆ ಹಾಗೂ ಅಣ್ಣಪ್ಪ ಸ್ವಾಮಿ ಅವರು ಕಬ್ಬಿಣದ ಮೊಳೆಯ ಪಲ್ಲಕ್ಕಿಯ ಮೇಲೆ ಆಸೀನರಾದರು. ಬೀರಪ್ಪ ದೇವರಿಗೆ ಜಯವಾಗಲಿ ಎಂಬ ಜಯಘೋಷ ಮುಗಿಲು ಮುಟ್ಟಿತು. ನಂತರ ಸಾಲು ಸಾಲು ದೇವರುಗಳ ಮೆರವಣಿಗೆ ಹೊರಟಿತು. ಮುತ್ತೈದೆಯರು, ದೇವರ ಬೆತ್ತವನ್ನು ಹೊತ್ತವರು, ಜೋಗಪ್ಪ ಹಾಗೂ ಜೊಗುತಿಯರು ಸಾಲು ಸಾಲಾಗಿ ಮೆರವಣಿಗೆ ಹೊರಟರು. ಈ ಮಧ್ಯೆ ಶಿವ ತಾಂಡವ ನೃತ್ಯ ಕಲಾವಿದರು, ಡೊಳ್ಳುಗಳ ಕಲಾವಿದರು ಅಲ್ಲಲ್ಲಿ ಗುಂಪು ಗುಂಪಾಗಿ ದೇವರ ಐತಿಹ್ಯ ಕುರಿತು ಕಥೆಗಳನ್ನು ಹೇಳುತ್ತಾ ಹೊರಟರು.

ದೇವರುಗಳು ಪೇಟೆ ಬೀದಿಯ ಮೂಲಕ ದುರ್ಗಮ್ಮ ದೇವಸ್ಥಾನ ಮುಂಭಾಗದಲ್ಲಿ ವ್ಯವಸ್ಥೆ ಮಾಡಿದ್ದ ಕೆಂಡದ ಹೊಂಡಕ್ಕೆ ಬಂದವು.

ಹೊಸದುರ್ಗ ಶಾಖಾಮಠದ ಶ್ರೀ ಈಶ್ವರಾನಂದ ಪುರಿ ಸ್ವಾಮೀಜಿ ಹಾಗೂ ಹಿರೇಕಲ್ಮಠದ ಡಾ. ಒಡೆಯರ ಚನ್ನಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿಗಳು ಕೆಂಡ ಹಾಯುವ ಹೊಂಡವನ್ನು ಪೂಜಿಸಿದರು. ನಂತರ ದೇವರ ಗಣಮಗ ಪ್ರಭುಸ್ವಾಮಿ ಅವರು ನಿಗಿ ನಿಗಿ ಕೆಂಡವನ್ನು ತುಳಿಯುವ ಮೂಲಕ ಚಾಲನೆ ನೀಡಿದರು. ಬಳಿಕ ಅಣ್ಣಪ್ಪ ಸ್ವಾಮಿ ಕೆಂಡದ ಮೇಲೆ ಹಾದು ಹೋದರು. ನಂತರ ಗಾಳಿದುರ್ಗಮ್ಮ ದೇವಿ, ಸುಡಗಾಡು ಸಿದ್ದಪ್ಪ ದೇವರು, ಗೋಪೆನಹಳ್ಳಿ ಸಿದ್ದಪ್ಪ, ವೀರಭದ್ರ ದೇವರು ಸೇರಿದಂತೆ ಹಲವಾರು ದೇವರ ಪಲ್ಲಕ್ಕಿ ಹೊತ್ತ ಭಕ್ತರು ಕೆಂಡ ಹಾದು ಹೋದರು. ಬಳಿಕ ಭಕ್ತರಿಗೆ ಕೆಂಡ ಹಾಯಲು ಕಮಿಟಿಯವರು ಅವಕಾಶ ಮಾಡಿಕೊಟ್ಟರು. ನಂತರ ದೇವರ ಪಲ್ಲಕ್ಕಿಗಳನ್ನು ಪಟ್ಟಣದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮೂಲಕ ಕೊಂಡೊಯ್ಯಲಾಯಿತು. ನಂತರ ಸಾವಿರಾರು ಭಕ್ತಾಧಿಗಳಿಗೆ ಪ್ರಸಾದ ವ್ಯವಸ್ಥೆಯನ್ನು ಮಾಡಲಾಗಿತ್ತು.

ರಾಜ್ಯ ಬಯಲು ಸೀಮೆ ಪ್ರದೇಶಾಭಿವೃದ್ಧಿ ನಿಗಮದ ಅಧ್ಯಕ್ಷ ಎಚ್.ಬಿ. ಮಂಜಪ್ಪ ಅವರು ಕೆಂಡ ತುಳಿದು ಭಕ್ತಿ ಸಮರ್ಪಿಸಿದ್ದು ವಿಶೇಷವಾಗಿತ್ತು.

ಈ ಉತ್ಸವದಲ್ಲಿ ಯಜಮಾನ್ ಎಚ್.ಬಿ. ಗಿಡ್ಡಪ್ಪ, ತೆಂಗಿನಮರದ ಮಾದಪ್ಪ, ಬುದ್ಧಿವಂತರ ನರಸಿಂಹಪ್ಪ, ಗೌಡ್ರು ಗಾಳೇಶಪ್ಪ, ಎಚ್.ಡಿ. ವಿಜೇಂದ್ರಪ್ಪ, ಎಚ್.ಬಿ. ಅಣ್ಣಪ್ಪ, ಸತ್ತಿಗೆ ಮಂಜಪ್ಪ, ಮಾಜಿ ಸೈನಿಕ ಎಂ. ವಾಸಪ್ಪ, ಸೊರಟೂರು ಗಣೇಶ್, ಕಾಟ್ಯಾ ಕುಮಾರ್, ಸತ್ತಿಗೆ ಲೋಕೇಶ್, ಬಿ.ಕೆ. ಮಾದಪ್ಪ, ಎನ್.ಕೆ. ಆಂಜನೇಯ, ಬಿಸಾಟಿ ನಾಗರಾಜಪ್ಪ, ಇಟ್ಟಿಗೆ ಬಸವರಾಜಪ್ಪ, ಕವಳಿ ಮಾದಪ್ಪ ಹಾಜರಿದ್ದರು.

ಇಂದಿನಿಂದ ಮೂರು ದಿನಗಳ ಕಾಲ ಕುಸ್ತಿ ಪಂದ್ಯಾವಳಿ :– ಕಾರ್ತೀಕೋತ್ಸವದ ಅಂಗವಾಗಿ ಪಟ್ಟಣದ ಖಾಸಗಿ ಬಸ್ ನಿಲ್ದಾಣದ ಪಕ್ಕದ ಮೈದಾನದಲ್ಲಿ ನ. 26 ರಿಂದ ನ. 28 ವರೆಗೆ ಮೂರು ದಿನಗಳ ಕಾಲ ಬಯಲು ಖಾಟಾ ಜಂಗಿ ಕುಸ್ತಿಗಳನ್ನು ಏರ್ಪಡಿಸಲಾಗಿದೆ. ವಿಶೇಷವಾಗಿ ಈ ಬಾರಿ ಮಹಿಳಾ ಕುಸ್ತಿಪಟುಗಳು ಭಾಗವಹಿಸಲಿದ್ದಾರೆ. ಹೊರ ರಾಜ್ಯಗಳಿಂದ ಬಂದಂತಹ ಕುಸ್ತಿಪಟುಗಳಿಗೆ ಮೂರು ದಿನಗಳ ಕಾಲ ಊಟ ವಸತಿ ವ್ಯವಸ್ಥೆಯನ್ನು ಮಾಡಲಾಗಿದೆ ಎಂದು ಕುಸ್ತಿ ಕಮಿಟಿ ಅಧ್ಯಕ್ಷರಾದ ಎಚ್.ಬಿ. ಅಣ್ಣಪ್ಪ ತಿಳಿಸಿದರು. ಕುಸ್ತಿ ಕಮಿಟಿಯ ಗೌರವಾಧ್ಯಕ್ಷರಾದ ಎನ್. ಕೆ. ಆಂಜನೇಯ, ಕಾಳಿಂಗಪ್ಪ, ಮುಖಂಡರಾದ ಬಿಸಾಟಿ ನಾಗರಾಜಪ್ಪ, ಇಟ್ಟಿಗೆ ಬಸವರಾಜಪ್ಪ, ಕವಳಿ ಮಾದಪ್ಪ ಹಾಜರಿದ್ದರು.

## ರಾಶಿ ಭವಿಷ್ಯ

### ಮೇಷ ರಾಶಿ

ಅನಂತ ಜೀವನದ ಉತ್ಕೃಷ್ಟ ವೈಭವವನ್ನು ಆನಂದಿಸಲು ನಿಮ್ಮ ಜೀವನವನ್ನು ಹೆಚ್ಚು ಭವ್ಯಗೊಳಿಸಿ. ಚಿಂತೆಯ ಅನುಪಸ್ಥಿತಿ ಈ ದಿಕ್ಕಿನಲ್ಲಿ ಮೊದಲ ಹೆಜ್ಜೆ. ಯೋಜಿತವಲ್ಲದ ಮೂಲಗಳಿಂದ ಹಣದ ಲಾಭ ನಿಮ್ಮ ದಿನವನ್ನು ಬೆಳಗಿಸುತ್ತದೆ. ಹೆಂಡತಿ ನಿಮ್ಮ ಜೀವನವನ್ನು ಬದಲಾಯಿಸಲು ಸಹಾಯ ಮಾಡುತ್ತಾಳೆ.

### ವೃಷಭ ರಾಶಿ

ಆಶಾವಾದಿಗಳಾಗಿರಿ ಮತ್ತು ಜೀವನದ ಉಜ್ವಲ ಬದಿಯನ್ನು ನೋಡಿ. ನಿಮ್ಮ ಆತ್ಮವಿಶ್ವಾಸಭರಿತ ನಿರೀಕ್ಷೆಗಳು ನಿಮ್ಮ ಭರವಸೆಗಳು ಮತ್ತು ಆಸೆಗಳನ್ನು ಸಾಕ್ಷಾತ್ಕಾರಗೊಳಿಸಲು ಸಹಾಯ ಮಾಡುತ್ತವೆ. ಇಂದು ನೀವು ಸ್ನೇಹಿತರೊಂದಿಗೆ ಪಾರ್ಟಿಯಲ್ಲಿ ಸಾಕಷ್ಟು ಹಣವನ್ನು ಖರ್ಚು ಮಾಡಬಹುದು ಆದರೆ ಇದರ ಹೊರತಾಗಿಯೂ ನಿಮ್ಮ ಆರ್ಥಿಕ ಭಾಗವು ಬಲವಾಗಿರುತ್ತದೆ ನಿಮ್ಮ ಕುಟುಂಬದ ಸದಸ್ಯರು ಕಡ್ಡಿಯನ್ನು ಗುಡ್ಡ ಮಾಡುವ ಸಾಧ್ಯತೆಯಿದೆ.

### ಮಿಥುನ ರಾಶಿ

ನೀವು ಅತಿಯಾದ ಒತ್ತಡವನ್ನು ಅನುಭವಿಸುತ್ತಿದ್ದೀರೆಂದೆನಿಸಿದರೆ – ಮಕ್ಕಳೊಂದಿಗೆ ಹೆಚ್ಚು ಸಮಯ ಕಳೆಯಿರಿ. ಅವರ ಬೆಚ್ಚಗಿನ ಅಪ್ಪುಗೆ / ಮುದ್ದಾಡುವಿಕೆ ಅಥವಾ ಮುಗ್ಧ ಮುಗುಳ್ನಗೆಯೂ ನಿಮ್ಮ ಸಮಸ್ಯೆಗಳನ್ನು ಮಾಯವಾಗಿಸಬಲ್ಲದು. ಯಾವುದೇ ಅನುಭವದ ವ್ಯಕ್ತಿಯ ಸಲಹೆ ಇಲ್ಲದೆ, ನಿಮಗೆ ಆರ್ಥಿಕ ನಷ್ಟವಾಗುವ ಯಾವುದೇ ಕೆಲಸವನ್ನು ಮಾಡಬೇಡಿ. ಮಕ್ಕಳ ಅವರ ಸಾಧನೆಗಳಿಂದ ನೀವು ಹೆಮ್ಮೆ ಪಡುವಂತೆ ಮಾಡಬಹುದು. ನಿಮ್ಮ ಸಂಗಾತಿಯ ಕೆಟ್ಟ ಆರೋಗ್ಯದಿಂದಾಗಿ ಇಂದು ಪ್ರಣಯಕ್ಕೆ ಧಕ್ಕೆಯಾಗುತ್ತದೆ.

### ಕರ್ಕ ರಾಶಿ

ದುಃಖಿತರಾಗಿ ಮತ್ತು ಖಿನ್ನರಾಗಿರಬೇಡಿ. ಆರ್ಥಿಕ ಭಾಗವು ಬಲಗೊಳ್ಳುವ ಪೂರ್ಣ ಸಾಧ್ಯತೆ ಇದೆ.ನೀವು ಯಾವುದೇ ವ್ಯಕ್ತಿಗೆ ಸಾಲ ನೀಡಿದ್ದರೆ, ಇಂದು ನೀವು ಆ ಹಣವನ್ನು ಮರಳಿ ಪಡೆಯುವ ನಿರೀಕ್ಷೆಯಿದೆ ಕೌಟುಂಬಿಕ ಕಾರ್ಯಗಳು ಮತ್ತು ಪ್ರಮುಖ ಸಮಾರಂಭಗಳಿಗೆ ಪವಿತ್ರವಾದ ದಿನ. ಪ್ರೀತಿಯ ಸಂತೋಷವನ್ನು ಅನುಭವಿಸಬಹುದು. ಕೆಲಸದಲ್ಲಿ ನಿಮ್ಮ ತಂಡದ ಅತ್ಯಂತ ಕಿರಿಕಿರಿಯುಂಟುಮಾಡುವ ವ್ಯಕ್ತಿ ಇಂದು ಇದ್ದಕ್ಕಿದ್ದಂತೆ ಬೌದ್ಧಿಕವಾಗಿ ವರ್ತಿಸಬಹುದು.

### ಸಿಂಹ ರಾಶಿ

ಆರೋಗ್ಯಕ್ಕೆ ಸಂಬಂಧಿಸಿದಂತೆ ಈ ಅವಧಿ ಮಂದವಾಗಿರುವುದರಿಂದ ನೀವು ತಿನ್ನುವುದರ ಬಗೆಗೆ ಜಾಗರೂಕರಾಗಿರಿ. ನಿಮ್ಮ ಜೀವನ ಸಂಗಾತಿಯೊಂದಿಗೆ ಸೇರಿ ಇಂದು ನೀವು ಭವಿಷ್ಯಕ್ಕೆ ಯಾವುದೇ ಆರ್ಥಿಕ ಯೋಜನೆಯನ್ನು ಮಾಡಬಹುದು ಮತ್ತು ಈ ಯೋಜನೆ ಯಶಸ್ವಿಯಾಗಲಿದೆ ಎಂದು ಭರವಸೆ ಇದೆ. ಇಂದು ನೀವು ಇತರರ ಅಗತ್ಯಗಳಿಗೆ ಗಮನ ನೀಡಬೇಕಾದರೂ ಮಕ್ಕಳೊಂದಿಗೆ ಅತೀ ಉದಾರತೆ ತೋರಿಸುವುದು ತೊಂದರೆಗೆ ಕಾರಣವಾಗುತ್ತದೆ.

### ಕನ್ಯಾ ರಾಶಿ

ಸಂತೋಷದ ದಿನಕ್ಕಾಗಿ ಮಾನಸಿಕ ಒತ್ತಡವನ್ನು ತಪ್ಪಿಸಿ. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಇಂದು ಉತ್ತಮ ಬೆಲೆಗೆ ಮಾರಾಟ ಮಾಡಬಹುದು, ಅದು ನಿಮಗೆ ಲಾಭದಾಯಕವಾಗಲಿದೆ. ಹಳೆಯ ಸಂಪರ್ಕಗಳು ಮತ್ತು ಸ್ನೇಹಿತರು ಸಹಾಯ ಮಾಡುತ್ತಾರೆ ಮದುವೆಯಾಗುವವರು ತಮ್ಮ ಪ್ರೇಮಿ ಸಂತೋಷದ ಮೂಲವೆಂದು ಕಂಡುಕೊಳ್ಳುತ್ತಾರೆ. ಕೆಲಸ ಬದಲಾಯಿಸುವುದು ಸಹಾಯ ಮಾಡುತ್ತದೆ.

### ತುಲಾ ರಾಶಿ

ಒತ್ತಡದ ದಿನದ ಹೊರತಾಗಿಯೂ ಆರೋಗ್ಯ ಪರಿಪೂರ್ಣವಾಗಿರುತ್ತದೆ. ನೀವು ಅತ್ಯಂತ ಅನಿರೀಕ್ಷಿತ ಮೂಲಗಳಿಂದ ಗಳಿಕೆಯ ಸಾಧ್ಯತೆಯನ್ನು ಹೊಂದಿದ್ದೀರಿ. ಥಿಯೇಟರ್ ಅಥವಾ ನಿಮ್ಮ ಸಂಗಾತಿಯ ಜೊತೆಗಿನ ಊಟ ನಿಮ್ಮನ್ನು ಒಂದು ಶಾಂತವಾದ ಮತ್ತು ಅದ್ಭುತ ಲಹರಿಯಲ್ಲಿರಿಸುವಂತೆ ತೋರುತ್ತದೆ. ಪ್ರಣಯ ಮತ್ತು ಸಾಮಾಜಿಕವಾಗಿ ಬೆರೆಯುವುದು ಬಾಕಿಯಿರುವ ಕೆಲಸಗಳ ಹೊರತಾಗಿಯೂ ನಿಮ್ಮ ಮನಸ್ಸಿನ ಮೇಲೆ ಪ್ರಭಾವ ಬೀರುತ್ತವೆ.

### ವೃಶ್ಚಿಕ ರಾಶಿ

ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಇಂದು ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿರಿಸಲು ನಿಮ್ಮ ಜೀವನಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ. ನಿಮ್ಮ ತಾಯಿಯ ಬದಿಯಿಂದ ಇಂದು ಹಣಕಾಸಿನ ಲಾಭವನ್ನು ಪಡೆಯುವ ಪೂರ್ಣ ಸಾಧ್ಯತೆ ಇದೆ.ನಿಮ್ಮ ಮಾಮ ಅಥವಾ ತಾತ ನಿಮಗೆ ಆರ್ಥಿಕ ಬೆಂಬಲ ಮಾಡಬಹುದು.

### ಧನು ರಾಶಿ

ನೀವು ಹೇರಳ ಶಕ್ತಿಯನ್ನು ಹೊಂದಿರುತ್ತೀರಿ – ಆದರೆ ಕೆಲಸದ ಒತ್ತಡ ನಿಮ್ಮನ್ನು ಉದ್ವಿಗ್ನಗೊಳಿಸುವಂತೆ ತೋರುತ್ತದೆ. ಇಂದು ನಿಮ್ಮ ಹಣವನ್ನು ಅನೇಕ ವಿಷಯಗಳಿಗೆ ಖರ್ಚು ಮಾಡಬಹುದು, ನೀವು ಇಂದು ಉತ್ತಮ ಬಜೆಟ್ ಅನ್ನು ಯೋಜಿಸಬೇಕಾಗಿದೆ, ಇದು ನಿಮ್ಮ ಅನೇಕ ಸಮಸ್ಯೆಗಳನ್ನು ತೆಗೆದುಹಾಕುತ್ತದೆ. ಕುಟುಂಬದವರು, ಮಕ್ಕಳು ಮತ್ತು ಸ್ನೇಹಿತರೊಂದಿಗೆ ಕಳೆದ ಸಮಯ ನಿಮ್ಮ ಚೈತನ್ಯವನ್ನು ಮರಳಿ ನೀಡಲು ಮುಕ್ತವಾಗಿರುತ್ತದೆ.

### ಮಕರ ರಾಶಿ

ವಿಶ್ರಾಂತಿ ತೆಗೆದುಕೊಳ್ಳಿ ಮತ್ತು ಕೆಲಸದ ನಡುವೆ ಸಾಧ್ಯವಾದಷ್ಟೂ ವಿಶ್ರಾಂತಿ ಪಡೆಯಲು ಪ್ರಯತ್ನಿಸಿ. ಉದ್ಯೋಗಕ್ಕೆ ಸಂಬಂಧಿಸಿರುವ ಜನರಿಗೆ ಇಂದು ಹಣದ ಬಹಳಷ್ಟು ಅಗತ್ಯವಿರುತ್ತದೆ ಆದರೆ ಹಿಂದಿನ ದಿನಗಳಲ್ಲಿ ಮಾಡಲಾಗಿರುವ ಅನಗತ್ಯ ಖರ್ಚುಗಳ ಕಾರಣದಿಂದಾಗಿ ಅವರ ಹತ್ತಿರ ಸಾಕಷ್ಟು ಹಣ ಇರುವುದಿಲ್ಲ. ನಿಮ್ಮ ಹಾಸ್ಯದ ಪ್ರಕೃತಿ ನಿಮ್ಮ ಸುತ್ತಮುತ್ತಲಿನ ಪರಿಸರವನ್ನು ಬೆಳಗಿಸುತ್ತದೆ.

### ಕುಂಭ ರಾಶಿ

ಅಸಾಧ್ಯವಾದ ಅನಗತ್ಯ ಚಿಂತನೆಯಲ್ಲಿ ನಿಮ್ಮ ಶಕ್ತಿ ವ್ಯರ್ಥ ಮಾಡುವ ಬದಲು ಅದನ್ನು ಸರಿಯಾದ ದಿಕ್ಕಿನಲ್ಲಿ ಬಳಸಿ. ವಿಳಂಬಿತ ಪಾವತಿಗಳನ್ನು ಮಾಡುತ್ತಿದ್ದ ಹಾಗೆ ಹಣದ ಪರಿಸ್ಥಿತಿ ಸುಧಾರಿಸುತ್ತದೆ. ಧಾರ್ಮಿಕ ಸ್ಥಳಕ್ಕೆ ಅಥವಾ ಸಂಬಂಧಿಗಳ ಭೇಟಿ ಸಾಧ್ಯವಿದೆ. ಪ್ರೀತಿಯ ಶಕ್ತಿ ನಿಮಗೆ ಪ್ರೀತಿಸಲು ಒಂದು ಕಾರಣ ನೀಡುತ್ತದೆ. ಇಂದು ನಿಮಗೆಲ್ಲರಿಗೂ ತುಂಬ ಸಕ್ರಿಯವಾದ ಮತ್ತು ಹೆಚ್ಚು ಸಾಮಾಜಿಕವಾದ ಜನರು ನಿಮ್ಮಿಂದ ಸಲಹೆ ಪಡೆಯಬಯಸುತ್ತಾರೆ ಮತ್ತು ನೀವು ಏನೇ ಹೇಳಿದರೂ ಅದನ್ನು ಒಪ್ಪುತ್ತಾರೆ.

### ಮೀನ ರಾಶಿ

ಬೆಂಬಲ ನೀಡುವ ಸ್ನೇಹಿತರು ನಿಮ್ಮನ್ನು ಸಂತೋಷವಾಗಿರಿಸುತ್ತಾರೆ. ಆರ್ಥಿಕ ದೃಷ್ಟಿಯಿಂದ ಇಂದಿನ ದಿನ ಮಿಶ್ರವಾಗಿ ಉಳಿಯುತ್ತದೆ. ಇಂದು ನೀವು ಹಣದ ಪ್ರಯೋಜನವನ್ನು ಪಡೆಯಬಹುದು ಆದರೆ ಇದಕ್ಕಾಗಿ ನೀವು ಕಠಿಣ ಪರಿಶ್ರಮ ಮಾಡಬೇಕಾಗುತ್ತದೆ. ಸಂಗಾತಿಯು ಸಂತೋಷ ನೀಡಲು ಪ್ರಯತ್ನ ಮಾಡಿದಾಗಿನ ಪೂರ್ಣ ಸಂತೋಷದ ಒಂದು ದಿನ. ನಿಮ್ಮ ಪ್ರೇಮಮಯ ವೀಕ್ಷಣೆಗಳನ್ನು ಅಭಿವ್ಯಕ್ತಿಗೊಳಿಸಿ. ಕೆಲಸದಲ್ಲಿ ನಿಮ್ಮ ಮೇಲಿನವರು ಇಂದು ದೇವದೂತರಂತೆ ಕೆಲಸ ಮಾಡುವಂತೆ ಕಾಣುತ್ತದೆ. ಕಾರ್ಯನಿರತ ದಿನಚರಿಯ ಹೊರತಾಗಿಯೂ ನೀವು ನಿಮಗಾಗಿ ಸಮಯವನ್ನು ತೆಗೆಯಲು ಸಾಧ್ಯವಾಗುತ್ತದೆ.

## ಹೊಳಲ್ಕೆರೆಯಲ್ಲಿ ಪ್ರಥಮ ಜಿಲ್ಲಾ ಮಕ್ಕಳ ಸಾಹಿತ್ಯ ಸಮ್ಮೇಳನಕ್ಕೆ ಚಿಂತನೆ



**ಚಿತ್ರದುರ್ಗ :** ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಮತ್ತು ಹೊಳಲ್ಕೆರೆ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಪ್ರಥಮ ಮಕ್ಕಳ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ ಆಯೋಜಿಸಲು ಚಿಂತನೆ ನಡೆಸಲಾಗಿದೆ. ಈ ಬಗ್ಗೆ ಕಸಾಪ ಪದಾಧಿಕಾರಿಗಳ ತಂಡ ಸೋಮವಾರ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿ.ಪಂ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಡಾ.ಆಕಾಶ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಮತ್ತು ಡಿಡಿಪಿಐ ಎಂ.ಆರ್. ಮಂಜುನಾಥ್ ರವರನ್ನು ಭೇಟಿ ನೀಡಿ ಸಲಹೆ ಮತ್ತು ಸಹಕಾರ ನೀಡುವಂತೆ ವಿನಂತಿಸಲಾಯಿತು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಇದು ಪ್ರಥಮ ವಿಶೇಷ ಪ್ರಯತ್ನವಾಗಿದೆ.

ಡಿಸೆಂಬರ್ ಕೊನೆಯ ಅಥವ ಜನವರಿ ತಿಂಗಳ ಮೊದಲ ವಾರದಲ್ಲಿ ಈ ಸಮ್ಮೇಳನವನ್ನು ಆಯೋಜಿಸಲು ಸಿದ್ದತೆಗಳನ್ನು ಕೈಗೊಳ್ಳಲಾಗಿದೆ. ಇಲ್ಲಿಯವರೆಗೆ ಸಮ್ಮೇಳನಗಳು ಕೇವಲ ಹಿರಿಯರು, ಶಿಕ್ಷಕರು, ಕವಿಗಳು ಮತ್ತು ಚಿಂತಕರಿಗೆ ಸೀಮಿತವಾಗಿದ್ದವು. ಆದರೆ ಇಂದಿನ ವಿದ್ಯಾರ್ಥಿಗಳು ಕನ್ನಡದ ಕಲಿಕೆ ಮತ್ತು ಸಾಹಿತ್ಯದಲ್ಲಿ ಹೆಚ್ಚು ಗಮನ ಹರಿಸುತ್ತಿಲ್ಲ. ಹೀಗಾಗಿ ಪ್ರಥಮ ಮಕ್ಕಳ ಸಮ್ಮೇಳನಕ್ಕೆ ಕಸಾಪ ಮುಂದಾಗಿದೆ.

ಮುಂದಿನ ಪೀಳಿಗೆಯ ಮಕ್ಕಳು ಮತ್ತು ಯುವಕರನ್ನು ಓದು,ಬರಹ,ಸಾಹಿತ್ಯದ ಕಡೆಗೆ ಸೆಳೆಯುವ ಕಾರ್ಯ ಇತ್ತೀಚಿನ ದಿನಗಳ ಪ್ರಥಮ ಆದ್ಯತೆಯಾಗಿದೆ. ಮೊಬೈಲ್‌ಗೆ ಸೀಮಿತವಾಗಿರುವ ಮಕ್ಕಳನ್ನು ಸಾಹಿತ್ಯ, ಕಲೆ, ಸಂಗೀತ, ಕೋಲಾಟ ಸೇರಿದಂತೆ ನಾನಾ ಜನಪದ ಕ್ರೀಡೆಗಳ ಕಡೆಗೆ ಗಮನ ಹರಿಸುವಂತೆ ಮಾಡುವ ಉದ್ದೇಶವನ್ನು ಸಾಹಿತ್ಯ ಸಮ್ಮೇಳನ ಹೊಂದಿದೆ. ಈ ಹಿನ್ನೆಲೆಯಲ್ಲಿ ಹೊಳಲ್ಕೆರೆಯಲ್ಲಿ ಸಮ್ಮೇಳನವನ್ನು ಆಯೋಜಿಸಲಾಗುವುದು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಕೆ.ಎಂ.ಶಿವಸ್ವಾಮಿ, ಹೊಳಲ್ಕೆರೆ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಎಂ. ಶಿವಮೂರ್ತಿ, ಜಿಲ್ಲಾ ಕಾರ್ಯದರ್ಶಿ ವಿ.ಶ್ರೀನಿವಾಸ ಮಳಲಿ, ವಕೀಲ ಪ್ರತಾಪ್ ಜೋಗಿ, ಪದಾಧಿಕಾರಿಗಳಾದ ಹನುಮಂತನಾಯ್ಕ, ಬಿ.ಜಿ.ಹಳ್ಳಿ ವೆಂಕಟೇಶ್, ಜಿ.ಎ.ದೇವರಾಜಯ್ಯ, ಲಕ್ಷ್ಮೀಪತಿ ಮತ್ತಿತರರ ತಂಡ ಅಧಿಕಾರಿಗಳನ್ನು ಭೇಟಿ ಮಾಡಿ ಸಹಕಾರ ಕೋರಲಾಯಿತು.

ಜಿಲ್ಲಾ ಮಟ್ಟದ ಅಧಿಕಾರಿಗಳು ಸಮ್ಮೇಳನ ಆಯೋಜನೆಗೆ ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ. ಶೀಘ್ರದಲ್ಲಿ ಇದಕ್ಕೆ ಸಂಬಂಧಿಸಿದ ಸಭೆಗಳನ್ನು ಆಯೋಜಿಸಲಾಗುವುದು ಎಂದು ಕಸಾಪ ಜಿಲ್ಲಾಧ್ಯಕ್ಷ ಕೆ.ಎಂ.ಶಿವಸ್ವಾಮಿ ತಿಳಿಸಿದ್ದಾರೆ.

## ಕನ್ನಡ ರತ್ನಕೋಶದ ಹೇಮಣ್ಣ ಮೇಷ್ಟ್ರು ನಿಧನ

ಶ್ರೀ ತರಳಬಾಳು ಜಗದ್ಗುರು ವಿದ್ಯಾಸಂಸ್ಥೆಯ ವಿಶ್ರಾಂತ ಕನ್ನಡ ಅಧ್ಯಾಪಕ ಎಸ್ ಹೇಮಣ್ಣ (75) ಇಂದು ಮಧ್ಯಾಹ್ನ ವಯೋ ಸಹಜ ಕಾಯಿಲೆಯಿಂದ ನಿಧನರಾಗಿದ್ದಾರೆ.

ಈಗಿನ ಕೊಟ್ಟೂರು ತಾಲ್ಲೂಕಿನ ತೂಲಹಳ್ಳಿ ಗ್ರಾಮದವರಾದ ಇವರು ಸಿರಿಗೆರೆಯಲ್ಲಿ ವಿದ್ಯಾಭ್ಯಾಸ ಮಾಡಿದವರು. ಶ್ರೀ ಶಿವಕುಮಾರ ಶಿವಾಚಾರ್ಯ ಮಹಾಸ್ವಾಮಿಗಳ ಕೃಪೆಯಿಂದ ಅಸಗೋಡು, ಬಾಡ, ಬೀರೂರು ಪ್ರೌಢಶಾಲೆಗಳಲ್ಲಿ ಕನ್ನಡ ಅಧ್ಯಾಪಕರಾಗಿ, ಚಿತ್ರಹಳ್ಳಿ ಪ್ರೌಢಶಾಲೆಯಲ್ಲಿ ಮುಖ್ಯೋಪಾಧ್ಯಾಯರಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದರು.

ನಾನು ತೂಲಹಳ್ಳಿಯ ಶ್ರೀ ತರಳಬಾಳು ಸಿದ್ದೇಶ್ವರ ಪ್ರೌಢಶಾಲೆಯಲ್ಲಿ ಕಾರ್ಯನಿರ್ವಹಿಸುವಾಗ ಶಾಲಾ ಅಭಿವೃದ್ಧಿಗೆ ತುಂಬಾ ಸ್ಪಂದಿಸುತ್ತಿದ್ದರು. ಶಾಲಾ ಗ್ರಂಥಾಲಯಕ್ಕೆ ಉತ್ತಮ ಗುಣಮಟ್ಟದ ನಾಲ್ಕುಅಲ್ಮೆರಗಳನ್ನು ನೀಡುವುದರ ಮೂಲಕ ಮಕ್ಕಳ ವಿದ್ಯಾಭ್ಯಾಸಕ್ಕೆ ಪ್ರೋತ್ಸಾಹಿಸುತ್ತಿದ್ದರು. ಗ್ರಾಮದ ಯುವ ಪೀಳಿಗೆಗೆ 'ವಿಶ್ವಬಂಧು ಮರುಳಸಿದ್ಧ' ಮತ್ತು 'ತರಳಬಾಳು ಗುರುಪರಂಪರೆ" ಬಗ್ಗೆ ಅರಿವು ಮೂಡಿಸಲು

ಕನ್ನಡ ಸಾಹಿತ್ಯ ಪರಿಷತ್ತಿಗೆ ತಮ್ಮ ತಂದೆ ತಾಯಿಯ ಹೆಸರಿನಲ್ಲಿ ದತ್ತಿ ನಿಧಿಯನ್ನು ನೀಡಿದ್ದರು. ಪ್ರತಿವರ್ಷ ಇದೇ ಶಾಲೆಯಲ್ಲಿ ಉಪನ್ಯಾಸ ಏರ್ಪಡಿಸುತ್ತಿದ್ದರು.

ಉಪನ್ಯಾಸ ನೀಡಲು ಸ್ವತಃ ಶ್ರೇಷ್ಠ ಕನ್ನಡ ಕವಿಗಳನ್ನು, ವಿದ್ವಾಂಸರನ್ನು ಕರೆತರುವುದಲ್ಲದೆ, ಎಲ್ಲಾ ವಿದ್ಯಾರ್ಥಿಗಳಿಗೆ ದಾಸೋಹದ ವ್ಯವಸ್ಥೆ ಮಾಡುತ್ತಿದ್ದರು. ಶಾಲೆಯ ವಿದ್ಯಾರ್ಥಿಗಳಿಗೆ ಐದು ನೂರಾರಕ್ಕೂ ಹೆಚ್ಚು ಕನ್ನಡ ರತ್ನಕೋಶಗಳನ್ನು ಉಚಿತವಾಗಿ ಹಂಚಿದ್ದು ಅವರ ಕನ್ನಡ ಪ್ರೇಮಕ್ಕೆ ಸಾಕ್ಷಿಯಾಗಿದೆ. ಹಾಗಾಗಿ ಈ ಅವಧಿಯಲ್ಲಿ ಪ್ರೌಢಶಾಲೆಯಲ್ಲಿ ಓದಿದ ವಿದ್ಯಾರ್ಥಿಗಳ ಪ್ರತಿ ಮನೆಯಲ್ಲೂ ಇಂದಿಗೂ ಕನ್ನಡ ರತ್ನಕೋಶಗಳನ್ನು ನೋಡಬಹುದು. ಆ ಎಲ್ಲಾ ವಿದ್ಯಾರ್ಥಿಗಳು ಹೇಮಣ್ಣ ಮೇಷ್ಟ್ರ ಕೊಡುಗೆಯನ್ನು ಸ್ಮರಿಸುತ್ತಾರೆ.

ಬಿಸಿಲು ಸೀಮೆಯ ಆ ಊರಿನ ಶಾಲಾ ಆವರಣದಲ್ಲಿ ಗಿಡಮರಗಳನ್ನು ಬೆಳೆಸಲು ನೀರಿನ ಪೈಪ್, ಹೂವಿನ ಗಿಡಗಳನ್ನು ಸಹ ತಂದುಕೊಟ್ಟಿದ್ದರು. ಅಂದು ಬೆಳೆಸಿದ ಗಿಡಗಳು ಇಂದು ದೊಡ್ಡ ದೊಡ್ಡ ಮರಗಳಾಗಿ ಶಾಲಾ ಆವರಣ ಸುಂದರವಾಗಿ ಕಾಣಲು ಹೇಮಣ್ಣ ಮೇಷ್ಟ್ರು ಕಾರಣರಾಗಿದ್ದಾರೆ. ಈ ಸಂದರ್ಭದಲ್ಲಿ ಅವರ ಅಳಿಯರಾದ ಮಾಲಿನ್ಯ ನಿಯಂತ್ರಣ ಮಂಡಳಿಯ ಕೊಟ್ರೇಶ್ ಅವರನ್ನು ಸಹ ನೆನಪಿಸಿಕೊಳ್ಳಬೇಕು.

ದಾವಣಗೆರೆ ರೋಟರಿ ಕ್ಲಬ್ ಮತ್ತು ನಿವೃತ್ತ ನೌಕರರ ಸಂಘದ ಪದಾಧಿಕಾರಿಯಾಗಿಯೂ ಸೇವೆ ಸಲ್ಲಿಸಿದ್ದರು.

ಹೇಮಣ್ಣ ಮೇಷ್ಟ್ರು ನಿಧನದಿಂದ ಒಬ್ಬ ಸಹೃದಯ ಹಿರಿಯ ಜೀವಿಯನ್ನು ಕಳೆದುಕೊಂಡಂತಾಗಿದೆ. ಅವರ ಅಗಲಿಕೆಯ ದುಃಖವನ್ನು ಸಹಿಸಿಕೊಳ್ಳುವ ಶಕ್ತಿಯನ್ನು ಅವರ ಮಗ ಮತ್ತು ಮಗಳು ಹಾಗೂ ಬಂಧುಗಳಿಗೆ ಭಗವಂತ ನೀಡಲಿ ಎಂದು ಪ್ರಾರ್ಥಿಸುವೆ.

ಸಾವಿನಲ್ಲೂ ಸಾರ್ಥಕತೆ:

ಹೇಮಣ್ಣ ಮೇಷ್ಟ್ರ ಪಾರ್ಥಿವ ಶರೀರವನ್ನು ದಾವಣಗೆರೆ ಎಸ್ ಎಸ್ ಆಸ್ಪತ್ರೆಗೆ ದಾನ ಮಾಡುವುದರ ಮೂಲಕ ಸಾವಿನಲ್ಲೂ ಸಾರ್ಥಕತೆ ಪಡೆದಿದ್ದಾರೆ.

–ನಾಗರಾಜ ಸಿರಿಗೆರೆ

## ಶ್ರೀ ಹರಕೆರೆ ಕಾಳಿ ದೀಪೋತ್ಸವ ಕಾರ್ಯಕ್ರಮ

**ಶಿವಮೊಗ್ಗ :–** ಗಾಂಧಿ ಬಜಾರ್ ನ ಶ್ರೀ ಹರಕೆರೆ ಕಾಳಿಕಾಂಬ ದೇವಸ್ಥಾನ ಸಮಿತಿಯಿಂದ ನ. 26ರ ನಾಳೆ ಕಡೆಯ ಕಾರ್ತಿಕ ದೀಪೋತ್ಸವದ ನಿಮಿತ್ತ ಶ್ರೀ ಕಾಳಿಕಾಂಬ ದೇವಿಗೆ ವಿಶೇಷ ಪೂಜಾ ಅಲಂಕಾರ ಹಾಗೂ ಸಂಜೆ 6ಗಂಟೆಗೆ ದೇವಿಯ ಸನ್ನಿಧಿಯಲ್ಲಿ ದೀಪಗಳನ್ನು ಎಲ್ಲಾ ಭಕ್ತಾದಿ ಗಳಿಂದ ಬೆಳಗಿಸುವ ದೀಪೋತ್ಸವ ವನ್ನು ಹಮ್ಮಿಕೊಳ್ಳಲಾಗಿದೆ.

ದೀಪೋತ್ಸವ ನಂತರ ಮಹಾ ಮಂಗಳಾರತಿ ಹಾಗೂ ಪ್ರಸಾದ ವಿನಿಯೋಗವಿರುತ್ತದೆ. ಸಮಸ್ತ ಸಮಾಜ ಬಾಂಧವರು ದೀಪೋತ್ಸವ ದಲ್ಲಿ ಪಾಲ್ಗೊಂಡು ದೇವಿಯ ಕೃಪೆಗೆ ಪಾತ್ರರಾಗಲು ಸಮಿತಿಯ ಅಧ್ಯಕ್ಷ ಎಂ. ಶ್ರೀನಿವಾಸ ಮೂತಿ, ಪ್ರಧಾನ ಕಾರ್ಯದರ್ಶಿ ಕೆ. ಮೌನೇಶ್ವ ರಾಚಾರ್ ಮತ್ತು ಖಜಾಂಚಿ ಎಸ್. ಜಗನ್ನಾಥ ಅವರು ಕೋರಿದ್ದಾರೆ.

## ಅಂಚೆ ನೌಕರರ ಕ್ರೀಡಾಕೂಟ : ಹೆಚ್. ಎಂ.ಸುನಂದರವರಿಗೆ 2ನೇ ಸ್ಥಾನ

ಚಿಕ್ಕಮಗಳೂರು:– ಇತ್ತೀಚೆಗೆ ಗುಜರಾತ್‌ನ ಪೋರ್‌ಬಂದರ್ ನಲ್ಲಿ ನಡೆದ 36ನೇ ಅಖಿಲ ಭಾರತ ಅಥ್ಲೆಟಿಕ್ಸ್ ಮತ್ತು ಸೈಕ್ಲಿಂಗ್ ಕ್ರೀಡಾಕೂಟದಲ್ಲಿ ಭಾಗವಹಿಸಿದ ಚಿಕ್ಕಮಗಳೂರು ನಗರದಲ್ಲಿರುವ ಪ್ರಧಾನ ಅಂಚೆಕಚೇರಿಯ ಸಿಬ್ಬಂದಿ ಹೆಚ್. ಎಂ.ಸುನಂದರವರು 4*400 ಮೀಟರ್ ಮಹಿಳೆಯರ ರಿಲೇಯಲ್ಲಿ ಭಾಗವಹಿಸಿ 2ನೇ ಬಹುಮಾನ ಪಡೆದಿದ್ದಾರೆ. ಗುಜರಾತ್ ಪೋಸ್ಟಲ್ ಸರ್ಕಲ್ ಕ್ರೀಡಾಮಂಡಳಿ ಮತ್ತು ಪೋಸ್ಟ್ ಮಾಸ್ಟರ್ ಜನರಲ್, ರಾಜ್‌ಕೋಟ್ ರವರ ನೇತೃತ್ವದಲ್ಲಿ ಕ್ರೀಡಾಕೂಟವನ್ನು ಆಯೋಜಿಸಲಾಗಿತ್ತು.



## ನಗರದಲ್ಲಿಂದು ಮಾಂಸ ಮಾರಾಟ ನಿಷೇಧ

**ಚಿಕ್ಕಮಗಳೂರು:** ನಗರಸಭೆ ವ್ಯಾಪ್ತಿಯಲ್ಲಿರುವ ಕೋಳಿ, ಕುರಿ, ಮೀನು ಮಾಂಸ ಮಾರಾಟಗಾರರು ಹಾಗೂ ಮಾಂಸಾಹಾರಿ ಹೋಟೆಲ್ ಮತ್ತು ರೆಸ್ಟೋರೆಂಟ್ ಮಾಲೀಕರು ನವೆಂಬರ್ 25 ರಂದು ಟಿ.ಎಲ್.ವಾಸ್‌ವಾನಿ ಜನ್ಮ ದಿನದ ಪ್ರಯುಕ್ತ ಕಡ್ಡಾಯವಾಗಿ ಪ್ರಾಣಿ ವಧೆ ಹಾಗೂ ಮಾಂಸ ಮಾರಾಟ ಮಾಡುವುದನ್ನು ನಿಷೇಧಿಸಲಾಗಿದೆ. ಕೋಳಿ, ಕುರಿ, ಮೀನು ಮಾಂಸ ಮಾರಾಟಗಾರರು ಮತ್ತು ಮಾಂಸಾಹಾರಿ ಹೋಟೆಲ್‌ಗಳನ್ನು ಈ ದಿನದಂದು ತೆರೆಯಬಾರದು ತಪ್ಪಿದಲ್ಲಿ ಅಂತಹ ಮಾಂಸ ಮಾರಾಟ ಮಾಡುವವರು ಮತ್ತು ಮಾಂಸಾಹಾರಿ ಹೋಟೆಲ್ ಮಾಲೀಕರ ವಿರುದ್ಧ ಕಾನೂನು ರೀತಿಯ ಕ್ರಮ ಜರುಗಿಸಲಾಗುವುದು ಎಂದು ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನ್ಯಾಯಾಲಯದ ಆದೇಶದಂತೆ ಬೀದಿ ನಾಯಿಗಳ ಸೆರೆಗೆ ಶೀಘ್ರವೇ ಕ್ರಮವಹಿಸಲು ಸೂಚನೆ

**ಹಾಸನ :** ನ್ಯಾಯಾಲಯದ 'ಆದೇಶದಂತೆನಗರಾದ್ಯಂತ ಸಾರ್ವಜನಿಕ ಸ್ಥಳಗಳು ಹಾಗೂ ಸರ್ಕಾರಿ ಕಚೇರಿಗಳ ಸುತ್ತಮುತ್ತ ಬೀದಿನಾಯಿಗಳ ಹಾವಳಿಗೆ ಕಡಿವಾಣ ಹಾಕಲು ಕ್ರಮವಹಿಸುವಂತೆ ಅಧಿಕಾರಿಗಳಿಗೆ ಶಾಸಕ ಸ್ವರೂಪ್ ಪ್ರಕಾಶ್ ಸೂಚನೆ ನೀಡಿದ್ದಾರೆ.



ಹಾಸನ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿಇಂದು ನಡೆದಕೆಡಿಪಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದಅವರು ಬೀದಿನಾಯಿಗಳ ಹಾವಳಿಯಿಂದ ತಾಲೂಕಿನಲ್ಲಿ ಸಾಕಷ್ಟು ಸಮಸ್ಯೆಗಳು ಆಗುತ್ತಿವೆ. ಇದಕ್ಕೆ ಪೂರಕವಾಗಿಕೋರ್ಟ್‌ಕೂಡ ಬೀದಿನಾಯಿಗಳ ಹಾವಳಿ ನಿಯಂತ್ರಣಕ್ಕೆಸೂಚನೆ ನೀಡಿದ್ದು,ಕೂಡಲೇ ಅಧಿಕಾರಿಗಳು ಕಾರ್ಯಪ್ರವೃತ್ತರಾಗಿ ನಾಯಿಗಳ ಸ್ಥಳಾಂತರಕ್ಕೆ ಕ್ರಮವಹಿಸಬೇಕು ಎಂದರು.

ಮಹಾನಗರ ಪಾಲಿಕೆ ಅಧಿಕಾರಿಗಳು ಶೀಘ್ರವೇ ಕಾರ್ಯಪ್ರವೃತ್ತರಾಗಿ ಹಿಡಿದ ನಾಯಿಗಳನ್ನು ಶೆಡ್ ನಲ್ಲಿ ಬಿಟ್ಟು ಹಾರೈಕೆ ಮಾಡುವ ಕೆಲಸ ಮಾಡಬೇಕಿದೆಎಂದು ಹೇಳಿದರು.

ಕಂದಾಯ ಇಲಾಖೆ, ಚೆಸ್ಕಾಂ, ಮುಜರಾಯಿ, ಕೃಷಿ ತೋಟಗಾರಿಕೆ ಇಲಾಖೆಗಳು ಸರ್ಕಾರದ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವ ನಿಟ್ಟಿನಲ್ಲಿ ಕೆಲಸ ಮಾಡಬೇಕು. ಜೊತೆಗೆ ಬೇಸಿಗೆ ಆರಂಭವಾಗುವ ಮುನ್ನವೇಕುಡಿಯುವ ನೀರಿನ ಸಮಸ್ಯೆ ಬಾರದಂತೆ ಮುನ್ನೆಚ್ಚರಿಕೆಕ್ರಮಕೈಗೊಂಡುಅಗತ್ಯವಿರುವ ಪೂರಕ ಕಾಮಗಾರಿಗಳನ್ನು ನಡೆಸಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಅಧಿಕಾರಿಗಳು ಕೆಲಸ ಮಾಡಬೇಕುಎಂದು ಸೂಚನೆ ನೀಡಿದರು.

ಗ್ರಾಮೀಣ ಭಾಗದಲ್ಲಿ ಚರಂಡಿಗಳಲ್ಲಿ ಹೂಳು ಹಾಗೂ ಕಸ ಕಡ್ಡಿಗಳಿಂದ ತುಂಬಿ ಭರ್ತಿಯಾಗಿವೆ, ಕೂಡಲೇಗ್ರಾಮ ಪಂಚಾಯಿತಿಅಭಿವೃದ್ಧಿ ಅಧಿಕಾರಿಗಳು ಇದನ್ನುಗಂಭೀರವಾಗಿ ಪರಿಗಣಿಸಿ, ಹೂಳು ತೆಗೆಯುವ ಕೆಲಸ ಮಾಡಬೇಕುಜೊತೆಗೆ ಸ್ವಚ್ಛತೆಗೆ ಹೆಚ್ಚಿನಆದ್ಯತೆ ನೀಡುವ ಸಲುವಾಗಿ ಸ್ವಚ್ಛತೆ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಆಯೋಜಿಸಿ ತಮ್ಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸ್ವಚ್ಛತೆ ಕಾಯ್ದುಕೊಳ್ಳಬೇಕು ಎಂದು ಸಲಹೆ ನೀಡಿದರು

ತಾಲೂಕಿನ ಪ್ರತೀಗ್ರಾಮ ಪಂಚಾಯಿತಿಗಳಲ್ಲಿ ಕಡ್ಡಾಯವಾಗಿ ನರೇಗಾ ಕಾಮಗಾರಿಗಳನ್ನು ಮಾಡಬೇಕುಇದರಿಂದಗ್ರಾಮೀಣಜನರಿಗೆಉದ್ಯೋಗ ಹಾಗೂ ಪಂಚಾಯಿತಿ ವ್ಯಾಪ್ತಿಯಅಭಿವೃದ್ಧಿ ಕೆಲಸಗಳಿಗೆ ಹೆಚ್ಚಿನಒತ್ತು ನೀಡಿದಂತೆಆಗುತ್ತದೆ. ಕೇಂದ್ರ ಹಾಗೂ ರಾಜ್ಯ ಸರ್ಕಾರದಯಾವುದೇ ಯೋಜನೆಗಳು ವಿಫಲವಾಗಬಾರದು ಅವುಗಳನ್ನು ಸರಿಯಾಗಿ ಬಳಕೆ ಮಾಡಿಕೊಂಡುಅರ್ಹ ಫಲಾನುಭವಿಗಳಿಗೆ ತಲುಪಿಸುವ ಕೆಲಸವನ್ನು ಮಾಡಬೇಕಿದೆಎಂದರು.

ಹಾಸನ ತಾಲೂಕಿನ 178 ಅಂಗನವಾಡಿಗಳನ್ನು ಸಕ್ಷಮ ಅಂಗನವಾಡಿಗಳಾಗಿ ಗುರುತಿಸಲಾಗಿದ್ದು ಈ ಪೈಕಿ ಹಾಸನದ 10 ಅಂಗನವಾಡಿಗಳು ಇದೆ ನವೆಂಬರ್ 28 ರಿಂದಆರಂಭವಾಗುತ್ತಿರುವ ಹಿನ್ನೆಯಲ್ಲಿ ಅಂಗನವಾಡಿಗಳಿಗೆ ಟಿವಿಗಳನ್ನು ಶಾಸಕ ಸ್ವರೂಪ್ ವಿತರಿಸಿದರು.

ಸಭೆಯಲ್ಲಿ ಸದಸ್ಯರಾದ ಮಲ್ಲೇಗೌಡ, ಕರೀಗೌಡ, ತಹಸಿಲ್ದಾರ್ ಗೀತಾ, ತಾ.ಪಂಕಾರ್ಯನಿರ್ವಹಣಾಧಿಕಾರಿಗಿರೀಶ್‌ಮತ್ತಿತರರು ಹಾಜರಿದ್ದರು.

## ನಿಧನ ಸುದ್ದಿಗಳು

### ಕುಂಬಳೂರು ಗ್ರಾಮದ ಬೆನ್ನೂರು ಕೃಷ್ಣಪ್ಪ ನಿಧನ

**ಹರಿಹರ :** ತಾಲ್ಲೂಕು ಕುಂಬಳೂರು ಗ್ರಾಮದ ಗಂಗಾಮತ ಸಮಾಜದ ಮುಖಂಡರಾದ ಬೆನ್ನೂರು ಕೃಷ್ಣಪ್ಪ (58 ವರ್ಷ) ಅವರು ದಿನಾಂಕ 24.11.2025 ಬೆಳಿಗ್ಗೆ 8–30 ಕ್ಕೆ ನಿಧನರಾದರು. ಐವರು ಸಹೋದರರು, ಇಬ್ಬರು ಸಹೋದರಿಯರು, ಇಬ್ಬರು ಪುತ್ರಿಯರು, ಅಳಿಯಂದಿರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು–ಬಳಗದವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯು ದಿನಾಂಕ 25.11.2025 ರ ಮಂಗಳವಾರ ಮಧ್ಯಾಹ್ನ 1–30 ಕ್ಕೆ ಕುಂಬಳೂರಿನ ಗಂಗಾಮತ ಸಮಾಜದ ರುದ್ರಭೂಮಿಯಲ್ಲಿ ನೆರವೇರಿದೆ.

### ಬಸಮ್ಮ ನಿಧನ

**ದಾವಣಗೆರೆ:** ದೇವರಾಜ ಅರಸು ಬಡಾವಣೆ ನಿವಾಸಿ, ಎಂಜಿನಿಯರ್ ಮಂಜಣ್ಣನವರ ತಾಯಿ ಬಸಮ್ಮ (84) ಸೋಮವಾರ ನಿಧನರಾದರು. ಬಸಮ್ಮಇವರಿಗೆ ಇಬ್ಬರು ಪುತ್ರರು ಇದ್ದಾರೆ. ಹರಿಹರ ತಾಲ್ಲೂಕಿನ ಭಾನುವಳ್ಳಿ ಗ್ರಾಮದಲ್ಲಿ ಮಂಗಳವಾರ ಮಧ್ಯಾಹ್ನ 3 ಗಂಟೆಗೆ ಅಂತ್ಯಕ್ರಿಯೆ ನಡೆದಿದೆ ಎಂದು ಕುಟುಂಬದವರು ತಿಳಿಸಿದ್ದಾರೆ.

### ಶ್ರೀನಿವಾಸ್ ಜೆ. ನಿಧನ

**ದಾವಣಗೆರೆ :** ರಂಗಭೂಮಿ ಕಲಾವಿದರಾದ ಜ್ಯೋತಿರಪ್ಪ ಇವರ ಪುತ್ರ ಶ್ರೀನಿವಾಸ್ ಜೆ. ದಿನಾಂಕ: 24.11.2025ರ ಸೋಮವಾರ ಸಂಜೆ 6:30ಕ್ಕೆ ನಿಧಬರಾಗಿದ್ದಾರೆ ಅವರಿಗೆ 49 ವರ್ಷ ವಯಸ್ಸಾಗಿತ್ತು ಓರ್ವ ಪುತ್ರಿ, ಓರ್ವ ಪುತ್ರನನ್ನು ಅಗಲಿರುವ ಶ್ರೀಯುತರ ಅಂತ್ಯಕ್ರಿಯೆಯನ್ನು ದಿನಾಂಕ: 25.11.2025ರ ಮಂಗಳವಾರ ಮಧ್ಯಾಹ್ನ 1 ಗಂಟೆಗೆ ದಾವಣಗೆರೆ ರಾಮನಗರದ ಹಿಂದೂ ರುದ್ರಭೂಮಿಯಲ್ಲಿ ನೆರವೇರಿಸಲಾಯಿತು.

## ಬ್ಯಾಂಕುಗಳ ಖಾಸಗೀಕರಣ, ರೈತ, ಕಾರ್ಮಿಕರ ಸಾಲ ಮನ್ನಕ್ಕೆ ಆಗ್ರಹ, ಪ್ರತಿಭಟನೆ

**ದಾವಣಗೆರೆ:** ರಾಷ್ಟ್ರೀಯ ಬ್ಯಾಂಕ್‌ಗಳ ಖಾಸಗೀಕರಣ ಮತ್ತು ರೈತ, ಕಾರ್ಮಿಕರ ಸಾಲ ಮನ್ನಾಕ್ಕಾಗಿ ಸಂಯುಕ್ತ ಹೋರಾಟ ಕರ್ನಾಟಕ ಮತ್ತು ಜೆಸಿಟಿಯು ಜಂಟಿಯಾಗಿ ಕರೆ ನೀಡಿರುವ ಬೆಂಗಳೂರು ಚಲೋ ಕಾರ್ಯಕ್ರಮದ ಹಿನ್ನೆಲೆಯಲ್ಲಿ ನಗರದಲ್ಲೂ ಎಸ್‌ಕೆಎಂ ನಗರದ ಮಂಡಿಪೇಟೆಯಲ್ಲಿರುವ ಎಸ್‌ಬಿಐ ಬ್ಯಾಂಕ್ ಮುಂದೆ ಪ್ರತಿಭಟನೆ ನಡೆಸಿತು.




ಈ ವೇಳೆ ಮಾತನಾಡಿದ ಕಾರ್ಮಿಕ ಮುಖಂಡ ಹೆಚ್.ಜಿ.ಉಮೇಶ್ ಆವರಗೆರೆ, ಬ್ಯಾಂಕ್ ಖಾಸಗೀಕರಣವು ದೇಶದ ಹಿತಾಸಕ್ತಿಗೆ ಮಾರಕವಾಗಲಿದೆ. ಆದ್ದರಿಂದ ಈಗಿರುವ ರಾಷ್ಟ್ರೀಕೃತ ಬ್ಯಾಂಕುಗಳನ್ನು ಸಬಲಗೊಳಿಸುವುದರ ಜೊತೆಗೆ ಎಲ್ಲಾ ಖಾಸಗೀ ಬ್ಯಾಂಕುಗಳನ್ನು ರಾಷ್ಟ್ರೀಕರಣಗೊಳಿಸುವ ಮೂಲಕ ಅವುಗಳನ್ನು ಸರಕಾರ ತನ್ನ ಅಧೀನಕ್ಕೆ ತೆಗೆದುಕೊಳ್ಳಬೇಕು. ರಾಷ್ಟ್ರೀಕೃತ ಬ್ಯಾಂಕಿಂಗ್ ವ್ಯವಸ್ಥೆಯ ಮೂಲಕ ಬ್ಯಾಂಕ್ ಸೇವೆಯು ದೇಶದ ಮೂಲೆ ಮೂಲೆಗೆ ತಲುಪಿಸಬೇಕು ಎಂದು ಆಗ್ರಹಿಸಿದರು.

ದೇಶದ ಅರ್ಥ ವ್ಯವಸ್ಥೆಯ ಜೀವ ನಾಡಿಗಳಾದ ಸಾರ್ವಜನಿಕ ಬ್ಯಾಂಕುಗಳು ಸರಕಾರದ ಅಧೀನದಲ್ಲೇ ನಡೆಯಬೇಕೇ ಹೊರತು ಖಾಸಗಿಯವರಿಂದ ಅಲ್ಲ. ಬ್ಯಾಂಕ್ ಖಾಸಗೀಕರಣದಿಂದ ಜನಸಾಮಾನ್ಯರ ಲಕ್ಷಾಂತರ ಕೋಟಿ ರೂಪಾಯಿಗಳ ಠೇವಣಿ ಹಣಕ್ಕೆ ಅಪಾಯ ಆಗಲಿದೆ. ಸಾರ್ವಜನಿಕ ಕ್ಷೇತ್ರದ ಬ್ಯಾಂಕುಗಳ ಲಾಭದ ಹಣ ಜನರ ಅಭ್ಯುದಯಕ್ಕೆ ವಿನಿಯೋಗಿಸಬೇಕೇ ಹೊರತು ಬಂಡವಾಳಶಾಹಿಗಳ ಲೂಟಿಗಾಗಿ ಅಲ್ಲ. ಸಾಲ ವಸೂಲಿ ಸಮರ್ಪಕವಾಗಿ ಆಗುವಂತೆ ನೋಡಿಕೊಳ್ಳಲು ಕಠಿಣ ಕಾನೂನು ರೂಪಿಸಬೇಕು ಎಂದು ಒತ್ತಾಯಿಸಿದರು.

ರೈತ ಮುಖಂಡ ಹೊನ್ನೂರು ಮುನಿಯಪ್ಪ, ಉದ್ದೇಶಪೂರ್ವಕವಾಗಿ ಬ್ಯಾಂಕ್ ಸಾಲವನ್ನು ಮರುಪಾವತಿ ಮಾಡದಿರುವ ಖಾಸಗಿ ಬಂಡವಾಳಶಾಹಿಗಳ ಮೇಲೆ ಕ್ರಿಮಿನಲ್ ಮೊಕದ್ದಮೆಯನ್ನು ದಾಖಲಿಸುವುದ ಜೊತೆಗೆ ಅವರ ಆಸ್ತಿಯನ್ನು ಜಪ್ತಿ, ಹರಾಜು ಮಾಡಿ ಸಾಲಕ್ಕೆ ಜಮಾ ಮಾಡಬೇಕು. ಪ್ರಕೃತಿ ವಿಕೋಪದಂತಹ ಸಂದರ್ಭಗಳು ಎದುರಾದಾಗ ರೈತರ ಸಾಲವನ್ನು ಮನ್ನಾ ಮಾಡಿ ಅದನ್ನು ಸರಕಾರವೇ ಭರಿಸಬೇಕು. ರೈತರಿಗೆ, ಬಡಜನರಿಗೆ, ಮಹಿಳೆಯರಿಗೆ, ಕುಶಲಕರ್ಮಿಗಳಿಗೆ, ಬೀದಿ ವ್ಯಾಪಾರಿಗಳಿಗೆ, ವಿದ್ಯಾರ್ಥಿಗಳ ಶಿಕ್ಷಣಕ್ಕೆ ಕನಿಷ್ಠ ಬಡ್ಡಿದರದಲ್ಲಿ ಗರಿಷ್ಠ ಸಾಲ ಸೌಲಭ್ಯ ಒದಗಿಸಬೇಕು. ಸಾಲ ವಸೂಲಾತಿಯ ನೆಪದಲ್ಲಿ ರೈತರ ಮೇಲೆ ನಡೆಯುವ ದೌರ್ಜನ್ಯಕ್ಕೆ ಅಂಕುಶ ಹಾಕಬೇಕು. ರಾಷ್ಟ್ರೀಕೃತ ಬ್ಯಾಂಕುಗಳು ವಿಧಿಸುವ ಬ್ಯಾಂಕ್ ಶುಲ್ಕವನ್ನು ಕಡಿಮೆ ಮಾಡಬೇಕು ಎಂದು ಮನವಿ ಮಾಡಿದರು.ಪ್ರತಿಭಟನೆಯಲ್ಲಿ

ಪಿ.ಪಿ.ಮರುಳಸಿದ್ದಯ್ಯ, ಮಧು ತೊಗಲೇರಿ, ಐರಣಿ ಚಂದ್ರು, ರಮೇಶ್ ಸಿ.ದಾಸರ್, ವಿ.ಲಕ್ಷ್ಮಣ್, ಆವರಗೆರೆ ಚಂದ್ರು, ಸರೋಜಾ, ಅಣಬೇರು ತಿಪ್ಪೇಸ್ವಾಮಿ, ಶಿವಾಜಿರಾವ್, ಡಾ.ಸುನೀತ್‌ಕುಮಾರ್, ಸುರೇಶ್ ಯರಗುಂಟೆ, ಕೆ.ಹಾಲೇಶಿ ಇತರರು ಇದ್ದರು.

# ಜಿಲ್ಲಾ ಪದ್ಮಶಾಲಿ ಸಂಘದ ನೂತನ ಅಧ್ಯಕ್ಷರಾಗಿ ಅವ್ವಾರು ಮಂಜುನಾಥ್ ಪುನರಾಯ್ಕೆ



**ಬಳ್ಳಾರಿ:** ಬಳ್ಳಾರಿ ಜಿಲ್ಲಾ ಪದ್ಮಶಾಲಿ ಸಂಘದ ನೂತನ ಅಧ್ಯಕ್ಷರಾಗಿ ಅವ್ವಾರು ಮಂಜುನಾಥ್ ಅವರು ಅವಿರೋಧವಾಗಿ – ಸರ್ವಾನುಮತದಿಂದ ಮರು ಆಯ್ಕೆಯಾಗಿದ್ದಾರೆ.

ಬಳ್ಳಾರಿ ಜಿಲ್ಲಾ ಪದ್ಮಶಾಲಿ ಸಂಘದ ನೂತನ ಕಾರ್ಯಕಾರಿ ಸಮಿತಿ ಸದಸ್ಯರ ಸಭೆಯು ಸೋಮವಾರ ಸಂಜೆ ನಡೆದಿದ್ದು, ಈ ಸಭೆಯಲ್ಲಿ ಗಡ್ಡಂ ಶ್ರೀನಿವಾಸಲು ಅವರು ಗೌರವಾಧ್ಯಕ್ಷರಾಗಿ, ತಿರುವೀದುಲ ವೆಂಕಟೇಶಲು ಅವರು ಧರ್ಮಕರ್ತರಾಗಿ, ಎಸ್.ಪಿ. ವೆಂಕಟೇಶಲು, ಕೋಡಿ ನಾಗರಾಜು ಅವರು ಉಪಾಧ್ಯಕ್ಷರಾಗಿ, ಶ್ರೀರಾಂ ಸತ್ಯನಾರಾಯಣ ಅವರು ಕಾರ್ಯದರ್ಶಿಗಳಾಗಿ, ಬಂಡಾರಿ ರಾಮಾಂಜಿನೇಯಲು ಅವರು ಜಾಂಚಿಗಳಾಗಿ, ಪೆನಗೊಂಡ್ಲ ಮಂಜುನಾಥ್ ಮತ್ತು ಮೇಡಂ ಮಧುಕುಮಾರ್ ಅವರು ಜಂಟಿ ಕಾರ್ಯದರ್ಶಿಗಳಾಗಿ ಆಯ್ಕೆಯಾಗಿದ್ದಾರೆ.

ಪೋಬತ್ತಿ ಲೋಕಣ್ಣ, ಡಾ. ಎನ್. ಶ್ರೀನಿವಾಸ್, ಶ್ರೀರಾಂ ಮಂಜುನಾಥ್, ದೇವರೆಡ್ಡಿ ಪಿ. ಚಿದಾನಂದ, ಪೆನಗೊಂಡ್ಲ ಗೋವಿಂದರಾಜುಲು, ಶ್ರೀಮತಿ ಎಂ.ಎಸ್. ಮಂಜುಳಾ, ಕೋಡಿಗಂಟಿ ಗೋಪಾಲ, ಪೋಬತ್ತಿ ರಮೇಶ, ಬೂಸಾ ರಾಮಸ್ವಾಮಿ, ಎಸ್. ಅಂಬರೀಶ, ಪಲಿಮಿರಿ ಎಚ್. ರವಿ ಮತ್ತು ಸಾಂದೋಪು ತಿಮ್ಮಪ್ಪ ಅವರು ಕಾರ್ಯಕಾರಿ ಸಮಿತಿ ಸದಸ್ಯರಾಗಿ ಆಯ್ಕೆಯಾಗಿದ್ದಾರೆ. ಇವರ ಅಧಿಕಾರವಧಿಯು 2027ರವರೆಗೆ ಇರಲಿದೆ.

ಬಳ್ಳಾರಿ ಜಿಲ್ಲಾ ಪದ್ಮಶಾಲಿ ಸಂಘದ ನೂತನ ಅಧ್ಯಕ್ಷರಾಗಿ ಅವ್ವಾರು ಮಂಜುನಾಥ್ ಅವರು ಬಳ್ಳಾರಿ ಜಿಲ್ಲಾ ವಾಣಿಜ್ಯ ಕೈಗಾರಿಕಾ ಸಂಸ್ಥೆಯ ಅಧ್ಯಕ್ಷರಾಗಿ, ಬಳ್ಳಾರಿ ಜಿಲ್ಲಾ ಪದ್ಮಶಾಲಿ ಸಂಘದ ಉಪಾಧ್ಯಕ್ಷರಾಗಿರುವ ಎಸ್.ಪಿ. ವೆಂಕಟೇಶ್ ಅವರು ಬಳ್ಳಾರಿ ಜಿಲ್ಲಾ ವಾಣಿಜ್ಯ ಕೈಗಾರಿಕಾ ಸಂಸ್ಥೆಯ ಕಾರ್ಯಕಾರಿ ಸಮಿತಿ ಸದಸ್ಯರಾಗಿ ಸೇವೆ ಸಲ್ಲಿಸುತ್ತಿದ್ದಾರೆ.

# ಯಕ್ಷರಂಗದಿಂದ ಉಚಿತವಾಗಿ ಯಕ್ಷಗಾನ ತರಬೇತಿ

**ದಾವಣಗೆರೆ:** ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ಅಂಗ ಸಂಸ್ಥೆ ಯಕ್ಷರಂಗ–ಯಕ್ಷಗಾನ ಸಂಸ್ಥೆಯ ಆಶ್ರಯದಲ್ಲಿ ಪ್ರತೀ ಭಾನುವಾರ ಬೆಳಿಗ್ಗೆ 7–30 ರಿಂದ 9 ಗಂಟೆಯವರೆಗೆ ನಗರದ ಕಸ್ತೂರ್ಬಾ ಬಡಾವಣೆಯ ಕುವೆಂಪು ರಸ್ತೆಯಲ್ಲಿರುವ ಕಲಾಕುಂಚ ಕಛೇರಿ ಸಭಾಂಗಣದಲ್ಲಿ ಮಕ್ಕಳಿಗೆ, ಮಹಿಳೆಯರಿಗೆ, ಪುರುಷರಿಗೆ ಉಚಿತವಾಗಿ ಯಕ್ಷಗಾನ ತರಬೇತಿ ನೀಡಲಾಗುವುದು ಎಂದು ಯಕ್ಷರಂಗದ ಅಧ್ಯಕ್ಷರಾದ ಮಲ್ಯಾಡಿ ಪ್ರಭಾಕರ ಶೆಟ್ಟಿ ತಿಳಿಸಿದ್ದಾರೆ.

ಯಕ್ಷಗಾನ ಕಲಾವಿದರಾದ ಹಟ್ಟಿಯಂಗಡಿ ಆನಂದಶೆಟ್ಟಿ, ಪ್ರದೀಪ್ ಕಾರಂತ್ ತರಬೇತಿ ನೀಡಲಿದ್ದು, ಯಕ್ಷಗಾನದ ಆಸಕ್ತರು ಈ ಕೆಳಗಿನ ಸನೀಹವಾಣಿಗಳಿಗೆ ಸಂಪರ್ಕಿಸಬಹುದು ಎಂದು ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಬೇಳೂರು ಸಂತೋಷ್‌ಕುಮಾರ ಶೆಟ್ಟಿ ಪ್ರಕಟಿಸಿದ್ದಾರೆ. ಕರ್ನಾಟಕ ಕರಾವಳಿ ಜಿಲ್ಲೆಗಳ ವಿಶ್ವವಿಖ್ಯಾತ ಅಪ್ಪಟ ಕನ್ನಡದ ಆರಾಧನಾ ಕಲೆಗೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಈ ಮುಕ್ತವಾದ ಸದಾವಕಾಶಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕಾಗಿ ಸಂಸ್ಥೆಯ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್ ಶೆಣೈ ವಿನಂತಿಸಿದ್ದಾರೆ. ಸಂಪರ್ಕಿಸುವ ಸನೀಹವಾಣಿಗಳು 9901770315, 9481181446

# ಸಂವಿಧಾನ ದಿನಾಚರಣೆ

**ಶಿವಮೊಗ್ಗ** : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ಹಾಗೂ ಶಿವಮೊಗ್ಗ ಮಹಾನಗರ ಪಾಲಿಕೆ ಇವರುಗಳ ಸಂಯುಕ್ತಾಶ್ರಯದಲ್ಲಿ ಇಂದು ಬೆಳಗ್ಗೆ 10.30ಕ್ಕೆ ಡಾ. ಬಿ.ಆರ್. ಅಂಬೇಡ್ಕರ್ ಭನದಲ್ಲಿ ಸಂವಿಧಾನ ದಿನ ಕಾರ್ಯಕ್ರಮ ಆಯೋಜಿಸಲಾಗಿದೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಶಿವಮೊಗ್ಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್. ಮಧುಬಂಗಾರಪ್ಪ ನೆರವೇರಿಸಲ್ಲಿದ್ದಾರೆ. ವಿಶೇಷ ಆಹ್ವಾನಿತರಾಗಿ ಸಮಾಜ ಕಲ್ಯಾಣ ಇಲಾಖೆ ಇಲಾಖೆ ಸಚಿವರಾದ ಡಾ. ಹೆಚ್.ಸಿ. ಮಹದೇವಪ್ಪ, ಭದ್ರಾವತಿ ಶಾಸಕ ಹಾಗೂ ಕ.ಗ್ರಾ. ಮೂ.ಸೌ.ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಬಿ.ಕೆ.ಸಂಗಮೇಶ್ವರ ಮತ್ತು ಸಾಗರ ಶಾಸಕ ಹಾಗೂ ಕ.ಅ.ಕೈ.ನಿಗಮದ ಅಧ್ಯಕ್ಷರಾದ ಗೋಪಾಲಕೃಷ್ಣ ಬೇಳೂರು ಇವರುಗಳು ಆಗಮಿಸಲಿದ್ದಾರೆ. ಶಿವಮೊಗ್ಗ ನಗರ ಶಾಸಕ ಎಸ್.ಎನ್ ಚನ್ನಬಸಪ್ಪ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಕಾರ್ಯಕ್ರಮದ ಮುಖ್ಯ ಅಥಿತಿಗಳಾಗಿ ಸಂಸದರು, ವಿಧಾನ ಸಭಾ/ವಿಧಾನ ಪರಿಷತ್ ಶಾಸಕರು, ನಿಗಮ/ಮಂಡಳಿ/ಪ್ರಾಧಿಕಾರಗಳ ಅಧ್ಯಕ್ಷರುಗಳು, ಜನ ಪ್ರತಿನಿಧಿಗಳು, ಮಹಾನಗರ ಪಾಲಿಕೆ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು, ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿವಾಹಣಾ ಅಧಿಕಾರಿಗಳು, ವಿವಿದ ಸಂಘ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಸರ್ಕಾರಿ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಭಾಗವಹಿಸಲ್ಲಿದ್ದಾರೆ.

ಕಾರ್ಯಕ್ರಮದಲ್ಲಿ ನಗರದ ಬಿ.ಹೆಚ್.ರಸ್ತೆ, ಕರ್ನಾಟಕ ಪಬ್ಲಿಕ್ ಸ್ಕೂಲ್‌ನ ಶಿಕ್ಷಕ ಡಾ. ಬಸವರಾಜಪ್ಪ ಎಂ. ಇವರಿಂದ ಸಂವಿಧಾನ ಕುರಿತು ವಿಶೇಷ ಉಪನ್ಯಾಸ ನೀಡಲಿದ್ದಾರೆ.

ಈ ಸಂದರ್ಭದಲ್ಲಿ ಬೆಳಗ್ಗೆ 8.30ಕ್ಕೆ ಶಿವಮೊಗ್ಗ ಮಹಾನಗರ ಪಾಲಿಕೆ ವ್ಯಾಪ್ತಿಯ ಅಲ್ಲಮ ಪ್ರಭು ಸ್ವಾತಂತ್ರ ಉದ್ಯಾನದಲ್ಲಿನ ಸಂವಿಧಾನ ಪೀಠಿಕೆ ಸ್ಮಾರಕದಿಂದ ಡಾ. ಬಿ.ಆರ್. ಅಂಬೇಡ್ಕರ್ ಭವನದವರೆಗೆ ಶಾಲಾ ಕಾಲೇಜು ವಿದ್ಯಾರ್ಥಿಗಳಿಂದ ರಾಷ್ಟ್ರಧ್ವಜ ಪ್ರದರ್ಶನ ಹಾಗೂ ಸಂವಿಧಾನದ ಘೋಷ ವಾಕ್ಯದೊಂದಿಗೆ ಕಾಲ್ನಡಿಗೆ ಜಾಥ ಹಮ್ಮಿಕೊಳ್ಳಲಾಗಿದೆ.

# ಮಾಜಿ ಸೈನಿಕರು ಮತ್ತು ಅವರ ಅವಲಂಬಿತರಿಗೆ ಸೈನಿಕ ಆರಾಮ ಗೃಹ ಶಿವಮೊಗ್ಗದಲ್ಲಿ ಬಾಡಿಗೆ ಕೊಠಡಿಗಳು ಲಭ್ಯ

**ದಾವಣಗೆರೆ :** ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಶಿವಮೊಗ್ಗ ಇಲ್ಲಿ ಇರುವ ಸೈನಿಕ ಆರಾಮ ಗೃಹದಲ್ಲಿ ಮಾಜಿ ಹಾಗೂ ಹಾಲಿ ಸೈನಿಕರು ಮತ್ತು ಅವರ ಅವಲಂಬಿತರಿಗೆ ವಾಸ್ತವ್ಯಕ್ಕಾಗಿ ಕೊಠಡಿಗಳನ್ನು ಬಾಡಿಗೆ ಆಧಾರದ ಮೇಲೆ ನೀಡಲಾಗುತ್ತದೆ.

ಅಗತ್ಯ ಇರುವವರು, 24/7 ಲಭ್ಯ ಇರುವ 9141166157 ಸಂಖ್ಯೆಗೆ ಕರೆ ಮಾಡಬಹುದು. ವಾಟ್ಸ್ ಅಪ್ ಸಂದೇಶ ಮಾಡಿ, ಮುಂಗಡ ಪಾವತಿಸಿ, ಕೊಠಡಿಗಳನ್ನು ಕಾಯ್ದಿರಿಸಬಹುದು. ಮುಂಗಡವಾಗಿ ಕೊಠಡಿಗಳನ್ನು ಕಾಯ್ದಿರಿಸಿದವರಿಗೆ ಆದ್ಯತೆ ನೀಡಲಾಗುವುದು. ಸೈನಿಕ ಆರಾಮ ಗೃಹ'ದಲ್ಲಿ ಸ್ನಾನಕ್ಕೆ 24/7 ಬಿಸಿ ನೀರು ಮತ್ತು ವೈಫೈ ವ್ಯವಸ್ಥೆ ಕೂಡ ಲಭ್ಯವಿದೆ. ಲಭ್ಯತೆಗನುಗುಣವಾಗಿ ಮುಂಗಡ ಕಾಯ್ದಿರಿಸದವರಿಗೂ ಕೊಠಡಿಗಳನ್ನು ಪಡೆಯಲು ಅವಕಾಶವಿದೆ.

ಹೆಚ್ಚಿನ ಮಾಹಿತಿಗೆ 9141166157 ಸಂಪರ್ಕಿಸಬಹುದೆಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪ ನಿರ್ದೇಶಕರು(ಪ್ರಭಾರ) ತಿಳಿಸಿದ್ದಾರೆ.

# ಸಂವಿಧಾನ ದಿನಾಚರಣೆ: ಯುವಕರಲ್ಲಿ ಸಂವಿಧಾನದ ಅರಿವು

ಭಾರತ ಸಂವಿಧಾನವು ಕೇವಲ ಕಾನೂನುಗಳ ಪುಸ್ತಕವಲ್ಲ, ಅದು ದೇಶದ ಪ್ರತಿಯೊಬ್ಬ ನಾಗರಿಕನಿಗೂ ಸಮಾನ ಅವಕಾಶ, ಹಕ್ಕು, ನ್ಯಾಯ, ಸ್ವಾತಂತ್ರ್ಯ ಮತ್ತು ಭದ್ರತೆ ನೀಡುವ ಮಹಾನ್ ದಾರಿದೀಪ. ಪ್ರತಿವರ್ಷ ನವೆಂಬರ್ 26ರಂದು ಆಚರಿಸುವ ಸಂವಿಧಾನ ದಿನಾಚರಣೆ ನಮ್ಮ ರಾಷ್ಟ್ರೀಯ ಜೀವನದಲ್ಲಿ ಅತಿ ಮಹತ್ವದ ದಿನ. ಈ ದಿನ ಸಂವಿಧಾನ ರಚನೆ ಪೂರ್ಣಗೊಂಡದ್ದು, ಹಾಗೂ ದೇಶದ ಭವಿಷ್ಯಕ್ಕೆ ಅಗತ್ಯವಾದ ಮೌಲ್ಯಗಳನ್ನು ರೂಪಿಸಿದ ದಿನವೂ ಆಗಿದೆ.

**ಸಂವಿಧಾನ ದಿನಾಚರಣೆಯ ಮಹತ್ವ**

ಸಂವಿಧಾನ ದಿನಾಚರಣೆಯ ಆಚರಣೆ ಕೇವಲ ಸಾಂಪ್ರದಾಯಿಕ ವಿಧಿವಿಧಾನವಲ್ಲ. ಇದು ಸಂವಿಧಾನದ ಜ್ಞಾನವನ್ನು ಜನಸಾಮಾನ್ಯರಿಗೆ ವಿಶೇಷವಾಗಿ ಯುವಪೀಳಿಗೆಗೆ ತಲುಪಿಸುವ ಮಹತ್ವದ ಅವಕಾಶ.

**1. ಸಂವಿಧಾನದ ಮೌಲ್ಯಗಳ ಪರಿಚಯ**

ಈ ದಿನ ಸಂವಿಧಾನದ ಪ್ರಸ್ತಾವನೆ ಓದುವ ಮೂಲಕ ನ್ಯಾಯ, ಸ್ವಾತಂತ್ರ್ಯ, ಸಮಾನತೆ, ಸಹೋದರತ್ವ ಎಂಬ ಐದು ಪ್ರಮುಖ ಮೌಲ್ಯಗಳು ನಾಗರಿಕರಲ್ಲಿ ಬೇರೂಡುವಂತೆ ಮಾಡುತ್ತದೆ.

**2. ಜನತಾಂತ್ರಿಕ ಚೇತನವನ್ನು ಜಾಗೃತಿಗೊಳಿಸುವ ದಿನ**

ಸಂವಿಧಾನ ದಿನ ಯುವಕರಲ್ಲಿ "ನಾವೇ ರಾಷ್ಟ್ರದ ಶಕ್ತಿ" ಎಂಬ ಮನಸ್ಸು ಮೂಡಿಸುವ ದಿನ. ಪ್ರತಿಯೊಬ್ಬರೂ ದೇಶದ ಪ್ರಗತಿಯಲ್ಲಿ ಜವಾಬ್ದಾರಿಯುತ ಪಾತ್ರವಹಿಸಬೇಕೆಂಬ ಸಂದೇಶ ನೀಡುತ್ತದೆ.

**3. ಸಂವಿಧಾನದ ರಚನೆ ಮತ್ತು ಸಂಚಾಲನೆಗೆ ಗೌರವ ಸಲ್ಲಿಸುವುದ**

ಡಾ. ಬಿ. ಆರ್. ಅಂಬೇಡ್ಕರ್ ಮತ್ತು ಅವರ ತಂಡ ರಾಷ್ಟ್ರದ ಭವಿಷ್ಯವನ್ನು ಗಮನದಲ್ಲಿ ಇಟ್ಟು ಸಂವಿಧಾನವನ್ನು ರೂಪಿಸಿದ ತ್ಯಾಗವನ್ನು ಸ್ಮರಿಸುವ ದಿನ ಸಂವಿಧಾನ ದಿನ.

ಯುವಕರು ಮತ್ತು ಸಂವಿಧಾನ ಇಂದಿನ ಚಿತ್ರಣ ಇಂದಿನ ಯುವಕರು ತಂತ್ರಜ್ಞಾನ, ಜಾಲತಾಣ, ಸ್ಪರ್ಧಾತ್ಮಕ ಯುಗದಲ್ಲಿ ಬದುಕುತ್ತಿರುವವರು. ಆದರೆ ಗಮನಿಸಬೇಕಾದ ಸಂಗತಿ ಎಂದರೆಸಂವಿಧಾನ ಅರಿವು ಹೆಚ್ಚುತ್ತಿದೆ, ಆದರೆ ಆಳತೆ ಕಡಿಮೆಸಾಮಾಜಿಕ ಮಾಧ್ಯಮಗಳ ಮೂಲಕ ಯುವಕರು ಸಂವಿಧಾನ ಕುರಿತ ಚರ್ಚೆಗಳನ್ನು ನೋಡುತ್ತಿದ್ದಾರೆ.

ಆದರೆ ಅದರ ಮೂಲತತ್ವ, ಹಕ್ಕು–ಕರ್ತವ್ಯಗಳ ಅರ್ಥೈಸುವಿಕೆ ಆಳವಾಗಿ ಇರುವುದಿಲ್ಲ.

ಹಕ್ಕುಗಳ ಮೇಲೆ ಹೆಚ್ಚು ಗಮನ, ಕರ್ತವ್ಯಗಳ ಮೇಲೆ ಕಡಿಮೆ ಯುವಕರು ಮೂಲಭೂತ ಹಕ್ಕುಗಳನ್ನು (ಸ್ವಾತಂತ್ರ್ಯ, ಸಮಾನತೆ, ಶಿಕ್ಷಣ ಹಕ್ಕು) ಚೆನ್ನಾಗಿ ತಿಳಿದಿದ್ದಾರೆ.

ಆದರೆ ಸಂವಿಧಾನ ಒಡಿಣಭಿಟಜ 51ಂ–ನಲ್ಲಿ ನಿರ್ದಿಷ್ಟವಾಗಿರುವ ನಾಗರಿಕ ಕರ್ತವ್ಯಗಳು ಕುರಿತು ಅರಿವು ಇನ್ನೂ ಸಾಲದು.

ಪರೀಕ್ಷಾ ಜ್ಞಾನ ಹೆಚ್ಚು, ಜೀವನ ಜ್ಞಾನ ಕಡಿಮೆ ಬಹುತೇಕ ಯುವಕರು UPSC, KPSC, ಬ್ಯಾಂಕ್ ಪರೀಕ್ಷೆಗಳಿಗೆ ಸಂವಿಧಾನವನ್ನು ಓದುತ್ತಾರೆ.

ಆದರೆ ಸಂವಿಧಾನ ಬದುಕನ್ನು ಹೇಗೆ ಕಟ್ಟಿಕೊಡುತ್ತದೆ ಎಂದು ಅರ್ಥಮಾಡಿಕೊಳ್ಳುವವರು ಅಲ್ಪ.

**ಸಂವಿಧಾನವು ಯುವಕರ ಜೀವನವನ್ನು ಹೇಗೆ ಕಟ್ಟಿಕೊಡುತ್ತದೆ?**

1. ಸಮಾನ ಅವಕಾಶಗಳ ಬಾಗಿಲು ತೆರೆದು ಕೊಡುತ್ತದೆ

ಸಂವಿಧಾನದ ಸಮಾನತೆ ಹಕ್ಕು (Article 14–18) ಯುವಕರಿಗಾಗಿ ಅತ್ಯಂತ ದೊಡ್ಡ ಬಲ.

ಜಾತಿ, ಧರ್ಮ, ಲಿಂಗ ಬೇಧವಿಲ್ಲದೇ ಎಲ್ಲರಿಗೂ ಶಿಕ್ಷಣ, ಉದ್ಯೋಗ, ಬದುಕಿನ ಅವಕಾಶ ಪಡೆಯಲು ಇದರ ನೆರವು.

2. ಸ್ವಾತಂತ್ರ್ಯಗಳ ರಕ್ಷಣೆಯಿಂದ ವ್ಯಕ್ತಿತ್ವ ವಿಕಾಸ

Article 19 ನೀಡಿರುವ ಅಭಿವ್ಯಕ್ತಿ, ಉದ್ಯೋಗ, ಸಂಚಾರ, ಸಂಘಟನೆಯ ಸ್ವಾತಂತ್ರ್ಯಗಳು ಯುವಕರಿಗೆ ತಮ್ಮ ಕನಸುಗಳನ್ನು ಬೆಳೆಸಲು ಅವಕಾಶವನ್ನು ಸೃಷ್ಟಿಸುತ್ತದೆ.

3. ಶಿಕ್ಷಣ ಹಕ್ಕು ಭವಿಷ್ಯ ನಿರ್ಮಾಣದ ಅಸ್ತಿಪಾಯ Article 21ಂ ಯುವಕರಿಗೆ 6 ರಿಂದ 14 ವರ್ಷ ವಯಸ್ಸಿನವರೆಗೂ ಉಚಿತ ಮತ್ತು ಕಡ್ಡಾಯ ಶಿಕ್ಷಣ ನೀಡುವ ಮೂಲಕ ಸಾಮಾಜಿಕ–ಆರ್ಥಿಕ ಬಡತನದ ಚಕ್ರದಿಂದ ಹೊರ ಬರಲು ನೆರವಾಗುತ್ತದೆ.

4. ದುರ್ಬಲ ವರ್ಗದ ಏಳಿಗೆ ಸಾಮಾಜಿಕ ನ್ಯಾಯ ಅನುದಾನಗಳು, ಮೀಸಲಾತಿ, ಕಲ್ಯಾಣ ಕಾರ್ಯಕ್ರಮಗಳು—all these stem from the Constitution. ಇದರ ಪ್ರಯೋಜನದಿಂದ ಗ್ರಾಮೀಣ, ಬಡ, ಹಿಂದುಳಿದ ಯುವಕರು ಕೂಡ ಸಮಾಜದ ಮುಖ್ಯವಾಹಿನಿಗೆ ಬರಲು ಸಾಧ್ಯವಾಗುತ್ತದೆ.

5. Fundamental Duties ಜವಾಬ್ದಾರಿಯುತ ನಾಗರಿಕರನ್ನು ನಿರ್ಮಿಸುವುದು ಸಂವಿಧಾನದ ಕರ್ತವ್ಯಗಳು ಯುವಕರಿಗೆ ಶಿಸ್ತಿನ ಜೀವನ, ರಾಷ್ಟ್ರಪ್ರೇಮ, ಸಾಮಾಜಿಕ ಜವಾಬ್ದಾರಿ, ಪರಿಸರ ಸಂರಕ್ಷಣೆಯಂತಹ ಅಂಶಗಳನ್ನು ತಿಳಿಸಿಕೊಡುತ್ತವೆ.

ಸಂವಿಧಾನ: ಯುವಕರನ್ನು ಸಮಾಜದಲ್ಲಿ "ಉನ್ನತ ಮಟ್ಟಕ್ಕೆ" ಎತ್ತುವ ಮಂತ್ರ

1. ಸ್ಪರ್ಧಾತ್ಮಕ ಯುಗದಲ್ಲಿ ಸಂವಿಧಾನವೇ ಸಮರಸ್ತ

ಪರೀಕ್ಷೆಗಳಲ್ಲಿ, ಉದ್ಯೋಗಗಳಲ್ಲಿ, ಸಾರ್ವಜನಿಕ ಜೀವನದಲ್ಲಿ ಸಂವಿಧಾನ ಜ್ಞಾನ ಎಷ್ಟೇ ಇದ್ದರೂ ಕಡಿಮೆ.

ಯುವಕರು ಸಂವಿಧಾನದ ಅರಿವಿನಿಂದ ನೀತಿ– ನಿಯಮಗಳ ಪ್ರಾಮುಖ್ಯತೆ, ಹಕ್ಕು–ಕರ್ತವ್ಯಗಳ ಜ್ಞಾನ,ಕಾನೂನು ಪಾಲನೆ ಇವುಗಳ ಮೂಲಕ ಜವಾಬ್ದಾರಿ ಹೊಂದಿದ ನಾಗರಿಕರಾಗಿ ಏಳುತ್ತಾರೆ.

**2. ರಾಷ್ಟ್ರದ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರ**

ಪ್ರಜಾಪ್ರಭುತ್ವದ ಬಲ ಯುವಕರ ಕೈಯಲ್ಲಿದೆ.ಸಂವಿಧಾನ ಅರಿವಿದ್ದ ಯುವಕರುಮತದಾನದ ಮಹತ್ವ ತಿಳಿದು ಸರಿಯಾದ ನಾಯಕರನ್ನು ಆರಿಸುತ್ತಾರೆ.

ಸಾಮಾಜಿಕ ನ್ಯಾಯದ ಮೌಲ್ಯಗಳನ್ನು ಕಾಪಾಡುತ್ತಾರೆ.

ಭ್ರಷ್ಟಾಚಾರ ವಿರುದ್ಧ ಹೋರಾಡುತಾರೆ.ಸಮಾನತೆ ಮತ್ತು ಮಾನವೀಯತೆಯ ಮೌಲ್ಯಗಳನ್ನು ಹರಡುತ್ತಾರೆ.

3. ದುಡಿಮೆ + ಸಂವಿಧಾನ ಜ್ಞಾನ = ಯಶಸ್ಸಿನ ಮಾರ್ಗ

ಯಶಸ್ಸು ಕೇವಲ ಪ್ರತಿಭೆಯಿಂದ ಮಾತ್ರವಲ್ಲ.

ಸಮಾಜದ ಕಾನೂನು, ಹಕ್ಕುಗಳು, ಅವಕಾಶಗಳು ಹೇಗೆ ಕೆಲಸ ಮಾಡುತ್ತವೆ ಎನ್ನುವುದರ ಅರಿವೂ ಅಗತ್ಯ.

ಸಂವಿಧಾನ ಇದನ್ನೇ ಕಲಿಸುತ್ತದೆ.

**ಇಂದಿನ ಯುವಕರಿಗೆ ಸಂವಿಧಾನ ದಾರಿ ದೀಪ**

ಸಂವಿಧಾನ ಯುವಕರಿಗೆ "ನೀನು ಬಯಸಿದ ಜೀವನ ಕಟ್ಟಿಕೊಳ್ಳು" ಎನ್ನುವ ಧೈರ್ಯ ಮತ್ತು ಹಕ್ಕು ನೀಡುತ್ತದೆ.

ನ್ಯಾಯು–ಸವಾನತೆ–ಸ್ವಾತಂತ್ರ್ಯ–ಭದ್ರತೆಇವನ್ನೆಲ್ಲ ಸಿಕ್ಕಿಸುವ ಮಂತ್ರವೇ ಸಂವಿಧಾನ.

ಸಂವಿಧಾನ ಓದಿದ ಯುವಕರು ಸಮಾಜದ ಸಮಸ್ಯೆಗಳಿಗೆ ಪರಿಹಾರ ಕಂಡುಹಿಡಿಯುವ ಚಿಂತನೆ ಹೊಂದುತ್ತಾರೆ.

ಅವರಲ್ಲಿ ಜವಾಬ್ದಾರಿ, ನೈತಿಕತೆ, ನಾಯಕತ್ವ, ದೇಶಾಭಿಮಾನ ಬೆಳೆಯುತ್ತದೆ.ಸಂವಿಧಾನ ದಿನಾಚರಣೆ ಕೇವಲ ಒಂದು ಆಚರಣೆಯಲ್ಲನಮ್ಮ ಹಕ್ಕುಗಳ ಮೂಲ ಇಂದಿಗೂ ಸಂವಿಧಾನದಲ್ಲೇ ಇದೆ.ನಮ್ಮ ಕರ್ತವ್ಯಗಳ ನೆನಪೂ ಸಂವಿಧಾನದಲ್ಲೇ ಇದೆ.

ನಮ್ಮ ಭವಿಷ್ಯ ಕಟ್ಟುವ ಬೀಗದ ಚಾವಿಯೂ ಇದೇ ಸಂವಿಧಾನ. ಯುವಕರು ಸಂವಿಧಾನದ ಮೌಲ್ಯಗಳನ್ನು ಹೃದಯಂಗಮಿಸಿಕೊಂಡರೆ

"ಸ್ವತಃ ಅಭಿವೃದ್ಧಿ + ಸಮಾಜ ಅಭಿವೃದ್ಧಿ = ರಾಷ್ಟ್ರಾಭಿವೃದ್ಧಿ"

ಎಂಬ ಮಹಾನ್ ಕನಸು ನಿಜವಾಗುತ್ತದೆ.ಈ ಸಂವಿಧಾನ ದಿನ, ಯುವಕರು ಸಂವಿಧಾನವನ್ನು ಕೇವಲ ಓದುವಷ್ಟೇ ಅಲ್ಲ,

ಜೀವನದಲ್ಲಿ ಅನುಸರಿಸುವ ಸಂಕಲ್ಪ ಮಾಡಬೇಕು.

ಅದೇ ನಿಜವಾದ ದಾರಿ ದೀಪ–ನಿಜವಾದ ಸಂವಿಧಾನ ಸ್ಮರಣೆ.



**ಡಾ ವೆಂಕಟೇಶ್ ಬಾಬು ಎಸ್ ಎಸ್**
**ದಾವಣಗೆರೆ**

# ರೈತರ ಬೆಳೆಗಳಿಗೆ ಖರೀದಿ ಕೇಂದ್ರ ತೆರೆಯದ ರಾಜ್ಯದ ಕಾಂಗ್ರೆಸ್ ಸರ್ಕಾರ ಶಾಸಕರ ಖರೀದಿ ಕೇಂದ್ರ ತೆರೆದಿದೆ: ಸಿ.ಟಿ.ರವಿ ವ್ಯಂಗ್ಯ

**ದಾವಣಗೆರೆ:** ಮೆಕ್ಕೆಜೋಳ ಖರೀದಿ ಕೇಂದ್ರ ತೆರೆಯಿರಿ ಅಂತಾ ಹೇಳಿದರೆ ಶಾಸಕರ ಖರೀದಿ ಕೇಂದ್ರ ತೆರೆದಿದ್ದಾರೆ ಎಂದು ಬಿಜೆಪಿ ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ರಾಜ್ಯ ಕಾಂಗ್ರೆಸ್ ಸರ್ಕಾರದಲ್ಲಿ ಉಲ್ಬಣಿಸುತ್ತಿರುವ ಸಿಎಂ ಕುರ್ಚಿ ಕಿತ್ತಾಟದ ಬಗ್ಗೆ ವ್ಯಂಗ್ಯವಾಡಿದ್ದಾರೆ.



ನಗರದ ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಬ್ಬಿಗೆ ಎಫ್‌ಆರ್‌ಪಿ ನಿಗದಿಪಡಿಸಿ ಅಂದ್ರೆ ಶಾಸಕರಿಗೆ ಎಫ್‌ಆರ್‌ಪಿ ಫಿಕ್ಸ್ ಮಾಡುತ್ತಿದ್ದೀರಿ. ಅದು ಮೆಟೀರಿಯಲ್ ಮೇಲೆ, ಗ್ರೇಡ್ ಮೇಲೆ ಶಾಸಕರ ರೇಟ್ ಡಿಪೆಂಡ್ ಆಗುತ್ತದೆ ಎಂದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಇದ್ದರೂ ಇಲ್ಲದಂತಾಗಿದೆ. ರೈತರ ಜೊತೆಗೆ ಚೆಲ್ಲಾಟ ಮಾಡದೇ, ಖರೀದಿ ಕೇಂದ್ರಗಳನ್ನು ತೆರೆಯಬೇಕು. ಕೇಂದ್ರ ಸರ್ಕಾರ ನಿಗದಿಪಡಿಸಿದ್ದ ದರಕ್ಕಿಂತಲೂ ಕಡಿಮೆ ದರವನ್ನು ಕಾಂಗ್ರೆಸ್ ಸರ್ಕಾರ ನಿಗದಿಪಡಿಸಿದೆ. ಭ್ರಷ್ಟಾಚಾರ, ಬೆಲೆ ಏರಿಕೆಗಳೆಲ್ಲಾ ಸಾಧನೆಯಾಗುವುದಿಲ್ಲ ಎಂದು ಕುಟುಕಿದರು.

ಅತೀ ಹೆಚ್ಚು ರೈತರ ಆತ್ಮಹತ್ಯೆ, ಸರ್ಕಾರಿ ನೌಕರರ ಆತ್ಮಹತ್ಯೆಗಳು ಸಾಧನೆಯಾಗಲ್ಲ. ಎಲ್ಲಾ ಪಕ್ಷಗಳಲ್ಲೂ ಸಕ್ಕರೆ ಕಾರ್ಖಾನೆಗಳ ಮಾಲೀಕರಿದ್ದಾರೆ. ಸಕ್ಕರೆ ಕಾರ್ಖಾನೆಗಳ ಮಾಲೀಕರ ಮರ್ಜಿಗೆ ಅನುಗುಣವಾಗಿ ವ್ಯವಸ್ಥೆ ಇದೆ. ನಮ್ಮ ಪಕ್ಷ ರೈತ ಹೋರಾಟದಿಂದಲೇ ಬಂದಿದ್ದು, ರೈತ ಪರ ಹೋರಾಟ ಮಾಡುತ್ತೇವೆ ಎಂದು ಹೇಳಿದರು.

ರಾಜ್ಯದಲ್ಲಿ ನಾವು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ನೇತೃತ್ವದಲ್ಲಿ ರೈತರ ಪರ ಹೋರಾಟ ಮಾಡುತ್ತೇವೆ. ತುಂಗ ಭದ್ರಾ ನಾಲೆಗಳ ಆಧುನೀಕರಣ ಮಾಡಿ ಅಂತಾ ನಾವು ಕೇಳಿದರೆ, ಮೈಸೂರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮನೆ, ಬೆಂಗಳೂರಿನಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಮನೆ, ಮಾಲ್‌ಗಳು ಆಧುನೀಕರಣವಾಗುತ್ತಿವೆ ಎಂದು ಟೀಕಿಸಿದರು.

ಕಾಂಗ್ರೆಸ್ ಸರ್ಕಾರವನ್ನು ಎಚ್ಚರಿಸಲು ಮೊದಲು 2 ಹಂತದ ಹೋರಾಟ ಮಾಡುತ್ತೇವೆ. ಅದಕ್ಕೆ ಸರ್ಕಾರ ಕಣ್ಣು ತೆರೆಯಲಿಲ್ಲವೆಂದರೆ ಅಧಿವೇಶನದಲ್ಲಿ ಹೋರಾಟ ಮಾಡುತ್ತೇವೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರದ 14–15 ಪ್ರಭಾವಿ ನಾಯಕರ ಸಕ್ಕರೆ ಕಾರ್ಖಾನೆಗಳಿವೆ. ಕೇಂದ್ರ ಸರ್ಕಾರವು 3550 ರು. ಎಫ್‌ಆರ್‌ಪಿ ನಿಗದಿಪಡಿಸಿದೆ. ನಾವು ಸಕ್ಕರೆ ಕಾರ್ಖಾನೆ ಮಾಲೀಕರ ಪರಇಲ್ಲ. ನಾವು ಎಂದೆಂದಿಗೂ ರೈತರ ಪರ ಎಂದು ಸ್ಪಷ್ಟಪಡಿಸಿದರು.

ಹುಬ್ಬಳ್ಳಿ, ಉದಯಗಿರಿ ಪೊಲೀಸ್ ಠಾಣೆಗಳ ಮೇಲೆ ದಾಳಿ ಮಾಡಿದವರ ಕೇಸ್ ವಾಪಾಸ್ಸು ಪಡೆದಿದ್ದೀರಿ. ಆದರೆ, ರೈತರು, ಕಾರ್ಮಿಕರು, ರೈತರ ಮಹಿಳೆಯರು, ಸ್ವಸಹಾಯ ಗುಂಪುಗಳಿಗೆ ಬಡ್ಡಿ ರಹಿತ ಸಾಲ ನೀಡುತ್ತೇವೆಂದಿದ್ದಿರಿ. ತುಂಗಭದ್ರಾ ನದಿ, ಡ್ಯಾಂ ಹೂಳೆತ್ತುತ್ತೇವೆಂದಿದ್ದಿರಿ. ಆದರೆ, ಅದೇ ಡ್ಯಾಂ ಗೇಟ್ ಇವೆಲ್ಲವನ್ನೂ ಸೇರಿಸಿ, ಶ್ವೇತಪತ್ರ ಹೊರಡಿಸುವಂತೆ ನಾವು ಒತ್ತಾಯಿಸುತ್ತೇವೆ. ರಾಜ್ಯಾದ್ಯಂತ ರೈತರನ್ನು ಸಂಘಟಿಸಿ, ಹೋರಾಟ ಮಾಡುತ್ತೇವೆ ಎಂದರು.

# ಎನ್‌ಪಿಎಸ್ ನೌಕರರ ಸಂಘದ ಜಿಲ್ಲಾ ಕಾರ್ಯಕಾರಿಣಿ




**ದಾವಣಗೆರೆ:** ಅಖಿಲ ಕರ್ನಾಟಕ ಎನ್‌ಪಿಎಸ್ ನೌಕರರ ಸಂಘದ ಜಿಲ್ಲಾ ಘಟಕದಿಂದ ನಗರದ ಮೇರಿ ದೇವಾಸಿಯಾ ಸಭಾ ಭವನದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ಕಾರ್ಯಕಾರಿಣಿ ಸಭೆಯನ್ನು ಸಂಘದ ರಾಜ್ಯಾಧ್ಯಕ್ಷ ಎಂ.ಎ ನಾಗನಗೌಡ ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿದರು.

ಇದೇ ವೇಳೆ ಮಾತನಾಡಿದ ಅವರು, ಎರಡನೇ ರಾಜ್ಯ ಕಾರ್ಯಕಾರಿಣಿಯನ್ನು ದಾವಣಗೆರೆಯಲ್ಲಿ ಡಿಸೆಂಬರ್ ತಿಂಗಳಿನಲ್ಲಿ ನಡೆಸಲಾಗುತ್ತಿದ್ದು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್. ಷಡಕ್ಷರಿ ಅವರು ಉದ್ಘಾಟಿಸಲಿದ್ದಾರೆ. ಅಂದು ರಾಜ್ಯ ನೌಕರರ ಸಂಘದ ಜೊತೆಗೆ ಸಮನ್ವಯ ಸಾಧಿಸಿ ಹೋರಾಟದ ಎಚ್ಚರಿಕೆಯ ಘಂಟೆಯನ್ನು ಬಾರಿಸುವ ಮೂಲಕ ರಾಜ್ಯ ಸರ್ಕಾರಕ್ಕೆ ಎನ್‌ಪಿಎಸ್ ತೊಲಗಿಸಿ ಓಪಿಎಸ್ ಪಡೆಯಲು ಉಗ್ರ ಸಂದೇಶ ರವಾನಿಸಲಾಗುವುದು ಎಂದರು.

ಕಾರ್ಯಕಾರಿಣಿ ಸಭೆಯಲ್ಲಿ ಸರ್ಕಾರಿ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷರು ಹಾಗೂ ಜಿಲ್ಲಾಧ್ಯಕ್ಷರು ಆದ ವೀರೇಶ ಎಸ್. ಒಡೇನಪುರ, ಕಾರ್ಯಾಧ್ಯಕ್ಷ ಪರಶುರಾಮಪ್ಪ, ಜಿಲ್ಲಾಧ್ಯಕ್ಷ ಬಿ. ಶಿವಣ್ಣ, ನೌಕರ ಸಂಘದ ಚನ್ನಗಿರಿ ಅಧ್ಯಕ್ಷ ಗಣೇಶ್, ರಾಜ್ಯ ಪದಾಧಿಕಾರಿಗಳಾದ ಮಂಜಮ್ಮ, ಸುಧಾ, ಗೋವಿಂದಪ್ಪ,

**ಎರಡನೇರಾಜ್ಯ ಕಾರ್ಯಕಾರಿಣಿಯನ್ನು ದಾವಣಗೆರೆಯಲ್ಲಿ ಡಿಸೆಂಬರ್ ತಿಂಗಳಿನಲ್ಲಿ ನಡೆಸಲಾಗುತ್ತಿದ್ದು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್. ಷಡಕ್ಷರಿ ಅವರು ಉದ್ಘಾಟಿಸಲಿದ್ದಾರೆ**

ಜಿಲ್ಲಾಧ್ಯಕ್ಷ ಮಂಜುನಾಥ್, ಮಲ್ಲಿಕಾರ್ಜುನ, ತಿಪ್ಪೇಸ್ವಾಮಿ, ಲೋಕೇಶ್, ಕರಿಬಸಪ್ಪ, ಗೌರವಾಧ್ಯಕ್ಷ ಮಾರುತಿ, ಕಿರಣ್,

ಪ್ರೌಢಶಾಲಾ ಶಿಕ್ಷಕರ ಸಂಘದ ತಾ. ಅಧ್ಯಕ್ಷ ಈಶಪ್ಪ ಬೂದಿಹಾಳ, ರಾಜ್ಯ ಮಾಧ್ಯಮ ಸಂಚಾಲಕಡಿಣ ಹಾಗೂ ನೌಕರ ಸಂಘದ ಖಜಾಂಚಿ ಎಮ್. ಗಿರೀಶ್,

ಪೀರ್ಯಾ ನಾಯಕ್, ಪರಶುರಾಮ್, ನಾಗರಾಜ್ ಗೋಪಾಲ್ ಪವಾರ್, ಜ್ಯೋತಿ ಕುಮಾರ್, ಪರಸಪ್ಪ, ಕಿರಣ್ ಕುಮಾರ್ ಭಾಗವಹಿಸಿದ್ದರು. ಜಿಲ್ಲಾ ಕಾರ್ಯದರ್ಶಿ ಆರ್.ಬಿ ಮಲ್ಲಿಕಾರ್ಜುನ ಸ್ವಾಗತಿಸಿದರು, ವಿ.ಟಿ. ಅನಿತಾ ಪ್ರಾರ್ಥಿಸಿದರು, ಗಿರೀಶ್.ಎಮ್ ರಾಜ್ಯ ಮಾಧ್ಯಮ ಸಂಚಾಲಕರು ವಂದಿಸಿದರು.

# ಪ್ರತಿಭೆ ಶೋಧಕ್ಕೆ ಪ್ರತಿಭಾ ಕಾರಂಜಿ ನೆರವಾಗಲಿ




**ಚಿಕ್ಕಮಗಳೂರು:**

ಪ್ರತಿಭಾಕಾರಂಜಿ ಕಾರ್ಯಕ್ರಮಗಳನ್ನು ಸದುಪಯೋಗಪಡಿಸಿಕೊಳ್ಳುವ ಕೆಲಸವಾಗಬೇಕಿದೆಅತಿ ಹೆಚ್ಚು ಪ್ರತಿಭೆಯನ್ನು ಹೊಂದಿರುವನಿಜವಾದ ಪ್ರತಿಭಾವಂತರನ್ನುಗುರುತಿಸುವ ನಿಟ್ಟಿನಲ್ಲಿಸರ್ಕಾರವು ಹಲವಾರು ವರ್ಷಗಳಿಂದ ಪ್ರತಿಭಾಕಾರಂಜಿಯನ್ನು ನೆಡೆಸಿಕೊಂಡು ಬಂದಿದೆಎಂದು ಶಾಸಕ ಹೆಚ್.ಡಿತಮ್ಮಯ್ಯ ತಿಳಿಸಿದರು.

ಬೀಕನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಮೊರಾರ್ಜಿದೇಸಾಯಿ ವಸತಿ ಶಾಲೆಯಲ್ಲಿ ನೆಡೆದಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್, ಗ್ರಾಮ ಪಂಚಾಯತ್ ಬೀಕನಹಳ್ಳಿ, ಶಾಲಾ ಶಿಕ್ಷಣ ಇಲಾಖೆ, ಸಮಾಜಕಲ್ಯಾಣ ಇಲಾಖೆ, ಚಿಕ್ಕಮಗಳೂರು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿಇಂದಾವರಕ್ಲಸ್ಟರ್ ಮಟ್ಟದಕಿರಿಯ ಮತ್ತು ಹಿರಿಯ ಪ್ರಾಥಮಿಕ ಶಾಲೆಗಳ 2025–26ರಪ್ರತಿಭಾಕಾರಂಜಿಯನ್ನುಉದ್ಘಾಟಿಸಿ ಮಾತನಾಡಿದರು.

ದೇಶಿ ಕಲೆಗಳನ್ನು ಜೀವಂತವಾಗಿಡಲು ಹಾಗೂ ವಿದ್ಯಾರ್ಥಿಗಳಿಗೆ ಗ್ರಾಮೀಣ ಕಲೆಗಳನ್ನು ಪರಿಚಯಿಸಲು ಪ್ರತಿಭಾಕಾರಂಜಿ ಕಾರ್ಯಕ್ರಮಗಳು ಸಹಕಾರಿಯಾಗಲಿವೆ, ಶಿಕ್ಷಕರು ಮಕ್ಕಳಲ್ಲಿನ ಸೂಕ್ತ ಪ್ರತಿಭೆಅನಾವರಣ ಮಾಡುವುದಕ್ಕೆ ಪ್ರತಿಭಾಕಾರಂಜಿಉತ್ತಮ ವೇದಿಕೆಯಾಗಿದೆಎಂದರು.

ಈ ಸಂದರ್ಭದಲ್ಲಿ ಬೀಕನಹಳ್ಳಿ ಗ್ರಾಮ ಪಂಚಾಯಿತಿಅಧ್ಯಕ್ಷೆ ಲೀಲಾವತಿ ಪುಟ್ಟೇಗೌಡ, ಎಪಿಎಂಸಿ ಮಾಜಿಅಧ್ಯಕ್ಷರಾಜೀವ್, ಗ್ರಾಮ ಪಂಚಾಯಿತಿ ಸದಸ್ಯರಾದ ಮಂಜೇಗೌಡ, ವಿಜಯ್‌ಕುಮಾರ್, ಪೋಷಕರಾದರಾಜೇಶ್, ರವಿ, ಅಜಿತ್, ನಾಗೇಶ್,ಜಾನಕಮ್ಮ, ಶಕಿಲಾಬಾನು, ಮುಖ್ಯ ಶಿಕ್ಷಕ ಶರಣ ಬಸಪ್ಪ ಪಾಟೀಲ್ ಸ್ವಾಗತಿಸಿ ವಂದಿಸಿದರು.

# ಕುಕ್ಕೆ: 110 ಭಕ್ತರಿಂದ ಎಡೆ ಸ್ನಾನ

**ಸುಬ್ರಹ್ಮಣ್ಯ (ದಕ್ಷಿಣ ಕನ್ನಡ):** ಕುಕ್ಕೆ ಸುಬ್ರಹ್ಮಣ್ಯ ಚಂಪಾ ಷಷ್ಠಿ ಜಾತ್ರಾ ಮಹೋತ್ಸವದ ಅಂಗವಾಗಿ ಸೋಮವಾರ ದೇವಳದ ಹೊರಾಂಗಣದಲ್ಲಿ 110 ಸೇವಾರ್ಥಿಗಳು ಎಡೆಸ್ನಾನ ಉರುಳು ಸೇವೆ ನೆರವೇರಿಸಿದರು.

ಹೊರಾಂಗಣದಲ್ಲಿ ಸುತ್ತಲೂ ಹಾಕಿದ್ದ ಬಾಳೆ ಎಲೆ, ಅದಕ್ಕೆ ಬಡಿಸಿದ್ದ ದೇವರ ನೈವೇದ್ಯವನ್ನು ಗೋವುಗಳಿಂದ ತಿನ್ನಿಸಿ ಬಳಿಕ ಹರಕೆ ಹೊತ್ತವರು ಉರುಳು ಸೇವೆ ನೆರವೇರಿಸಿದರು. ಅದಕ್ಕೂ ಮೊದಲು ಸೇವೆ ಮಾಡುವ ಭಕ್ತರು ದರ್ಪಣ ತೀರ್ಥದಲ್ಲಿ ಮಿಂದು ಅಲ್ಲಿಂದ ಸರತಿ ಸಾಲಿನಲ್ಲಿ ಬಂದು ಎಡೆ ಸೇವೆ ನೆರವೇರಿಸಿದರು

# ಇಂದು ಸಂವಿಧಾನ ದಿನಾಚರಣೆ ಅಂಗವಾಗಿ ಮೆರವಣಿಗೆ

**ಗದಗ:** ನವೆಂಬರ್ 26 ರಂದು ಸಂವಿಧಾನ ದಿನಾಚರಣೆಯ ಪ್ರಯುಕ್ತ ಬುದುವಾರ ಬೆಳಿಗ್ಗೆ 8 ಗಂಟೆಗೆ ಗದಗ ನಗರಸಭೆಯ ಆವರಣದಲ್ಲಿರುವ ಸಂವಿಧಾನ ಶಿಲ್ಪಿ ಡಾ॥ಬಿ.ಆರ್ ಅಂಬೇಡ್ಕರ ರವರ ಮೂರ್ತಿಗೆ ಮಾಲಾರ್ಪಣೆ ಮಾಡುವುದರೊಂದಿಗೆ ನಗರ ಸಭೆಯಿಂದ ಜಿಲ್ಲಾಡಳಿತ ಭವನದವರೆಗೆ ಮೆರವಣಿಗೆ ಜಾಥಾ ಹಮ್ಮಿಕೊಳ್ಳಲಾಗುವುದು,

ಹಾಗೂ ಬೆಳಗ್ಗೆ 11 ಗಂಟೆಗೆ ಜಿಲ್ಲಾಡಳಿತ ಭವನದ ಅಡಿಟೋರಿಯಮ್ ಹಾಲ್‌ನಲ್ಲಿ ವೇದಿಕೆ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುವ ಕಾರಣ ಮೆರವಣಿಗೆ ಹಾಗೂ ವೇದಿಕೆ ಕಾರ್ಯಕ್ರಮಗಳಲ್ಲಿ ಗೌರವಾನ್ವಿತ ಜನಪ್ರತಿನಿದಿಗಳು, ಎಲ್ಲಾ ಜಿಲ್ಲಾಮಟ್ಟದ ಅಧಿಕಾರಿಗಳು,

ತಾಲೂಕು ಮಟ್ಟದ ಅಧಿಕಾರಿಗಳು, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ, /ಹಿಂದುಳಿದ ವರ್ಗ/ಅಲ್ಪಸಂಖ್ಯಾತ ವರ್ಗಗಳ ಸಮಾಜದ ಮುಖಂಡರು, ಸರ್ವಸದಸ್ಯರು, ಗಣ್ಯ ವ್ಯಕ್ತಿಗಳು, ಸಂಘ ಸಂಸ್ಥೆಯ ಪದಾಧಿಕಾರಿಗಳು ಸಂವಿಧಾನ ದಿನಾಚಣೆಯ ಕಾಯಕ್ರಮಗಳಲ್ಲಿ ಭಾಗವಹಿಸುವಂತೆ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ಸಂಕೀರ್ತನಾ ಯಾತ್ರೆ ಮೆರವಣಿಗೆ ಅನುಮತಿಗೆ ಏಕ ಗವಾಕ್ಷಿ ತಂಡ ರಚನೆ

**ಚಿಕ್ಕಮಗಳೂರು:** ಶ್ರೀ ಗುರು ದತ್ತಾತ್ರೇಯ ಬಾಬಾ ಬುಡನ್ ಸ್ವಾಮಿ ದರ್ಗಾ, ಐ.ಡಿ.ಪೀಠದಲ್ಲಿ ಭಜರಂಗ ದಳ, ವಿಶ್ವ ಹಿಂದೂ ಪರಿಷತ್ ಮತ್ತು ಇತರ ಹಿಂದೂಪರ ಸಂಘಟನೆಗಳ ಕಾರ್ಯಕರ್ತರು ಡಿಸೆಂಬರ್ 2 ರಿಂದ 4ರವರೆಗೆ ದತ್ತ ಜಯಂತಿ ಆಚರಿಸುತ್ತಿರುವ ಹಿನ್ನೆಲೆಯಲ್ಲಿ ಜಿಲ್ಲಾದ್ಯಂತ ಸಂಕೀರ್ತನಾ ಯಾತ್ರೆ ಮೆರವಣಿಗೆ ನಡೆಯಲಿದೆ. ಈ ಸಂಬಂಧದ ಮೈಕ್ ಲೈಸೆನ್ಸ್ ಅನುಮತಿ, ಬ್ಯಾನರ್ ಬಂಟಿಂಗ್ಸ್, ಫ್ಲೆಕ್ಸ್ ಅಳವಡಿಕೆ, ಧಾರ್ಮಿಕ ವೇದಿಕೆ ಕಾರ್ಯಕ್ರಮಗಳು, ಸಾಂಸ್ಕೃತಿಕ ಕಾರ್ಯಕ್ರಮಗಳು, ಬೈಕ್ ರ್‍ಯಾಲಿ ಮೆರವಣಿಗೆ ಸಾಗುವ ಮಾರ್ಗಗಳು, ವಿದ್ಯುತ್ ದೀಪಾಲಂಕಾರ ಇತ್ಯಾದಿಗಾಗಿ ಏರ್ಪಡಿಸುವ ಕಾರ್ಯಕ್ರಮಗಳಿಗೆ ಆಯೋಜಕರಿಗೆ ಪರವಾನಗಿ, ಅನುಮತಿಯನ್ನು ನೀಡುವ ಸಂಬಂಧ ಅನುಕೂಲವಾಗುವಂತೆ ನವೆಂಬರ್ 24 ರ ಬೆಳಿಗ್ಗೆ 10 ಗಂಟೆಯಿಂದ ನವೆಂಬರ್ 30ರ ಸಂಜೆ 5 ಗಂಟೆಯವರೆಗೆ ಈ ಕೆಳಕಂಡ ಅಧಿಕಾರಿಗಳನ್ನು ಒಳಗೊಂಡಂತೆ ಏಕ ಗವಾಕ್ಷಿ ತಂಡವನ್ನು ರಚಿಸಿ ಆದೇಶ ನೀಡಲಾಗಿದೆ.

ಈ ತಂಡದಲ್ಲಿ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರು ಅಧ್ಯಕ್ಷರಾಗಿ ಹಾಗೂ ಸದಸ್ಯರಾಗಿ ಜಿ.ಪಂ.ಉಪಕಾರ್ಯದರ್ಶಿ-(ಆಡಳಿತ), ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಇಂಜಿನಿಯರ್, ಮೆಸ್ಕಾಂ ಕಾರ್ಯಪಾಲಕ ಇಂಜಿನಿಯರ್, ನಗರಸಭೆ ಪೌರಾಯುಕ್ತರು ಕಾರ್ಯ ನಿರ್ವಹಿಸಲಿದ್ದಾರೆ. ನಗರ ಪೊಲೀಸ್ ಠಾಣೆಯ ಉಪನಿರೀಕ್ಷಕ ಧನರಾಜ್ ಅವರು ಈ ಸಮಿತಿಯ ಸದಸ್ಯ ಕಾರ್ಯದರ್ಶಿಯಾಗಿರಲಿದ್ದಾರೆ. ನಿಯೋಜಿಸಲಾಗಿರುವ ಅಧಿಕಾರಿಗಳು ತಕ್ಷಣದಿಂದ ಜಾರಿಗೆ ಬರುವಂತೆ ಪರಸ್ಪರ ಸಮನ್ವಯ ಸಾಧಿಸಿಕೊಂಡು ಕಾರ್ಯಪ್ರವೃತ್ತರಾಗುವಂತೆ ಜಿಲ್ಲಾ ದಂಡಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳು ಆದ ಸಿ.ಎನ್.ಮೀನಾ ನಾಗರಾಜ್ ಅವರು ಆದೇಶ ಹೊರಡಿಸಿದ್ದಾರೆ.

# ಇಂದು ತಾಲ್ಲೂಕು ಮಟ್ಟದ ಪ್ರತಿಭಾ ಕಾರಂಜಿ

**ರಾಮನಗರ:** ಜಿಲ್ಲಾ ಪಂಚಾಯತ್, ರಾಮನಗರ ತಾಲ್ಲೂಕು ಪಂಚಾಯತ್ ಹಾಗೂ ಶಾಲಾ ಶಿಕ್ಷಣ ಇಲಾಖೆ ವತಿಯಿಂದ ತಾಲ್ಲೂಕು ಮಟ್ಟದ ಪ್ರತಿಭಾ ಕಾರಂಜಿ 2025-26 ಕಾರ್ಯಕ್ರಮವನ್ನು ನ.26ರ ಬುಧವಾರ ಬೆಳಿಗ್ಗೆ 10 ಗಂಟೆಗೆ ನಗರದ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜು (ಪ್ರೌಢಶಾಲಾ ವಿಭಾಗ) ಆವರಣದಲ್ಲಿ ಆಯೋಜಿಸಲಾಗಿದೆ.

ರಾಜ್ಯದ ಉಪಮುಖ್ಯಮಂತ್ರಿಗಳು, ಭಾರಿ ಮತ್ತು ಮಧ್ಯಮ ನೀರಾವರಿ, ಬೆಂಗಳೂರು ನಗರ ಅಭಿವೃದ್ಧಿ ಹಾಗೂ ಬೆಂಗಳೂರು ನಗರ ಉಸ್ತುವಾರಿ ಸಚಿವರಾದ ಡಿ.ಕೆ. ಶಿವಕುಮಾರ್ ಅವರು ಘನ ಉಪಸ್ಥಿತಿ ವಹಿಸುವರು.

ಸಾರಿಗೆ, ಮುಜರಾಯಿ ಇಲಾಖೆ ಹಾಗೂ ಬೆಂಗಳೂರು ದಕ್ಷಿಣ ಜಿಲ್ಲಾ ಉಸ್ತುವಾರಿ ಸಚಿವರಾದ ರಾಮಲಿಂಗಾರೆಡ್ಡಿ ಅವರು ಕಾರ್ಯಕ್ರಮ ಉದ್ಘಾಟಿಸುವರು. ರಾಮನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ಎಚ್.ಎ. ಇಕ್ಬಾಲ್ ಹುಸೇನ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸಂಸದರಾದ ಡಾ. ಸಿ.ಎನ್. ಮಂಜುನಾಥ್, ಕರ್ನಾಟಕ ರಾಜ್ಯ ರಸ್ತೆ ಅಭಿವೃದ್ಧಿ ನಿಗಮದ ಅಧ್ಯಕ್ಷರು ಮತ್ತು ಮಾಗಡಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಎಚ್.ಸಿ. ಬಾಲಕೃಷ್ಣ, ವಿಧಾನ ಪರಿಷತ್ ಶಾಸಕರಾದ ಎಸ್. ಪುಟ್ಟಣ್ಣ, ಎಸ್. ರವಿ, ರಾಮೋಜಿ ಗೌಡ, ಸುಧಾಮ್ ದಾಸ್, ರಾಜ್ಯ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಎಚ್.ಎಂ. ರೇವಣ್ಣ, ಬೆಂಗಳೂರು ದಕ್ಷಿಣ ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಕೆ. ರಾಜು, ಕರ್ನಾಟಕ ರೇಷ್ಮೆ ಮಾರಾಟ ಮಂಡಳಿ ಅಧ್ಯಕ್ಷರಾದ ಎಸ್. ಗಂಗಾಧರ್, ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಎನ್. ನಟರಾಜು ಗಾಣಕಲ್, ರಾಮನಗರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಚೇತನ್ ಕುಮಾರ್, ರಾಮನಗರ ನಗರಸಭೆ ಅಧ್ಯಕ್ಷರಾದ ಕೆ. ಶೇಷಾದ್ರಿ (ಶಶಿ), ಉಪಾಧ್ಯಕ್ಷರಾದ ಆಯಿಷಾ ಬಾನು, ಜಿಲ್ಲಾ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ (ಅಭಿವೃದ್ಧಿ) ವೆಂಕಟೇಶ್ ಹಾಗೂ ಜಿಲ್ಲಾ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ (ಆಡಳಿತ) ಸ್ವಾಮಿ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

# ಹಿರಿಯ ನಾಗರಿಕರಿಗೆ ಗೌರವ ಕೊಡುವುದು ಬಹುಮುಖ್ಯ



**ಹಾಸನ :** ಹುಟ್ಟಿದ ಮನುಷ್ಯಯಾವಾಗ ಸಾಯುತ್ತಾನೆಎಂದುಗೊತ್ತಿರುವುದಿಲ್ಲ ಆದರೆ ಬದುಕಿದ್ದ ಸಂದರ್ಭದಲ್ಲಿ ಹಿರಿಯ ನಾಗರಿಕರಿಗೆಎಷ್ಟು ಬೆಲೆ, ಗೌರವಕೊಡುತ್ತೇವೆಎನ್ನುವುದು ಬಹುಮುಖ್ಯಎಂದು ಪ್ರಧಾನಜಿಲ್ಲಾಮತ್ತು ಸತ್ರ ನ್ಯಾಯಾಧೀಶರಾದ ಹೇಮಾವತಿಅವರು ತಿಳಿಸಿದ್ದಾರೆ.

ಸಾಮಾಜಿಕ ನ್ಯಾಯಾ ಮತ್ತು ಸಬಲೀಕರಣ ಮಂತ್ರಾಲಯ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ ಮತ್ತುಜಿಲ್ಲಾಪಂಚಾಯಿತಿ, ಹಿರಿಯ ನಾಗರೀಕರ ಸ್ವಯಂ ಸೇವಾ ಸಂಸ್ಥೆಗಳು ಇವರ ಸಹಯೋಗದಲ್ಲಿಂದುಜಿಲ್ಲಾ ಪಂಚಾಯಿತಿ ಹೊಯ್ಸಳ ಸಭಾಂಗಣದಲ್ಲಿಅಟಲ್‌ಅಭ್ಯುದಯಯೋಜನೆಕುರಿತುಅಧಿಕಾರಿಗಳಿಗೆ ಆಯೋಜಿಸಿದ್ದ ಒಂದು ದಿನದಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದಅವರು ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಸರ್ಕಾರದ ಯೋಜನೆಗಳನ್ನು ಜನಸಾಮಾನ್ಯರಿಗೆತ್ವರಿತವಾಗಿತಲುಪಿಸಲು ಕ್ರಮವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಹೆತ್ತು, ಒತ್ತು ಸಾಕಿ ಸಲುಹಿಸಿ ಜೀವನಕೊಟ್ಟು ಸಮಾಜಕ್ಕೆಉತ್ತಮ ಪ್ರಜೆಯನ್ನಾಗಿ ಮಾಡಿದತಂದೆ ತಾಯಿಗಳನ್ನು ಮಕ್ಕಳು ವೃದ್ಧಾಪ್ಯದಲ್ಲಿ ಸರಿಯಾಗಿ ನೋಡಿಕೊಳ್ಳದೆ ಅವರನ್ನುವೃದ್ಧಾಶ್ರಮಗಳಿಗೆ ಹಾಕುತ್ತಿದ್ದಾರೆ.

ಅಧಿಕಾರಿಗಳು

ತಮ್ಮಜವಾಬ್ದಾರಿಯನ್ನುಅರಿತು

ಸಾರ್ವಜನಿಕರಿಗೆ ಸ್ಪಂದಿಸಿ ಸಾಮಾಜಿಕ ಕಳಕಳಿಯಿಂದ ಚಿಂತಿಸಿ ಕರ್ತವ್ಯ ನಿರ್ವಹಿಸುವ ಮೂಲಕಹಿರಿಯ ನಾಗರೀಕರಿಗೆ ಸರ್ಕಾರದ ಸವಲತ್ತುಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ನಿಗಾವಹಿಸಿ ಎಂದು ತಿಳಿಸಿದರು.

ಹಿರಿಯ ನಾಗರೀಕರ ಹಕ್ಕುಗಳ ಸಂರಕ್ಷಣೆಕಾಯ್ದೆ 2007 ರ ಬಗ್ಗೆ ಗಮನಹರಿಸಿ ತುಳಿತಕ್ಕೆ ಒಳಗಾದವರಿಗೆ ಶೀಘ್ರವಾಗಿ ಪರಿಹಾರದೊರಕಿಸಲುಕ್ರಮವಹಿಸುವಂತೆ ತಿಳಿಸಿದರು.

ಜಿಲ್ಲಾಧಿಕಾರಿ ಲತಾಕುಮಾರಿಅವರು ಮಾತನಾಡಿದೇಶದ ಸಾಮಾಜಿಕ ವ್ಯವಸ್ಥೆಯನ್ನು ಸದೃಡಗೊಳಿಸಲು ಹಿರಿಯ ನಾಗರೀಕರ ಹಕ್ಕುಗಳ ಸಂರಕ್ಷಣೆಕಾಯ್ದೆಯನ್ನು ಜಾರಿಗೊಳಿಸಲಾಗಿದೆ.ಆದರೆ ಆ ಕಾಯ್ದೆ ಪ್ರಯೋಜನವನ್ನು ಎಷ್ಟು ಜನರು ಪಡೆಯುತ್ತಿದ್ದಾರೆ,ಈ ಕಾಯ್ದೆ ಬಗ್ಗೆ ಅಧಿಕಾರಿಗಳಿಗೆ ಎಷ್ಟು ಗೊತ್ತಿದೆಎನ್ನುವುದುಒಂದು ಪ್ರಶ್ನೆಯಾಗಿದೆ.ಈ ನಿಟ್ಟಿನಲ್ಲಿ ಅಧಿಕಾರಿಗಳು ಹೆಚ್ಚಿನ ಗಮನಹರಿಸಿ ಹಿರಿಯ ನಾಗರೀಕರ ಹಕ್ಕುಗಳ ಸಂರಕ್ಷಣೆಗೆಒತ್ತು ನೀಡಿ,ಒಂದುತಂಡವಾಗಿಕರ್ತವ್ಯ ನಿರ್ವಹಿಸಬೇಕು ಎಂದರು.

ಯಾವುದೇದೇಶದಪ್ರಗತಿಯಲ್ಲಿದ ುರ್ಬಲ ವರ್ಗದವರನ್ನುಜೊತೆಯಾಗಿಸೇರಿಸಿಕೊಂಡು ಸಮಾಜಮುಖಿಯಾಗಿಮುಂದುವರೆಯುವ ಮೂಲಕ ಅಭಿವೃದ್ಧಿಕಾಣಬೇಕುಎಂದರಲ್ಲದೆ, ಹಿರಿಯರು ಸಮಾಜದ ಅವಿಭಾಜ್ಯ ಅಂಗ ಅವರ ಹಿತಕಾಯುವುದು ಪ್ರತಿಯೊಬ್ಬರಕರ್ತವ್ಯಎಂದರು.

5 ನೇ ಹೆಚ್ಚುವರಿಜಿಲ್ಲಾ ಮತ್ತು ಸತ್ರ ನ್ಯಾಧೀಶರಾದರವಿಕುಮಾರ್ ಹೆಚ್.ಆರ್. ಅವರು ನಿರ್ವಹಣಾ ನ್ಯಾಯ ಮಂಡಳಿಯ ಪ್ರಕ್ರಿಯೆ, ಅಧಿಕಾರಿಗಳು ವಿಳಂಬಮತ್ತು ಸವಾಲುಗಳುತ್ವರಿತಮತ್ತು ನ್ಯಾಯಯುತ ಪರಿಹಾರಗಳಕುರಿತುಉಪನ್ಯಾಸ ನೀಡಿ ಮಾತನಾಡುತ್ತ ಪ್ರತಿಯೊಬ್ಬರಿಗೂ ಸ್ವತಂತ್ರಯುತವಾಗಿ ನಿರ್ಭಿತಿಯಿಂದಜೀವನ ನಡೆಸುವಅವಕಾಶವಿದೆ. ಹಿರಿಯ ನಾಗರೀಕರ ಸಂರಕ್ಷಣೆಗಾಗಿ 2007 ರಲ್ಲಿಕಾಯ್ದೆಜಾರಿಗೆತರಲಾಗಿದೆ. ತಂದೆತಾಯಿಜೀವನ ನಡೆಸಲುಯಾವುದೆ ವರಮಾನಇಲ್ಲದಿದ್ದ ಸಂದರ್ಭದಲ್ಲಿ ಮಕ್ಕಳಿಂದ ಜೀವಾನಾಂಶ ಪಡೆಯಲುಅವಕಾಶವಿದೆಎಂದರು.

ತಂದೆತಾಯಿಅವರು ವಾಸ ಮಾಡುತ್ತಿರುವವ್ಯಾಪ್ತಿಯಲಿ ್ಲ ಉಪ ವಿಭಾಗಾಧಿಕಾರಿಗಳಿಗೆ ಜೀವನಾಂಶಕೋರಿಅರ್ಜಿ

ಸಲ್ಲಿಸಿದ ಸಂದರ್ಭದಲ್ಲಿ ಮಕ್ಕಳಿಗೆ ನೋಟೀಸ್ ನೀಡಿ, 90 ದಿನಗಳಲ್ಲಿ ಪ್ರಕರಣಇತ್ಯರ್ಥಪಡಿಸಬೇಕು. ಆದಾಯದ ಮೂಲ ಅನುಸರಿಸಿಜೀವನಾಂಶಕ್ಕೆಆದೇಶ ನೀಡಬೇಕುಎಂದರು.

ನಿಗದಿತಕಾಲಾವಧಿಯಲಿ ್ಲ ಪ್ರಕರಣಗಳು ಇತ್ಯರ್ಥಗೊಳ್ಳದೆ ಸಮಯ ಹಿಡಿಯುವುದರಿಂದಅವರಜೀವನ ನಡೆಸಲು ಅನುಕೂಲವಾಗುವಂತ 'ಮಧ್ಯಂತರಜೀವನಾಂಶಕ್ಕೆಆದೇಶ ಮಾಡಬೇಕುಎಂದರಲ್ಲದೆ, 30 ದಿನದೊಳಗೆ ಹಣವನ್ನುಠೇವಣಿಇಡಬೇಕುಎಂದು ತಿಳಿಸಿದರು.

ತಂದೆತಾಯಿ ಮತ್ತು ಮಕ್ಕಳ ಬಾಂದವ್ಯಬೆಸೆಯಲುಸಂಧಾನ ಮಾಡಲು ಪ್ರಯತ್ನಿಸಬೇಕುಎಂದಅವರು ದಿನ ಪತ್ರಿಕೆಗಳಲ್ಲಿ ಪ್ರಕಟವಾಗಿರುವ ಸುದ್ದಿಯನ್ನಾಧಾರಿಸಿ ಉಪ ವಿಭಾಗಾಧಿಕಾರಿಯವರುಸ್ವಯಂ ಪ್ರೇರಿತವಾಗಿ ಪ್ರಕರಣ ದಾಖಲಿಸಿಕೊಳ್ಳಲು ಅವಕಾಶವಿದೆಎಂದು ತಿಳಿಸಿದರು.

ಹಿರಿಯ ಸಿವಿಲ್ ನ್ಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ದಾಕ್ಷಾಯಿಣಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿತಮ್ಮಯ್ಯ, ವಿಕಲಚೇತನ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಅಧಿಕಾರಿಕೆ.ಆರ್.ಅನುಪಮಮತ್ತಿತರರುಉಪಸ್ಥಿತರಿದ್ದರು.

# ಸಂವಿಧಾನ ದಿನಾಚರಣೆ ಪ್ರಯುಕ್ತ ನಡಿಗೆ ಜಾಥಾ

**ಶಿವಮೊಗ್ಗ:** 26-11-2025 ರಂದು ಜಿಲ್ಲಾ ಮಟ್ಟದಲ್ಲಿ ಸಂವಿಧಾನ ದಿನಾಚರಣೆ ಕಾರ್ಯಕ್ರಮವನ್ನು ಆಚರಿಸಲಾಗುತ್ತಿದ್ದು, ಈ ಕಾರ್ಯಕ್ರಮದ ಪ್ರಯುಕ್ತ ಬೆಳಗ್ಗೆ 08.30 ಕ್ಕೆ ಶಿವಮೊಗ್ಗ ನಗರದ ಅಲ್ಲಮಪ್ರಭು ಸ್ವತಂತ್ರ ಉದ್ಯಾನದಲ್ಲಿನ ಸಂವಿಧಾನ ಪೀಠಿಕೆ ಪ್ರತಿಮೆಯಿಂದ ಡಾ.ಬಿ.ಆರ್ ಅಂಬೇಡ್ಕರ್ ಭವನದವರೆಗೆ ಶಾಲಾ ಕಾಲೇಜು ವಿದ್ಯಾರ್ಥಿಗಳು ಹಾಗೂ ನಾಗರೀಕರೊಂದಿಗೆ ರಾಷ್ಟ್ರ ಧ್ವಜ ಪ್ರದರ್ಶನ ಹಾಗೂ ಸಂವಿಧಾನ ಘೋಷಣೆಯೊಂದಿಗೆ ಕಾಲ್ನಡಿಗೆ ಜಾಥಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿರುತ್ತದೆ.

ವೇದಿಕೆ ಕಾರ್ಯಕ್ರವನ್ನು ಬೆಳಗ್ಗೆ 10.30ಕ್ಕೆ ಡಾ. ಬಿ.ಆರ್ ಅಂಬೇಡ್ಕರ್ ಭವನ ಇಲ್ಲಿ ಆಯೋಜಿಸಲಾಗಿದ್ದು, ಈ ಕಾರ್ಯಕ್ರಮಕ್ಕೆ ವಿವಿಧ ಸಂಘಟನೆಯ ಮುಖಂಡರುಗಳು ಹಾಗೂ ನಾಗರೀಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಮಲ್ಲೇಶಪ್ಪ ಕೋರಿದ್ದಾರೆ.

# ಮೆಸ್ಕಾಂ ಜನ ಸಂಪರ್ಕ ಸಭೆ

**ಶಿವಮೊಗ್ಗ :** ಭದ್ರಾವತಿ ಮೆಸ್ಕಾಂ ಗ್ರಾಮೀಣ ಉಪವಿಭಾಗ ಕಛೇರಿಯಲ್ಲಿ ಡಿ.27 ರಂದು ಬೆಳಿಗ್ಗೆ 11.00 ರಿಂದ 01.00 ರವರೆಗೆ ಜನಸಂಪರ್ಕ ಸಭೆ ನಡೆಯಲಿದೆ. ಈ ಸಭೆಯಲ್ಲಿ ಮೆಸ್ಕಾಂನ ಅಧಿಕಾರಿಗಳು ಭಾಗವಹಿಸಲ್ಲಿದ್ದು ಸಂಬಂಧಪಟ್ಟ ಪ್ರದೇಶದ ಗ್ರಾಹಕರ ಅಹವಾಲುಗಳನ್ನು ಸ್ವೀಕರಿಸುವುದರಿಂದ ಈ ಅವಕಾಶವನ್ನು ಗ್ರಾಹಕರು ಸದುಪಯೋಗಪಡಿಸಿಕೊಳ್ಳುವಂತೆ ಮೆಸ್ಕಾಂ ಪ್ರಕಟಣೆ ತಿಳಿಸಿದೆ.ಸಂಪರ್ಕಿಸಬಹುದಾದ ದೂರವಾಣಿಸಂಖ್ಯೆ:.9448289507.

# ಹೆಣ್ಣು ಸಂಕುಲವೇ ಒಂದು ಜಾತಿ: ಡಾ.ನಾಗಲಕ್ಷ್ಮಿ ಚೌದರಿ

**ಶಿವಮೊಗ್ಗ:** ಹೆಣ್ಣನ್ನು ಯಾವುದೇ ಜಾತಿಗೆ ಸೇರಿಸಬೇಡಿ. ಯಾಕೆಂದರೆ ಹೆಣ್ಣು ಸಂಕುಲವೇ ಒಂದು ಜಾತಿ ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮಿ ಚೌದರಿ ಹೇಳಿದರು.

ಸಹ್ಯಾದ್ರಿ ಕಲಾ ಮತ್ತು ವಿಜ್ಞಾನ ಕಾಲೇಜು ಹಾಗೂ ಕರ್ನಾಟಕ ರಾಜ್ಯ ಮಹಿಳಾ ಆಯೋಗ ಸಹಯೋಗದೊಂದಿಗೆ ಸೋಮವಾರ ನಗರದ ಸಹ್ಯಾದ್ರಿ ಕಲಾ ಕಾಲೇಜಿನ ಜಯಚಾಮರಾಜೇಂದ್ರ ಸಭಾಂಗಣದಲ್ಲಿ ಆಯೋಜಿಸಿದ್ದ ವಿದ್ಯಾರ್ಥಿಗಳೊಂದಿಗಿನ ಸಂವಾದ ಮತ್ತು ಕಾನೂನು ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.




ಹೆಣ್ಣಿಗೆ ಅಸಾಧ್ಯ ಎನ್ನವುದು ಯಾವುದು ಇಲ್ಲ. ಆಕೆ ವಿಭಿನ್ನ, ಧೈರ್ಯವಂತೆ. ಮಾತೃತ್ವದ ಶಕ್ತಿಯನ್ನು ಹೊಂದಿರುವ ಆಕೆ ಸಾವನ್ನೇ ಗೆದ್ದು ಮನುಜಕುಲವನ್ನು ಸೃಷ್ಟಿಸುತ್ತಾಳೆ. ಆದರೂ ಕೂಡ ಯಾವುದೇ ಧರ್ಮ, ಜಾತಿ ಮಹಿಳೆಗೆ ಸಮಾನತೆ ಕೊಟ್ಟಿಲ್ಲ. ಅನಾದಿಕಾಲದಿಂದಲೂ ತಳ ಸಮುದಾಯಕ್ಕಿಂತ ಕೀಳಾಗಿ ಆಕೆಯ ಮೇಲೆ ಶೋಷಣೆ ಹಾಗೂ ತಾರತಮ್ಯ ನಡೆಸುತ್ತಾ ಬರಲಾಗಿದೆ. ಆದ್ದರಿಂದ ಆಕೆ ಯಾವ ಜಾತಿಗೆ ಸೇರಿಲ್ಲ, ಅವಳದ್ದೇ ಒಂದು ಜಾತೆ ಎಂದು ಅಭಿಪ್ರಾಯಪಟ್ಟರು.

ಹೆಣ್ಣು ಎಲ್ಲವನ್ನು ಧೈರ್ಯದಿಂದ ಎದುರಿಸುವ ಶಕ್ತಿಯನ್ನು ಬೆಳೆಸಿಕೊಳ್ಳಬೇಕು. ಈ ಮಣ್ಣಿನ ಗಟ್ಟಿಗಿತ್ತಿಯಾದ ಕೆಳದಿ ಚೆನ್ನಮ್ಮನ ರಕ್ತ ನಿಮ್ಮಲ್ಲೂ ಹರಿಯಬೇಕು. ಅನ್ಯಾಯವಾದಾಗ ಸುಮ್ಮನೆ ಇರದೆ ಧ್ವನಿ ಎತ್ತಬೇಕು. ಮಹಿಳೆಯರು ರಾಜಕಾರಣಕ್ಕೆ ಬಂದು ಈ ದೇಶದ ಬದಲಾವಣೆಗೆ ಕಾರಣರಾಗಬೇಕು.

ಇತ್ತೀಚಿನ ದಿನಗಳಲ್ಲಿ ಸೈಬರ್ ಕ್ರೈಂ ನಲ್ಲಿ ಮೂಕ್ಕಾಲು ಭಾಗ ಮಹಿಳೆಯರನ್ನು ಗುರಿಯಾಗಿಸುವ ಪ್ರಕರಣಗಳೇ ಇವೆ. ಮಹಿಳೆ ಭಾವನೆಗಳಲ್ಲಿ ಎಷ್ಟು ಬಲಶಾಲಿಯೋ ಅದು ಅಷ್ಟೇ ದುರ್ಬಲವಾಗಿರುವುದೂ ಇದಕ್ಕೆ ಕಾರಣವಾಗಿದ್ದು, ಅತಿ ಎಚ್ಚರಿಕೆಯಿಂದಿರಬೇಕು.

ಕಾಲೇಜುಗಳಲ್ಲಿ ಮಹಿಳೆಯರೊಂದಿಗೆ, ವಿದ್ಯಾರ್ಥಿನಿಯರೊಂದಿಗೆ ಉಪನ್ಯಾಸಕರು ಗೌರವದಿಂದ ನಡೆದುಕೊಳ್ಳಬೇಕು. ಸರ್ಕಾರಿ ಸೌಲಭ್ಯವನ್ನು ಸರಿಯಾಗಿ ತಲುಪಿಸಬೇಕು. ಇಲ್ಲದಿದ್ದಲ್ಲಿ ಕಾಲೇಜಿನ ಆಂತರಿಕ ದೂರು ಸಮಿತಿಗೆ ದೂರ ನೀಡಿ ಎಂದು ತಿಳಿಸಿದರು.

ಇಂದಿನ ಯುವ ಮನಸ್ಸುಗಳು ಸಕ್ರಿಯವಾದ ರಾಜಕಾರಣವನ್ನು ತಿಳಿದುಕೊಳ್ಳಬೇಕು. ಹೋರಾಟಗಾರರೆಲ್ಲಾ ಸೇರಿ ಈ ರಾಜ್ಯವನ್ನು ಕಟ್ಟಿದ್ದಾರೆ. ಈ ದೇಶದ ಭವಿಷ್ಯವನ್ನು ಬದಲಾಯಿಸಲು ರಾಜಕಾರಣ ಒಂದು ಪ್ರಗತಿಯ ಬೀಗವಾಗಿದೆ. ರಾಜಕಾರಣದಲ್ಲಿ ಮಾತ್ರ ಜಾತಿ ಇರುವುದು. ಯುವ ಮನಸ್ಸುಗಳಲ್ಲಿ ಅಂತಹ ಯಾವುದೇ ಕಲ್ಮಶ ಇಲ್ಲ. ಅವರಿಗೆ ಬೇಕಾಗಿರುವುದು ಉದ್ಯೋಗ, ಶಿಕ್ಷಣ ಹಾಗೂ ಉಜ್ವಲ ಭವಿಷ್ಯ ಮಾತ್ರ ಎಂದರು.

ಶಿವಮೊಗ್ಗ ಜಿಲ್ಲೆ ಶೈಕ್ಷಣಿಕವಾಗಿ, ರಾಜಕೀಯವಾಗಿ, ಸಾಮಾಜಿಕವಾಗಿ ಹಾಗೂ ಕೃಷಿ ಕ್ಷೇತ್ರದಲ್ಲಿ ತುಂಬಾ ಮುಂದುವರೆದಿದೆ. ಇಂತಹ ಜಿಲ್ಲೆಯಲ್ಲಿ ಹುಟ್ಟಿರುವ ನೀವೆಲ್ಲರೂ ಪುಣ್ಯವಂತರು. ಸಹ್ಯಾದ್ರಿ ಕಾಲೇಜಿನಲ್ಲಿ ಓದಿರುವ ಅನೇಕ ಮಹನೀಯರು ನಾಡಿನ ಕಲೆ, ಸಾಹಿತ್ಯ, ಹೋರಾಟಕ್ಕೆ ಹಲವಾರು ಕೊಡುಗೆ ನೀಡಿದ್ದಾರೆ.

ಯಾವ ವಿಶ್ವವಿದ್ಯಾಲಯ ಕಲಿಸದ ಪಾಠವನ್ನು ಬದುಕು ಕಲಿಸುತ್ತದೆ. ಅವಮಾನ, ಸೋಲು ಹಸಿವಿನ ಮಹತ್ವವನ್ನು ಹೇಳಿ ಕೊಡುತ್ತದೆ. ಅವೆಲ್ಲವನ್ನೂ ಗೆದ್ದು ಮುಂದೆ ಸಾಗುವುದು ಮುಖ್ಯ. ಕುವೆಂಪು ಅವರ ವಿಶ್ವಮಾನವ ಪರಿಕಲ್ಪನೆ ನಾವೆಲ್ಲಾ ಪಾಲಿಸಬೇಕು ಆಗ ಮಾತ್ರ ಉಜ್ವಲ ನಾಡನ್ನು ಕಟ್ಟಲು ಸಾಧ್ಯವಾಗುತ್ತದೆ ಎಂದರು.

ಕಾಲೇಜಿನ ಪ್ರಾಂಶುಪಾಲರಾದ ಡಾ.ಸಿರಾಜ್ ಅಹಮ್ಮದ್ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಕರ್ನಾಟಕ ಮಹಿಳಾ ವಕೀಲರ ರಾಜ್ಯ ಒಕ್ಕೂಟದ ಜಿಲ್ಲಾಧ್ಯಕ್ಷೆ ಸರೋಜ ಪಿ.ಚೆಂಗೊಳ್ಳಿ, ವಿಜ್ಞಾನ ಕಾಲೇಜಿನ ಪ್ರಾಂಶುಪಾಲರಾದ ಡಾ.ಎನ್.ರಾಜೇಶ್ವರಿ, ವಿದ್ಯಾರ್ಥಿ ಕ್ಷೇಮಾಧಿಕಾರಿ ಡಾ.ಕೆ.ಎನ್.ಮಂಜುನಾಥ್, ಐಕ್ಯೂಎಸಿ ಸಂಚಾಲಕರುಗಳಾದ ಪ್ರೊ. ಜಿ.ಕೃಷ್ಣಮೂರ್ತಿ, ಡಾ.ಮಂಜುನಾಥ್ ಹೆಚ್.ಪಿ., ಕಾಲೇಜಿನ ಮಹಿಳಾ ಸಬಲೀಕರಣದ ಘಟಕದ ಸಂಚಾಲಕರಾದ ಡಾ.ಹಾಲಮ್ಮ ಎಂ., ಡಾ.ಕೆ.ಎನ್. ಮಹಾದೇವಸ್ವಾಮಿ, ಸಂಗೀತ, ವಿವಿಧ ವಿಭಾಗದ ಉಪನ್ಯಾಸಕರುಗಳು ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

## 8ನೇ ರಾಷ್ಟ್ರೀಯ ಪ್ರಕೃತಿ ಚಿಕಿತ್ಸಾ ದಿನಾಚರಣೆ

# ರೋಗದ ಶಾಶ್ವತ ಪರಿಹಾರಕ್ಕೆ ಪ್ರಕೃತಿ ಚಿಕಿತ್ಸಾ ಪದ್ಧತಿ ಅನುಸರಿಸಲು ಕರೆ.



**ಚಿತ್ರದುರ್ಗ:** ಮಾನವನ ಅಸ್ತಿತ್ವ, ಬದುಕು ಮತ್ತು ಸಂಸ್ಕೃತಿಯು ಸಂಪೂರ್ಣವಾಗಿ ಪ್ರಕೃತಿಯ ಮೇಲೆ ಅವಲಂಬಿತವಾಗಿದೆ.ಪ್ರಕೃತಿ ಚಿಕಿತ್ಸಾ ಪದ್ಧತಿ ಯಾವುದೇ ರೋಗಗಳಿಗೆ ಶಾಶ್ವತ ಪರಿಹಾರವಾಗಿದ್ದು ಹೆಚ್ಚಿನ ಜನರು ಪ್ರಕೃತಿ ಚಿಕಿತ್ಸೆ ಪಡೆದು ಇದನ್ನು ಉಳಿಸಿಬೆಳೆಸಬೇಕಿದೆ ಎಂದು ಪ್ರಕೃತಿ ಚಿಕಿತ್ಸಾ ವೈದ್ಯೆ ಡಾ.ನಿಧಿ ಎನ್ ಅಭಿಪ್ರಾಯ ಪಟ್ಟಿದ್ದಾರೆ.

ಧರ್ಮಸ್ಥಳ ಶ್ರೀಮಂಜುನಾಥೇಶ್ವರ ಪ್ರಕೃತಿ ಚಿಕಿತ್ಸಾಲಯ ಉಜಿರೆ ಸಹಯೋಗದೊಂದಿಗೆ ಭಾರತೀಯ ಯೋಗ ಶಿಕ್ಷಣ ಸಂಸ್ಥೆ ಚಿತ್ರದುರ್ಗ ಇವರು

8ನೇ ರಾಷ್ಟ್ರೀಯ ಪ್ರಕೃತಿ ಚಿಕಿತ್ಸಾ ದಿನಾಚರಣೆ ಅಂಗವಾಗಿ ಬುಧವಾರ ನಗರದ ತುರುವನೂರು ರಸ್ತೆಯ ಶ್ರೀ ಪ್ರಸನ್ನ ವೆಂಕಟೇಶ್ವರ ಸ್ವಾಮಿ ಕಲ್ಯಾಣ ಮಂಟಪದಲ್ಲಿ ಆಯೋಜಿಸಿದ್ದ ಪ್ರಕೃತಿ ಚಿಕಿತ್ಸಾ ದಿನಾಚರಣೆ ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿ ಅವರು ಮಾತನಾಡುತ್ತಾ

ಪ್ರಕೃತಿ ಚಿಕಿತ್ಸೆ (naturopathy) ಎನ್ನುವುದು ದೇಹ, ಮನಸ್ಸು ಮತ್ತು ಮನಸ್ಸಿನ ಸಮಗ್ರ ಆರೋಗ್ಯಕ್ಕಾಗಿ ಬಳಸಲಾಗುವ ನೈಸರ್ಗಿಕ ವಿಧಾನವಾಗಿದೆ ಎಂದು ತಿಳಿಸಿದರು.

ಇದೇ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಕು. ಡಾ.ಶುಭ ಮಾತನಾಡಿ ಪ್ರಕೃತಿ ಚಿಕಿತ್ಸೆಯು ದೇಹದ ಸ್ವಯಂ ಗುಣಪಡಿಸುವ ಸಾಮರ್ಥ್ಯಗಳಿಗೆ ಒತ್ತು ನೀಡುವ ಒಂದು ಸಮಗ್ರ (Holistic) ಆರೋಗ್ಯ ರಕ್ಷಣಾ ವ್ಯವಸ್ಥೆಯಾಗಿದೆ. ಇದು ಕೇವಲ ರೋಗಲಕ್ಷಣಗಳಿಗೆ ಚಿಕಿತ್ಸೆ ನೀಡುವ ಬದಲು, ವ್ಯಕ್ತಿಯ ದೈಹಿಕ, ಮಾನಸಿಕ ಮತ್ತು ಸಾಮಾಜಿಕ ಯೋಗಕ್ಷೇಮದ ಮೇಲೆ ಕೇಂದ್ರೀಕರಿಸುತ್ತದೆ.ನಮ್ಮ ದೇಹವು ಪೃಥ್ವಿ, ಜಲ, ಅಗ್ನಿ, ವಾಯು, ಆಕಾಶ ಎಂಬ ಪಂಚಮಹಾಭೂತಗಳಿಂದ ನಿರ್ಮಿತವಾಗಿದೆ. ಈ ಚಿಕಿತ್ಸೆಯು ಅವುಗಳ ಸಮತೋಲನವನ್ನು ಕಾಪಾಡಿಕೊಳ್ಳುವ ಮೂಲಕ ಆರೋಗ್ಯವನ್ನು ಸುಧಾರಿಸುತ್ತದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಯೋಗ ಪ್ರಚಾರಕ ರವಿ ಕೆ.ಅಂಬೇಕರ್ ಪ್ರಕೃತಿ ಚಿಕಿತ್ಸಾ ಪದ್ಧತಿ ದಿನಾಚರಣೆ ಮಹತ್ವ ಕುರಿತು ಮಾತನಾಡಿ

1945 ರ ನವೆಂಬರ್ 18 ರಂದು ಮಹಾತ್ಮ ಗಾಂಧೀಜಿಯವರು ಅಖಿಲ ಭಾರತ ನೇಚರ್ ಕ್ಯೂರ್ ಫೌಂಡೇಶನ್ ಟ್ರಸ್ಟ್‌ನ ಆಜೀವ ಸದಸ್ಯರಾದರು ಮತ್ತು ಆ ಒಪ್ಪಂದಕ್ಕೆ ಸಹಿ ಹಾಕಿದರು. ಭಾರತದಲ್ಲಿ ಪ್ರಕೃತಿ ಚಿಕಿತ್ಸೆಯನ್ನು ಜನಪ್ರಿಯಗೊಳಿಸುವಲ್ಲಿ ಮತ್ತು ಜನಸಾಮಾನ್ಯರಿಗೆ ಅದರ ಪ್ರಯೋಜನಗಳನ್ನು ತಲುಪಿಸುವಲ್ಲಿ ಗಾಂಧೀಜಿಯವರ ಕೊಡುಗೆಯನ್ನು ಸ್ಮರಿಸಲು ಈ ದಿನವನ್ನು ಆಯ್ಕೆ ಮಾಡಲಾಗಿದೆ. ಔಷಧಿರಹಿತವಾದ ಈ ಚಿಕಿತ್ಸಾ ವಿಧಾನ ಮತ್ತು ಅದರ ಪ್ರಯೋಜನಗಳ ಬಗ್ಗೆ ಜನರಲ್ಲಿ ಅರಿವು ಮೂಡಿಸುವುದು ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು.

ನಿತ್ಯವಾಣಿ ದಿನಪತ್ರಿಕೆ ಸಂಪಾದಕರಾದ ನವೀನಕುಮಾರ್ ಉಪಸ್ಥಿತಿಯಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಭಾರತೀಯ ಯೋಗ ಶಿಕ್ಷಣ ಸಂಸ್ಥೆಯ ಯೋಗ ಸಾಧಕರು ಸೇರಿದಂತೆ ಹಲವಾರು ಸಾರ್ವಜನಿಕರು ಭಾಗವಹಿಸಿ ಕಾರ್ಯಕ್ರಮಸ ಪ್ರಯೋಜನ ಪಡೆದರು.

# ಭಾರತದ ಐಕ್ಯತೆಗಾಗಿ ಪ್ರತಿಯೊಬ್ಬರೂ ದೇಶಪ್ರೇಮ ಹೊಂದಬೇಕು: ವೈ.ಎಂ.ಸತೀಶ್

**ಬಳ್ಳಾರಿ:** ಮೊದಲು ನಾವು ಭಾರತೀಯರು. ಜಾತಿ, ಮತ, ಪಂಥ, ಭೇದಭಾವ ಮರೆತು ನಾವೆಲ್ಲರೂ ಭಾರತದ ಐಕ್ಯತೆಗಾಗಿ ಶ್ರಮಿಸುವ ಮೂಲಕ ದೇಶಪ್ರೇಮ ಹೊಂದಬೇಕು ಎಂದು ವಿಧಾನಪರಿಷತ್ ಸದಸ್ಯ ವೈ.ಎಂ.ಸತೀಶ್ ಅವರು ಕರೆ ನೀಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕೇಂದ್ರ ಸರ್ಕಾರದ ಯುವ ಕಾರ್ಯ ಮತ್ತು ಕ್ರೀಡಾ ಸಚಿವಾಲಯದಡಿಯ ಮೇರಾ ಯುವ ಭಾರತ್ ಕೇಂದ್ರ, ಮಹಾನಗರ ಪಾಲಿಕೆ, ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ, ರಾಷ್ಟ್ರೀಯ ಯೋಜನಾ ಘಟಕ, ಜಿಲ್ಲೆಯ ಎಲ್ಲಾ ಪದವಿಪೂರ್ವ ಕಾಲೇಜುಗಳು,

ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಇವರ ಸಂಯುಕ್ತಾಶ್ರಯದಲ್ಲಿ ಉಕ್ಕಿನ ಮನುಷ್ಯ ಮತ್ತು ರಾಷ್ಟ್ರೀಯ ಏಕತೆಯ ಪ್ರತಿಪಾದಕ ಸರ್ದಾರ್ ವಲ್ಲಭಭಾಯಿ ಅವರ 150 ನೇ ಜನ್ಮ ದಿನಾಚರಣೆ ಅಂಗವಾಗಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಬುಧವಾರ ಏರ್ಪಡಿಸಿದ್ದ ಏಕತಾ ನಡಿಗೆಯ ವೇದಿಕೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಭಾರತದ ಮೊದಲ ಉಪಪ್ರಧಾನ ಮಂತ್ರಿ ಹಾಗೂ ಗೃಹ ಸಚಿವರಾಗಿದ್ದ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರು ಭಾರತದ 'ಉಕ್ಕಿನ ಮನುಷ್ಯ' ಎಂದೇ ಪ್ರಖ್ಯಾತರಾಗಿದ್ದರು. ಭಾರತದ 550 ಕ್ಕೂ ಹೆಚ್ಚು ರಾಜಪ್ರಭುತ್ವದ ರಾಜ್ಯಗಳನ್ನು ಭಾರತಕ್ಕೆ ಸೇರಿಸುವಲ್ಲಿ ಮುಖ್ಯ ಪಾತ್ರವಹಿಸಿದ್ದರು ಎಂದು ತಿಳಿಸಿದರು.

ದೇಶಕ್ಕೆ ಸ್ವಾತಂತ್ರ ಬಂದ ನಂತರ, ಒಂದುಗೂಡಿಸಿದ ಭಾರತದ ನಿರ್ಮಾಣದಲ್ಲಿ ಅವರ ಕೊಡುಗೆ ಅಪಾರವಾಗಿದೆ. ಅಖಿಲ ಭಾರತ ನಾಗರಿಕ ಸೇವೆಯನ್ನು ಸ್ಥಾಪಿಸಿದರು ಎಂದು ತಿಳಿಸಿದ ಅವರು. ಯುವಪೀಳಿಗೆಯು ದೇಶಭಕ್ತಿ ಮತ್ತು ದೇಶಪ್ರೇಮ ಹೊಂದುವ ಮೂಲಕ ಭಾರತದ ಐಕ್ಯತೆ ಹಾಗೂ ಅಭಿವೃದ್ಧಿಗಾಗಿ ಕೈಜೋಡಿಸಬೇಕು ಎಂದು ಹೇಳಿದರು.




2018ರ ಅ.31 ರಂದು ದೇಶದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಗುಜರಾತ್‌ನ

ನರ್ಮದಾ ನದಿಯ ದಡದಲ್ಲಿ ಪಟೇಲ್ ಅವರ 182 ಮೀ. ಎತ್ತರದ ಏಕತಾ ಪ್ರತಿಮೆಯನ್ನು ಉದ್ಘಾಟಿಸಿದರು ಎಂದರು.

ಕಾರ್ಯಕ್ರಮದಲ್ಲಿ ಆತ್ಮ ನಿರ್ಭರ ಭಾರತ್ ಕುರಿತಾಗಿ ಪ್ರತಿಜ್ಞಾ ವಿಧಿ ಸ್ವೀಕರಿಸಲಾಯಿತು. ಬಳಿಕ ಸಾಂಸ್ಕೃತಿಕ ಕಾರ್ಯಕ್ರಮ ನಡೆದವು.

*ಗಮನಸೆಳೆದ ಏಕತಾ ನಡಿಗೆ:*

ಕಾರ್ಯಕ್ರಮಕ್ಕೂ ಮುನ್ನ ಸರ್ದಾರ್ ವಲ್ಲಭಬಾಯಿ ಪಟೇಲ್ ಅವರ 150 ನೇ ಜನ್ಮ ದಿನಾಚರಣೆ ಅಂಗವಾಗಿ ನಗರದಲ್ಲಿ ಪ್ರಮುಖ ಬೀದಿಗಳಲ್ಲಿ ಜರುಗಿದ ಏಕತಾ ನಡಿಗೆ ಜನರ ಗಮನಸೆಳೆಯಿತು.

ಏಕತಾ ನಡಿಗೆಯಲ್ಲಿ ವಿವಿಧ ಪದವಿಪೂರ್ವ ಕಾಲೇಜು ವಿದ್ಯಾರ್ಥಿಗಳು, ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು, ಸಾರ್ವಜನಿಕರು

ಒಳಗೊಂಡಂತೆ ಸಹಸ್ರಾರು ಜನ ಭಾಗವಹಿಸಿದ್ದು ವಿಶೇಷವಾಗಿತ್ತು.

ನಡಿಗೆಗೆ ವಿಧಾನಪರಿಷತ್ ಸದಸ್ಯ ವೈ. ಎಂ.ಸತೀಶ್, ಬಳ್ಳಾರಿ ಮಹಾನಗರ ಪಾಲಿಕೆಯ ಮೇಯರ್ ಪಿ.ಗಾದೆಪ್ಪ ಅವರು ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು.

ನಡಿಗೆಯು ನಗರದ ಡಾ.ರಾಜ್ ಕುಮಾರ್ ರಸ್ತೆಯ ಸರ್ಕಾರಿ (ಮಾ.ಪು) ಪದವಿಪೂರ್ವ ಕಾಲೇಜು ಮೈದಾನದಿಂದ ಆರಂಭಗೊಂಡು ಗಡಿಗಿ ಚೆನ್ನಪ್ಪ ವೃತ್ತ- ಬೆಂಗಳೂರು

ರಸ್ತೆ- ಹಳೆಯ ಬ್ರೂಸ್ ಪೇಟೆ ಪೊಲೀಸ್ ಠಾಣೆಯ ಮುಂಭಾಗ- ಹೆಚ್.ಆರ್.ಗವಿಯಪ್ಪ ವೃತ್ತ- ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದ ವೇದಿಕೆ ಕಾರ್ಯಕ್ರಮದ ವರೆಗೆ ನಡೆಯಿತು.

ಈ ವೇಳೆ ಮೇರಾ ಯುವ ಭಾರತ್ ಕೇಂದ್ರದ ಜಿಲ್ಲಾ ಯುವ ಅಧಿಕಾರಿ ಸಂಜೀವ್ ಬೊಕ್ಕೆ,

ವಿಜಯನಗರ ಶ್ರೀ ಕೃಷ್ಣದೇವರಾಯ ವಿವಿಯ ಎನ್‌ಎಸ್‌ಎಸ್ ಘಟಕದ ಯೋಜನಾಧಿಕಾರಿ ಡಾ.ಕುಮಾರ್, ಮಹಾನಗರ ಪಾಲಿಕೆ ಸದಸ್ಯರಾದ ಶ್ರೀನಿವಾಸ್ ಮೋತ್ಕಾರ್,

ಸುರೇಖಾ ಮಲ್ಲನಗೌಡ, ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಹೆಚ್.ಹನುಮಂತಪ್ಪ, ಜಿಲ್ಲಾ ಸಂಚಾಲಕರಾದ ಅನೀಲ್ ಕುಮಾರ್ ಮೋಕಾ, ಹುಲುಗಮ್ಮ, ಎಂ.ಎಸ್.ಸುಂಕಪ್ಪ ಸೇರಿದಂತೆ ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು, ಸ್ವಯಂ-ಸೇವಕರು, ಪದವಿಪೂರ್ವ ಕಾಲೇಜು ವಿದ್ಯಾರ್ಥಿಗಳು, ಸಾರ್ವಜನಿಕರು ಹಾಗೂ ಇತರರು ಉಪಸ್ಥಿತರಿದ್ದರು.

# ಇಂದು ನಗರದಲ್ಲಿ ಸಂವಿಧಾನ ದಿನಾಚರಣೆ

**ಚಿಕ್ಕಮಗಳೂರು:** ನಗರದಲ್ಲಿ ನವೆಂಬರ್ ಇಂದು ಬೆಳಿಗ್ಗೆ 10 ಗಂಟೆಗೆ ಇಲ್ಲಿನ ಕುವೆಂಪು ಕಲಾಮಂದಿರದಲ್ಲಿ ಸಂವಿಧಾನ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. ಇದಕ್ಕೂ ಮೊದಲು ಬೆಳಿಗ್ಗೆ 9 ಗಂಟೆಗೆ ನಗರದ ತಾಲ್ಲೂಕು ಕಚೇರಿಯಿಂದ ಕುವೆಂಪು ಕಲಾಮಂದಿರದವರೆಗೆ ಮೆರವಣಿಗೆ ನಡೆಯಲಿದೆ. ಈ ಕಾರ್ಯಕ್ರಮಕ್ಕೆ ಸರ್ವರೂ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಇಂದು ಸಂವಿಧಾನ ದಿನಾಚರಣೆ

**ರಾಮನಗರ:** ದೇಶಾದ್ಯಂತ ಪ್ರತಿವರ್ಷ ನ.26ರಂದು ಸಂವಿಧಾನ ದಿನಾಚರಣೆಯನ್ನು ಆಚರಿಸಲಾಗುತ್ತದೆ, ಪ್ರಸಕ್ತ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನ.26ರಂದು ಜಿಲ್ಲಾ ಮಟ್ಟದಲ್ಲಿ ಸಂವಿಧಾನ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಗಿದೆ.

ಅಂದು ಬೆಳಿಗ್ಗೆ 9.30ಕ್ಕೆ ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಜಾಥಾದೊಂದಿಗೆ ಸಾಗಿ ನಂತರ ಬೆಳಿಗ್ಗೆ 10.30ಕ್ಕೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ವೇದಿಕೆ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳ ಕಚೇರಿ ಪ್ರಕಟಣೆ ತಿಳಿಸಿದೆ.

# ಶೇ.50% ರಷ್ಟು ರಿಯಾಯಿತಿಯಲ್ಲಿ ದಂಡ ಪಾವತಿಗೆ ಅವಕಾಶ :ಆರ್‌ಟಿಓ

**ಶಿವಮೊಗ್ಗ:** ಸಾರಿಗೆ ಇಲಾಖೆಯಲ್ಲಿ ವಾಹನಗಳ ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳನ್ನು ಶೇಕಡಾ 50% ರಷ್ಟು ದಂಡ ಪಾವತಿಸಿ ಇತ್ಯರ್ಥಪಡಿಸಿಕೊಳ್ಳಲು ಸರ್ಕಾರ ಅವಕಾಶ ಕಲ್ಪಿಸಿದೆ. ವಾಹನ ಮಾಲೀಕರು ತಮ್ಮ ವಾಹನದ ವಿರುದ್ಧ ದಾಖಲಾಗಿರುವ ಪ್ರಕರಣ ಸಂಬಂಧ ದಂಡ ಮೊತ್ತದ ಅರ್ಧದಷ್ಟು ಪಾವತಿ ಮಾಡಬಹುದಾಗಿದೆ.

1990–91 ರಿಂದ 2019–20 ರೊಳಗೆ ಪ್ರಾದೇಶಿಕ ಸಾರಿಗೆ ಕಛೇರಿ (ಆರ್.ಟಿ.ಓ) ಅಧಿಕಾರಿಗಳು ದಾಖಲಿಸಿರುವ ಪ್ರಕರಣಗಳು ಮಾತ್ರ ಶೇಕಡಾ 50% ರಷ್ಟು ದಂಡ ಪಾವತಿ ರಿಯಾಯಿತಿ ವ್ಯಾಪ್ತಿಗೆ ಒಳಪಡುತ್ತವೆ. ಶಿವಮೊಗ್ಗ ಜಿಲ್ಲಾ ವ್ಯಾಪ್ತಿಯಲ್ಲಿ ಸದರಿ ಅವಧಿಯಲ್ಲಿ 790 ಪ್ರಕರಣಗಳು ಇತ್ಯರ್ಥಕ್ಕೆ ಬಾಕಿಯಿದ್ದು ಸಂಬಂಧಪಟ್ಟ ವಾಹನ ಮಾಲೀಕರು ಡಿ.12 ರೊಳಗೆ ರಿಯಾಯಿತಿ ಬಳಸಿಕೊಂಡು ದಂಡ ಪಾವತಿಸಿ ಪ್ರಕರಣ ಮುಕ್ತಾಯಗೊಳಿಸಿ ಕೊಳ್ಳಬಹುದಾಗಿದೆ ಎಂದು ಆರ್.ಟಿ.ಓ ಮುರಗೇಂದ್ರ.ಬಿ.ಶಿರೋಲ್ಕರ್ ಇವರು ತಿಳಿಸಿದ್ದಾರೆ.

# ಉಚಿತ ಸಿಸಿಟಿವಿ ಅಳವಡಿಕೆ ಮತ್ತು ಸರ್ವೀಸಿಂಗ್ ತರಬೇತಿ

**ಚಿಕ್ಕಮಗಳೂರು:** ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊಸಕೋಟೆ ತಾಲ್ಲೂಕು ಸೊಣ್ಣಹಳ್ಳಿಪುರದಲ್ಲಿರುವ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆಯಲ್ಲಿ ಡಿಸೆಂಬರ್ 15 ರಿಂದ 13 ದಿನಗಳ ಕಾಲ ನಿರುದ್ಯೋಗಿ ಪುರುಷರಿಗೆ ಉಚಿತ ಸಿಸಿಟಿವಿ ಅಳವಡಿಕೆ ಮತ್ತು ಸರ್ವೀಸಿಂಗ್ ತರಬೇತಿ ಶಿಬಿರವನ್ನು ಏರ್ಪಡಿಸಿದೆ.

ಸ್ವಯಂ ಉದ್ಯೋಗಿಗಳಾಗಲು ಬಯಸುವ 18 ರಿಂದ 45 ವರ್ಷ ವಯಸ್ಸಿನ ಕರ್ನಾಟಕ ರಾಜ್ಯದ ಯಾವುದೇ ಜಿಲ್ಲೆಯ ನಿರುದ್ಯೋಗಿ ಪುರುಷರು ಈ ಶಿಬಿರದಲ್ಲಿ ಪಾಲ್ಗೊಳ್ಳಬಹುದು. ಈ ಶಿಬಿರದ ಸಮಯದಲ್ಲಿ ತರಬೇತಿ, ಊಟ ಹಾಗೂ ವಸತಿ ಸೌಕರ್ಯಗಳನ್ನು ಶಿಬಿರಾರ್ಥಿಗಳಿಗೆ ಉಚಿತವಾಗಿ ಕಲ್ಪಿಸಲಾಗುವುದು. ಗ್ರಾಮೀಣ ಭಾಗದ ಬಿಪಿಎಲ್ ಅಭ್ಯರ್ಥಿಗಳಿಗೆ ಮೊದಲ ಆದ್ಯತೆ ನೀಡಲಾಗುವುದು. ಅಭ್ಯರ್ಥಿಗಳು ಸ್ಥಳೀಯ ಭಾಷೆ ಬಲ್ಲವರಾಗಿದ್ದು, ಕನ್ನಡ ಓದಲು ಮತ್ತು ಬರೆಯಲು ತಿಳಿದಿರಬೇಕು. ತರಬೇತಿ ನಂತರ ಕೇಂದ್ರ ಸರ್ಕಾರದ ಗ್ರಾಮೀಣ ಸಚಿವಾಲಯದಿಂದ ಪ್ರಮಾಣ ಪತ್ರವನ್ನು ವಿತರಿಸಲಾಗುವುದು.

ಆಸಕ್ತಿಯುಳ್ಳ ಶಿಬಿರಾರ್ಥಿಗಳು ಡಿಸೆಂಬರ್ 4 ರಂದು ಬೆಳಿಗ್ಗೆ 9.30 ಗಂಟೆಗೆ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ, ಸೊಣ್ಣಹಳ್ಳಿಪುರ, ಹಸಿಗಾಳ (ಅಂಚೆ), ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇಲ್ಲಿ ನಡೆಯುವ ನೇರ ಸಂದರ್ಶನಕ್ಕೆ ವಿದ್ಯಾರ್ಹತೆಗಳೊಂದಿಗೆ ಮತ್ತು ವಿಳಾಸ ದಾಖಲಾತಿಗಳೊಂದಿಗೆ ಹಾಜರಾಗಬೇಕಾಗಿ ಈ ಮೂಲಕ ಸೂಚಿಸಲಾಗಿದೆ. ಸಂದರ್ಶನಕ್ಕೆ ಹಾಜರಾಗಲು ಅಸಾಧ್ಯವಾದಲ್ಲಿ ಡಿಸೆಂಬರ್ 4 ರೊಳಗೆ ಸಂಸ್ಥೆಯನ್ನು ಈ ಕೆಳಕಂಡ ದೂರವಾಣಿ ಸಂಖ್ಯೆ 8970476050, 9591514154, 9686248369, 9505894247 ಗಳಿಗೆ ಸಂಪರ್ಕಿಸಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದೆಂದು ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನ.27 ರಂದು ಪ್ರಗತಿ ಪರಿಶೀಲನಾ ಸಭೆ

**ಹಾಸನ:** ಯುವ ಸಬಲೀಕರಣ ಮತ್ತುಕ್ರೀಡಾಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಹಾಗೂ ಹಾಸನ ಜಿಲ್ಲಾ ಪಂಚಾಯಿತಿಯ ಆಡಳಿತಾಧಿಕಾರಿಗಳು ಮತ್ತು ಹಾಸನ ಜಿಲ್ಲಾಉಸ್ತುವಾರಿ ಕಾರ್ಯದರ್ಶಿಗಳಾದ ನವೀನ್‌ರಾಜ್ ಸಿಂಗ್ ಅವರಅಧ್ಯಕ್ಷತೆಯಲ್ಲಿ 2025–26ನೇ ಸಾಲಿನ ಅಕ್ಟೋಬರ್–2025 ರ ಮಾಹೆಯಅಂತ್ಯದ ಪ್ರಗತಿ ಪರಿಶೀಲನಾ ಸಭೆಯನ್ನು ಹಾಸನ ಜಿಲ್ಲಾ ಪಂಚಾಯಿತಿಯ ಹೊಯ್ಸಳ ಸಭಾಂಗಣದಲ್ಲಿ ನ.27. ರಂದು ಬೆಳ್ಳಗ್ಗೆ 10 ಗಂಟೆಗೆ ನಿಗಧಿಪಡಿಸಲಾಗಿದೆಎಂದುಜಿಲ್ಲಾ ಪಂಚಾಯಿತಿಯ ಮುಖ್ಯಕಾರ್ಯ ನಿರ್ವಹಣಾಧಿಕಾರಿ ತಿಳಿಸಿದ್ದಾರೆ.

# ಆಕ್ಷೇಪಣೆಗಳಿಗೆ ಆಹ್ವಾನ

**ದಾವಣಗೆರೆ :** ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘದ ವತಿಯಿಂದ ರಾಷ್ಟ್ರೀಯ ಆರೋಗ್ಯ ಅಭಿಯಾನ ಅಡಿಯಲ್ಲಿ ಗುತ್ತಿಗೆ ಆಧಾರದ ಮೇಲೆ ಅಕ್ಟೋಬರ್ 16 ರಂದು ವಿವಿಧ ಹುದ್ದೆಗಳ ನೇರ ಸಂದರ್ಶನ ಆಯೋಜಿಸಲಾಗಿತ್ತು.

ಈ ನೇರ ಸಂದರ್ಶನದಲ್ಲಿ ಆಯ್ಕೆಯಾದ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಗಳನ್ನು ನವಂಬರ್ 21 ರಂದು ಕಚೇರಿಯ ಪ್ರಕಟಣಾ ಫಲಕದಲ್ಲಿ ಪ್ರಕಟಿಸಲಾಗಿದೆ. ಈ ಆಯ್ಕೆ ಪಟ್ಟಿಗೆ ಯಾವುದೇ ಆಕ್ಷೇಪಣೆಗಳಿದ್ದಲ್ಲಿ ಅಗತ್ಯ ದಾಖಲೆಗಳೊಂದಿಗೆ ಲಿಖಿತ ರೂಪದಲ್ಲಿ ಪ್ರಕಟಣೆಗೊಂಡ 7 ದಿನಗಳೊಳಗೆ ಜಿಲ್ಲಾ ಸರ್ವೇಕ್ಷಣಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕೆಂದು ಜಿಲ್ಲಾ ಸರ್ವೇಕ್ಷಣಾಧಿಕಾರಿ ತಿಳಿಸಿದ್ದಾರೆ.

# ಹುಲಿ ದಾಳಿಗೆ ಮಹಿಳೆ ಸಾವು

**ಗುಂಡ್ಲುಪೇಟೆ (ಚಾಮರಾಜನಗರ ಜಿಲ್ಲೆ):** ತಾಲ್ಲೂಕಿನ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶಕ್ಕೆ ಹೊಂದಿ ಕೊಂಡಿರುವ ಮಧುಮಲೈ ಹುಲಿ ಸಂರಕ್ಷಿತ ಪ್ರದೇಶ ವ್ಯಾಪ್ತಿಯಲ್ಲಿ ಸೋಮವಾರ ಹುಲಿ ದಾಳಿಗೆ ಮಹಿಳೆ ಮೃತಪಟ್ಟಿದ್ದಾರೆ.

ತಮಿಳುನಾಡಿನ ನಾಗಿಯಮ್ಮ ನೀಲಗಿರಿ (ಊಟಿ)

ಜಿಲ್ಲೆಯ ಗೂಡೂರು ತಾಲ್ಲೂಕಿನ ಮಾವನಹಳ್ಳ ಗ್ರಾಮದ ನಾಗಿಯಮ್ಮ (61) ಮೃತರು. ಮೇಕೆ ಮೇಯಿಸುವಾಗ ಹುಲಿ ಮಹಿಳೆಯನ್ನು ಎಳೆದೊಯ್ದಿದೆ.

ಇದೇ ಸ್ಥಳದಲ್ಲಿ 5 ತಿಂಗಳ ಹಿಂದೆ 2 ಹಸುಗಳನ್ನು ಹುಲಿ ಕೊಂದಿತ್ತು

ಒಂದೇ ದಿನ 2000 ಕೋಟಿ ರೂಪಾಯಿಗಳ ಕಾಮಗಾರಿಗಳ ಶಂಕುಸ್ಥಾಪನೆ, ಉದ್ಘಾಟನೆ ನೆರವೇರಿಸಿದ ಮುಖ್ಯಮಂತ್ರಿಗಳು

ಖಜಾನೆ ಖಾಲಿ ಎನ್ನುವ ಆರೋಪಕ್ಕೆ ಒಂದು ಲಕ್ಷ ಕೋಟಿ ಮೊತ್ತದ ಅಭಿವೃದ್ಧಿ ಕಾರ್ಯಗಳ ಮೂಲಕವೇ ಉತ್ತರ: ಸಿ.ಎಂ ಘೋಷಣೆ

# ನಮ್ಮದು ಸರ್ವರನ್ನೂ ಒಳಗೊಳ್ಳುವ ಸರ್ಕಾರ: ಸಿ.ಎಂ

**ಚಿಕ್ಕಬಳ್ಳಾಪುರ:** ಖಜಾನೆ ಖಾಲಿ ಎನ್ನುವ ಕೆಲವರ ಅಭಿಪ್ರಾಯಕ್ಕೆ ಒಂದು ಲಕ್ಷ ಕೋಟಿ ಮೊತ್ತದ ಅಭಿವೃದ್ಧಿ ಕಾರ್ಯಗಳ ಮೂಲಕವೇ ಉತ್ತರಿಸಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.



ಜಿಲ್ಲೆಯ ಹೈಟೆಕ್ ರೇಷ್ಮೆ ಗೂಡಿನ ಮಾರುಕಟ್ಟೆ, ಹೆಚ್.ಎನ್. ವ್ಯಾಲಿ 3ನೇ ಹಂತದ 164 ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಮತ್ತು ವಿವಿಧ ಕಾಮಗಾರಿಗಳ ಉದ್ಘಾಟನೆ, ಶಂಕುಸ್ಥಾಪನೆ ಹಾಗೂ ವಿವಿಧ ಫಲಾನುಭವಿಗಳಿಗೆ ಸವಲತ್ತುಗಳ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇಂದು (ಸೋಮವಾರ ) ಉದ್ಘಾಟನೆಯಾದ ಹೈಟೆಕ್ ರೇಷ್ಮೆ ಗೂಡಿನ ಮಾರುಕಟ್ಟೆಯಿಂದಾಗಿ ಇಡೀ ರಾಜ್ಯದ ರೇಷ್ಮೆ ಬೆಳೆಗಾರರಿಗೆ ಅನುಕೂಲ ಆಗಲಿದೆ ಶಿಡ್ಲಘಟ್ಟ ಕ್ಷೇತ್ರದಲ್ಲಿ ಇಷ್ಟು ದೊಡ್ಡ ಮೊತ್ತದ ಕಾಮಗಾರಿಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸುತ್ತಿರುವುದು ನಮ್ಮ ಸರ್ಕಾರದ ಅಭಿವೃದ್ಧಿ ಪರ್ವದ ವೇಗವನ್ನು ತೋರಿಸುತ್ತದೆ. ನಾವು ಕೊಟ್ಟ ಮಾತಿನಂತೆ ನಡೆದುಕೊಳ್ಳುತ್ತಿದ್ದೇವೆ. ಗ್ಯಾರಂಟಿ ಕಾರ್ಯಕ್ರಮಗಳಿಗೆ ಒಂದು ಲಕ್ಷ ಕೋಟಿಗೂ ಅಧಿಕ ಮೊತ್ತದ ಹಣ ಇದುವರೆಗೂ ವೆಚ್ಚ ಮಾಡಿರುವುದು ಮಾತ್ರವಲ್ಲದೆ ಇಷ್ಟೇ ಮೊತ್ತದ ಅಭಿವೃದ್ಧಿ ಕಾರ್ಯಗಳನ್ನೂ ನಾವು ನಡೆಸುತ್ತಿದ್ದೇವೆ. ಇದಕ್ಕೆ ಇಂದು ಇಲ್ಲಿ ಉದ್ಘಾಟನೆಗೊಂಡ ಅಭಿವೃದ್ಧಿಯೂ ಸೇರಿದೆ ಎಂದರು.

ಸರ್ಕಾರದ ಬಳಿ ಹಣ ಇಲ್ಲ, ಖಜಾನೆ ಖಾಲಿ ಆಗಿದೆ ಎನ್ನುವ ಆರೋಪಗಳಿಗೆ ನಮ್ಮ ಸರ್ಕಾರ ಅಭಿವೃದ್ಧಿ ಕಾರ್ಯಗಳ ಮೂಲಕವೇ ಉತ್ತರ ಕೊಟ್ಟಿದೆ. ರಾಜ್ಯದ ಪ್ರತೀ ಕುಟುಂಬಗಳಿಗೂ ಪ್ರತೀ ತಿಂಗಳು ಸರ್ಕಾರದ ಹಣ ಮತ್ತು ಕಾರ್ಯಕ್ರಮಗಳು ತಲುಪುತ್ತಿವೆ ಎಂದರು.

ಈ ಸಂದರ್ಭದಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್, ಸಚಿವರಾದ ಕೆ.ಹೆಚ್.ಮುನಿಯಪ್ಪ.ದಿನೇಶ್ ಗುಂಡೂರಾವ್,

ಹೆಚ್.ಸಿ.ಮಹದೇವಪ್ಪ,ಕೃಷ್ಣಬೈರೇಗೌಡ, ಬೈರತಿಸುರೇಶ್,ಜಮೀರ್ ಅಹಮದ್, ವೆಂಕಟೇಶ್, ರಹೀಂ ಖಾನ್, ಲಕ್ಷ್ಮೀ ಆರ್.ಹೆಬ್ಬಾಳ್ಕರ್, ಎನ್.ಎಸ್.ಭೋಸರಾಜು,ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್,

ಸಂಸದ ಎಂ.ಮಲ್ಲೇಶ್ ಬಾಬು, ಶಾಸಕರಾದ ಎಸ್.ಎನ್. ಸುಬ್ಬಾರೆಡ್ಡಿ, ಬಿ.ಎನ್. ರವಿಕುಮಾರ್, ಪ್ರದೀಪ್ ಈಶ್ವರ್ , ಕೆ.ಹೆಚ್. ಪುಟ್ಟಸ್ವಾಮಿಗೌಡ, ವಿಧಾನ ಪರಿಷತ್ತು ಸದಸ್ಯರಾದ ಚಿದಾನಂದ ಎಂ. ಗೌಡ, ಎಂ.ಎಲ್.ಅನಿಲ್ ಕುಮಾರ್, ಡಿ.ಟಿ. ಶ್ರೀನಿವಾಸ, ಡಾ. ಹೆಚ್.ನರಸಿಂಹಯ್ಯ ವಿಜ್ಞಾನ ಶೈಕ್ಷಣಿಕ ಸಾಂಸ್ಕೃತಿಕ ಮತ್ತು ಪ್ರವಾಸೋದ್ಯಮ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎನ್. ಹೆಚ್ ಶಿವಶಂಕರರೆಡ್ಡಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕೆ.ಎನ್. ಕೇಶವರೆಡ್ಡಿ, ಕರ್ನಾಟಕ ಜಾನಪದ ಅಕಾಡೆಮಿಯ ಅಧ್ಯಕ್ಷ ಗೊಲ್ಲಹಳ್ಳಿ ಶಿವಪ್ರಸಾದ್, ಕರ್ನಾಟಕ ರಾಜ್ಯ ಮಾವು ಅಭಿವೃದ್ಧಿ ಮತ್ತು ಮಾರುಕಟ್ಟೆ ನಿಗಮ ನಿಯಮಿತದ ಅಧ್ಯಕ್ಷ ಡಾ. ಬಿ.ಸಿ. ಮುದ್ದುಗಂಗಾಧರ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಯಲುವಹಳ್ಳಿ ಎನ್. ರಮೇಶ್,

ಕರ್ನಾಟಕ ರಾಜ್ಯ ಸಹಕಾರ ಕೈಮಗ್ಗ ನೇಕಾರರ ಮಹಾಮಂಡಳಿ ನಿಗಮದ ಅಧ್ಯಕ್ಷ ಬಿ.ಜಿ. ಗಣೇಶ್, ಹಂಡಿಗನಾಳ ಗ್ರಾಮ ಪಂಚಾಯ್ತಿ ಅಧ್ಯಕ್ಷೆ ವೆಂಕಟಲಕ್ಷ್ಮಮ್ಮ, ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ. ಎನ್. ಮಂಜುಳ ಹಾಗೂ ಎಲ್ಲಾ ಇಲಾಖೆಗಳ ಸರ್ಕಾರದ ಕಾರ್ಯದರ್ಶಿಗಳು,

ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ, ಜಿಲ್ಲಾಪಂಚಾಯತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ವೈ.ನವೀನ್ ಭಟ್, ಪೋಲಿಸ್ ವರಿಷ್ಠಾಧಿಕಾರಿ ಕುಶಲ್ ಚೌಕ್ಸೆ, ಅಪರ ಜಿಲ್ಲಾಧಿಕಾರಿ ಡಾ.ಎನ್.ಭಾಸ್ಕರ್, ಉಪವಿಭಾಗಾಧಿಕಾರಿ ಡಿ.ಹೆಚ್.ಅಶ್ವಿನ್, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು. ಸಾರ್ವಜನಿಕರು ಇದ್ದರು.

# ಸ್ಮೃತಿ ಭಾವಿ ಪತಿ ಪಲಾಶ್ ಅಸ್ವಸ್ಥ

**ಮುಂಬೈ:** ತಂದೆಯ ಅನಾರೋಗ್ಯದಿಂದಾಗಿ ಮಹಿಳಾ ಕ್ರಿಕೆಟ್ ತಾರೆ ಸ್ಮೃತಿ ಮಂದನಾ ಮದುವೆ ಮುಂದೂಡಿಕೆಯಾದ ನಡುವೆ, ಅವರಭಾವಿ ಪತಿ ಹಾಗೂ ಬಾಲಿವುಡ್ ಸಂಗೀತ ಸಂಯೋಜಕ ಪಲಾಶ್ ಮುಚ್ಚಲ್ ಕೂಡ ಅಸ್ವಸ್ಥಗೊಂಡಿದ್ದಾರೆ. ವೈರಲ್ ಸೋಂಕಿನಿಂದ ಬಳಲಿದ ಪಲಾಶ್



ಸಾಂಗ್ಲಿಯಲ್ಲಿ ಭಾನುವಾರ ಕೆಲಕಾಲ ಆಸ್ಪತ್ರೆಗೆ ದಾಖಲಾಗಿದ್ದರು. ಸೋಮವಾರ ಮುಂಬೈಗೆ ಮರಳಿರುವ ಅವರು ಮನೆಯಲ್ಲೇ ವಿಶ್ರಾಂತಿ ಪಡೆಯುತ್ತಿದ್ದಾರೆ ಎಂದು ಅವರ ತಾಯಿ ಅಮಿತಾ ಮುಚ್ಚಲ್ ತಿಳಿಸಿದ್ದಾರೆ. ಮದುವೆ ಸಮಯದ ವಿವಿಧ ಕಾರ್ಯಕ್ರಮಗಳಿಂದ ಒತ್ತಡಕ್ಕೆ ಒಳಗಾಗಿದ್ದರಿಂದ ಪುತ್ರನ ಆರೋಗ್ಯ ಹದಗೆಟ್ಟಿತ್ತು. ಆತ 4 ಗಂಟೆ ಕಾಲ ಆಸ್ಪತ್ರೆಯಲ್ಲಿದ್ದ. ಐವಿ ಡ್ರಿಪ್ ನೀಡಿದ ಬಳಿಕ ಚೇತರಿಕೆ ಕಂಡಿದ್ದಾನೆ. ಈಗ ಆರೋಗ್ಯವಾಗಿದ್ದಾನೆ ಎಂದು ಅವರು ತಿಳಿಸಿದ್ದಾರೆ. ಪಲಾಶ್ ಕೂಡ ಸ್ಮೃತಿ ತಂದೆ ಶ್ರೀನಿವಾಸ್ ಮಂದನಾಗೆ ಆಪ್ತನಾಗಿದ್ದ. ಮದುವೆ ಮುಂದೂಡುವ ಬಗ್ಗೆ ಸ್ಮೃತಿಗಿಂತ ಮುನ್ನ ಈತನೇ ನಿರ್ಧರಿಸಿದ್ದ. ಅಳುತ್ತಿದ್ದಾಗಲೇ ಆತನ ಆರೋಗ್ಯ ಬಿಗಡಾಯಿಸಿತ್ತು ಎಂದು ಅಮಿತಾ ವಿವರಿಸಿದ್ದಾರೆ. ಎಲ್ಲ ಕಷ್ಟಗಳು ದೂರವಾಗಿ ಶೀಘ್ರದಲ್ಲೇ ವಿವಾಹ ನಡೆಯುವ ವಿಶ್ವಾಸವನ್ನೂ ಅವರು ವ್ಯಕ್ತಪಡಿಸಿದ್ದಾರೆ.

# ವಿದ್ಯಾರ್ಥಿ ಆತ್ಮಹತ್ಯೆ: ಪ್ರತಿಭಟನೆ

**ನವದೆಹಲಿ (ಪಿಟಿಐ):** ಮಾನಸಿಕ ಕಿರುಕುಳದಿಂದ 10ನೇ ತರಗತಿಯ ವಿದ್ಯಾರ್ಥಿ ದೆಹಲಿಯಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎನ್ನಲಾದ ಪ್ರಕರಣವು ತೀವ್ರ ಪ್ರತಿಭಟನೆಗೆ ಕಾರಣವಾಯಿತು.

ದೆಹಲಿಯ ಸೇಂಟ್ ಕೊಲಂಬಸ್ ಶಾಲೆಯ ಎದುರು ಜಮಾಯಿಸಿದ್ದ ವಿದ್ಯಾರ್ಥಿಗಳು ಮತ್ತು ಪೋಷಕರು, ದೂರಿನಲ್ಲಿ ಉಲ್ಲೇಖಿಸಲಾಗಿರುವ ಶಿಕ್ಷಕರು ಮತ್ತು ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಮೃತ ವಿದ್ಯಾರ್ಥಿಯ ತಂದೆ ಕೂಡ ಪ್ರತಿಭಟನೆಯಲ್ಲಿ ಭಾಗಿಯಾದರು.

'ಬಾಲಕನಿಗೆ ನ್ಯಾಯ ಸಿಗಲಿ', 'ವಿದ್ಯಾರ್ಥಿಗಳ ಮೇಲೆ ದೌರ್ಜನ್ಯ ಬೇಡ' ಎಂಬ ಫಲಕಗಳನ್ನು ಪ್ರತಿಭಟನಾಕಾರರು ಹಿಡಿದುಕೊಂಡಿದ್ದರು.

'ತುಂಬಾ ದುಃಖಿತನಾಗಿದ್ದ ವಿದ್ಯಾರ್ಥಿಯು ಮನೆಗೆ ಹೋಗಲಿಲ್ಲ. ಆತ್ಮಹತ್ಯೆ ಮಾಡಿಕೊಳ್ಳುವ ಮುನ್ನ ಮೆಟ್ರೊ ನಿಲ್ದಾಣದಲ್ಲಿ ಮರಣಪತ್ರವನ್ನು ಬರೆದಿದ್ದ' ಎಂದು ಮೃತ ವಿದ್ಯಾರ್ಥಿಯ ಸಹಪಾಠಿಯೊಬ್ಬರು ತಿಳಿಸಿದ್ದಾರೆ.

ವಿದ್ಯಾರ್ಥಿಯು ದೆಹಲಿಯ ರಾಜೇಂದ್ರ ಪ್ಲೇಸ್ ಮೆಟ್ರೊ ನಿಲ್ದಾಣದ ಪ್ಲಾಟ್‌ಫಾರ್ಮ್‌ನಿಂದ ನವೆಂಬರ್ 18ರಂದು ಜಿಗಿದು ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಸಾವಿಗೂ ಮುನ್ನ ಮರಣಪತ್ರವನ್ನು ಬರೆದಿರುವ ವಿದ್ಯಾರ್ಥಿ, ತನಗೆ ಮಾನಸಿಕ ಹಿಂಸೆ ನೀಡಲಾಗಿದೆ ಎಂದು ಹಲವು ಶಿಕ್ಷಕರ ಹೆಸರನ್ನು ಉಲ್ಲೇಖಿಸಿದ್ದಾನೆ.

ಮೂವರು ಶಿಕ್ಷಕರಿಗೆ ಸಮನ್ಸ್: ವಿದ್ಯಾರ್ಥಿ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿ ಸೈಂಟ್ ಕೊಲಂಬಸ್ ಶಾಲೆಯ ಮೂವರು ಶಿಕ್ಷಕರಿಗೆ ಸೋಮವಾರ ಸಮನ್ಸ್ ನೀಡಲಾಗಿದೆ.

# 8ನೇ ರಾಷ್ಟ್ರೀಯ ಪ್ರಕೃತಿ ಚಿಕಿತ್ಸಾ ದಿನಾಚರಣೆ ಹಾಸನ ಜಿಲ್ಲೆಯಲ್ಲಿ ಜಾಗೃತಿ ಅಭಿಯಾನ ಯಶಸ್ವಿ

**ಹಾಸನ :** 8ನೇ ರಾಷ್ಟ್ರೀಯ ಪ್ರಕೃತಿ ಚಿಕಿತ್ಸಾ ದಿನಾಚರಣೆಯ ಅಂಗವಾಗಿ, ಉಜಿರೆಯ ಎಸ್ ಡಿ ಎಂ ಪ್ರಕೃತಿ ಚಿಕಿತ್ಸೆ ಮತ್ತು ಯೋಗ ವಿಜ್ಞಾನಗಳ ಮಹಾವಿದ್ಯಾಲಯ ಕಾಲೇಜಿನ ವೈದ್ಯ ವಿದ್ಯಾರ್ಥಿಗಳು ಹಾಸನ ಜಿಲ್ಲೆಯಾದ್ಯಂತ ಯಶಸ್ವಿ ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಿದ್ದರು



8ನೇ ರಾಷ್ಟ್ರೀಯ ಪ್ರಕೃತಿ ಚಿಕಿತ್ಸಾ ದಿನಾಚರಣೆಯ ಅಂಗವಾಗಿ, ಉಜಿರೆಯ ಎಸ್ ಡಿ ಎಂ ಪ್ರಕೃತಿ ಚಿಕಿತ್ಸೆ ಮತ್ತು ಯೋಗ ವಿಜ್ಞಾನಗಳ ಮಹಾವಿದ್ಯಾಲಯ ಕಾಲೇಜಿನ ವಿದ್ಯಾರ್ಥಿಗಳಾದ ಅಮೃತ ಜಿ ಎಲ್ (4ನೇ ವರ್ಷ), ಅಕ್ಷಯ್ (1ನೇ ವರ್ಷ) ಮತ್ತು ವರ್ಷಿಣಿ (1ನೇ ವರ್ಷ) ಇವರು ಕಾಲೇಜಿನ ಪ್ರಾಂಶುಪಾಲರಾದ ಡಾ. ಪ್ರಶಾಂತ್ ಶೆಟ್ಟಿ ಅವರ ನೇತೃತ್ವದಲ್ಲಿ ಹಾಗೂ ಉಜಿರೆಯ ಶಾಂತಿವನ ಪ್ರಕೃತಿ ಚಿಕಿತ್ಸಾಲಯದ ವೈದ್ಯ ಅಧಿಕಾರಿಗಳಾದ ಡಾ. ಅಶ್ವಿನ್ ಅವರ ಸಹಾಯದೊಂದಿಗೆ ನವೆಂಬರ್ 10 ರಿಂದ ನವೆಂಬರ್ 18ರವರೆಗೆ ಹಾಸನ ಜಿಲ್ಲೆಯಾದ್ಯಂತ ಪ್ರಕೃತಿ ಚಿಕಿತ್ಸೆಯ ಕುರಿತು ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಿದ್ದರು. ಈ ಕಾರ್ಯಕ್ರಮದಲ್ಲಿ ಪ್ರಕೃತಿ ಚಿಕಿತ್ಸೆಯ ಅರಿವು ಮತ್ತು ಯೋಗದ ಮಹತ್ವವನ್ನು ತಿಳಿಸಲಾಯಿತು, ಅಲ್ಲದೆ ನಿತ್ಯ ಜೀವನ ಶೈಲಿ ಹಾಗೂ ಆಹಾರ ಪದ್ಧತಿಯ ಬಗ್ಗೆ ಜನರಲ್ಲಿ ಅರಿವು ಮೂಡಿಸಲಾಯಿತು. ಇತ್ತೀಚೆಗೆ ಸಾಮಾನ್ಯವಾಗುತ್ತಿರುವ ರಕ್ತದೊತ್ತಡ, ಮಧುಮೇಹ, ಸ್ಥೂಲಕಾಯ, ಸಂಧಿವಾತ, ನರಗಳ ದೌರ್ಬಲ್ಯ ಮುಂತಾದ ಕಾಯಿಲೆಗಳ ಬಗ್ಗೆ ಜಾಗೃತಿ ಮೂಡಿಸಿ, ಪ್ರಕೃತಿ ಚಿಕಿತ್ಸೆಯನ್ನು ನೀಡಲಾಯಿತು. ಅಭಿಯಾನದ ಕೊನೆಯಲ್ಲಿ ಅರಸೀಕೆರೆಯ ತಾಲ್ಲೂಕು ಕಚೇರಿಯಲ್ಲಿ ವೈದ್ಯಕೀಯ ತಪಾಸಣಾ ಶಿಬಿರವನ್ನು ನಡೆಸಲಾಯಿತು. ಈ ಶಿಬಿರಕ್ಕೆ ಅರಸೀಕೆರೆ ತಹಶೀಲ್ದಾರ್ ಶ್ರೀ ಎಂ ಜಿ ಸಂತೋಷ್ ಕುಮಾರ್ ಮುಖ್ಯ ಅತಿಥಿಗಳಾಗಿದ್ದರು, ಮತ್ತು ಕಾಲೇಜಿನ ಎಂ ಡಿ ಪದವೀಧರರಾದ ಡಾ. ಶಶಾಂಕ್ ಹಾಗೂ ಡಾ. ರಕ್ಷಿತ ಇವರು ನೆರವು ನೀಡಿದರು.

# ಜ್ಞಾನ ವಿಕಾಸಕ್ಕೆ ಪ್ರತಿಭಾ ಕಾರಂಜಿ ಪೂರಕ

**ಚಿಕ್ಕಮಗಳೂರು:** ಪ್ರತಿಭಾಕಾರಂಜಿ ಮಕ್ಕಳಿಗೆ ಮನೋಲ್ಲಾಸದಜೊತೆಗೆ ಶಿಕ್ಷಣದಲ್ಲಿ ಆಸಕ್ತಿ ಮೂಡಿಸಿ ವಿದ್ಯಾರ್ಥಿಗಳ ಜ್ಞಾನ ವಿಕಸನಕ್ಕೆ ಸಹಕಾರಿಯಾಗುತ್ತದೆಎಂದುಶಾಸಕ ಹೆಚ್.ಡಿತಮ್ಮಯ್ಯ ಹೇಳಿದರು.



ಕರ್ತಿಕೆರೆಗ್ರಾಮ ಪಂಚಾಯಿತಿ ವ್ಯಾಪ್ತಿಯಕುರುವಂಗಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿಜಿಲ್ಲಾ ಪಂಚಾಯಿತಿ,ತಾಲ್ಲೂಕು ಪಂಚಾಯಿತಿ,ಕರ್ತಿಕೆರೆ ಶಾಲಾ ಶಿಕ್ಷಣ ಇಲಾಖೆ,ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ಹಾಗೂ ಕ್ಷೇತ್ರ ಸಂಪನ್ಮೂಲ ಕೇಂದ್ರ. ಸಮೂಹ ಸಂಪನ್ಮೂಲ ಕೇಂದ್ರಕರ್ತಿಕೆರೆಕ್ಲಸ್ಟರ್ ಮಟ್ಟದಕಿರಿಯ ಮತ್ತು ಹಿರಿಯ ಪ್ರಾಥಮಿಕ ಶಾಲೆಗಳ 2025–26ರ ಪ್ರತಿಭಾಕಾರಂಜಿಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಸರ್ಕಾರಿ ಶಾಲೆಯ ಮಕ್ಕಳಿಗೆ ಶಿಕ್ಷಕರು ರಾಮಾಯಣ, ಮಹಾಭಾರತ, ಭಗವದ್ಗೀತೆ, ಬುದ್ಧ, ಬಸವಣ್ಣ ನವರ ವಚನ, ಅಂಬೇಡ್ಕರ್‌ರವರ ಸಂವಿಧಾನ, ಕನಕದಾಸರ ಕೀರ್ತನೆಗಳನ್ನು ಮತ್ತುಅವರಜೀವನಚರಿತ್ರೆಯನ್ನು ಪರಿಚಯಿಸಿದಾಗ ವಿದ್ಯಾರ್ಥಿಗಳು ಸಹ ಅವರ ಮಾರ್ಗದರ್ಶನ ಪಡೆದುಸಮಾಜದ ಸತ್ಪ್ರಜೆಗಳಾಗುತ್ತಾರೆ ಎಂದರು.

ಪ ್ ್ ತಿ ಂ ಽ ' ಊ ಬ ಬ
ವಿದ್ಯಾರ್ಥಿಂಽಽಲಲ್ಲೂ ಒಂದ್‌ಒಂದ್ಽ

ಪ್ರತಿಭೆಗಳಿದ್ದು ಅಂತಹ ಪ್ರತಿಭೆಗಳನ್ನು ಹೆಚ್ಚಿಸಲು ಊರತರುವಸದುದ್ದೇಶದಿಂದಕಿರಿಯ ಮತ್ತು ಹಿರಿಯ ಪ್ರಾಥಮಿಕ ಶಾಲೆಗಳಮಕ್ಕಳಿಗಾಗಿ ಪ್ರತಿಭಾಕಾರಂಜಿಆಯೋಜನೆ ಮಾಡಲಾಗಿದೆ. ಶಿಕ್ಷಣದಲ್ಲಿ ಮಾತ್ರವಲ್ಲದೆಪಠ್ಯೇತರಚಟುವಟಿಕೆಗಳಲ್ಲಿ ಹಲವಾರು ಪ್ರತಿಭೆಗಳಿದ್ದು ಅಂತಹ ಪ್ರತಿಭೆಗಳನ್ನು ಹುಡುಕಿವಲಯ, ಕ್ಲಸ್ಟರ್, ತಾಲ್ಲೂಕು ಮತ್ತುಜಿಲ್ಲಾ ಮಟ್ಟಕ್ಕೆಆಯ್ಕೆ ಮಾಡಿ ನಂತರರಾಜ್ಯ ಮಟ್ಟದಲ್ಲಿಯೂ ಗುರುತಿಸಿಕೊಳ್ಳುವ ಅವಕಾಶವನ್ನುರಾಜ್ಯ ಸರ್ಕಾರ ಮಾಡುತ್ತಿದೆಎಂದರು.

ಶಾಲೆ ಶಿಕ್ಷಕರು ಮಕ್ಕಳಲ್ಲಿ ಇರುವ ಪ್ರತಿಭೆಗಳನ್ನುಗುರುತಿಸಬೇಕು, ತೀರ್ಪುಗಾರರು ಪ್ರಾಮಾಣಿಕವಾಗಿತೀರ್ಪನ್ನು ನೀಡಬೇಕುಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಬ್ಲಾಕ್‌ಕಾಂಗ್ರೆಸ್‌ಅಧ್ಯಕ್ಷ ಮಂಜೇಗೌಡ,ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ವೆಂಕಟೇಶ್, ಶಾಲಾ ಎಸ್‌ಡಿಎಂಸಿ ಅಧ್ಯಕ್ಷೆ ಕುಸುಮ,ಉಪಾಧ್ಯಕ್ಷತೀರ್ಥಣ್ಣ, ಎಂ.ಡಿ.ಎಂ ನಿರ್ದೇಶಕ ನೀಲಕಂಠಪ್ಪ. ಬಿ.ಆರ್‌ಸಿ ನಾಗರಾಜ್, ಗ್ರಾ.ಪಂ ಸದಸ್ಯರಾದ ಮೋಹನ್, ಆಶಾಗುರುಸ್ವಾಮಿ, ಪುಟ್ಟಸ್ವಾಮಿಶೆಟ್ರು, ಜಿಲ್ಲಾ ಮುಖ್ಯ ಶಿಕ್ಷಕರ ಸಂಘದಅಧ್ಯಕ್ಷಚಂದ್ರಯ್ಯ, ತಾಲ್ಲೂಕು ಮುಖ್ಯ ಶಿಕ್ಷಕರ ಸಂಘದಅಧ್ಯಕ್ಷಶ್ರೀನಿವಾಸ್, ಸಿ.ಆರ್.ಪಿ ಉಮೇಶ್, ರೇಖಾಶಂಕರ್, ಕುಮಾರಣ್ಣ, ಗಂಗಣ್ಣ, ರಂಗನಾಥ್ ಶೆಟ್ರು, ಸುರೇಶ್, ಚೇತನ್, ರಾಜೇಶ್, ರಂಗಸ್ವಾಮಿ, ನೇತ್ರಕುಮಾರ್, ಶಾಲಾ ಮುಖ್ಯ ಶಿಕ್ಷಕ ರಾಜು.ಡಿ, ಮತ್ತಿತರರು ಉಪಸ್ಥಿತರಿದ್ದರು.

# ಬಳ್ಳಾರಿ ಮಹಾನಗರ ಪಾಲಿಕೆಯ ನೂತನ ಮಹಾಪೌರರಾಗಿ ಪಿ.ಗಾದೆಪ್ಪ ಅಧಿಕಾರ ಸ್ವೀಕಾರ

**ಬಳ್ಳಾರಿ:** ಬಳ್ಳಾರಿ ಮಹಾನಗರ ಪಾಲಿಕೆಯ ನೂತನ ಮಹಾಪೌರರಾಗಿ ಪಿ.ಗಾದೆಪ್ಪ ಅವರು ಸೋಮವಾರ ಅಧಿಕಾರ ಸ್ವೀಕಾರ ಮಾಡಿದರು.

ಮಹಾನಗರ ಪಾಲಿಕೆಯ ಮೇಯರ್ ಕಚೇರಿ ಸಭಾಂಗಣದಲ್ಲಿ ನೂತನ ಮೇಯರ್ ಆದ ಪಿ.ಗಾದೆಪ್ಪ ಅವರು ದಾಖಲಾತಿಯಲ್ಲಿ ಸಹಿ ಹಾಕುವುದರ ಮೂಲಕ ಅಧಿಕೃತವಾಗಿ ಅಧಿಕಾರ ವಹಿಸಿಕೊಂಡರು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಸದಸ್ಯರು, ಜನಪ್ರತಿನಿಧಿಗಳು ಹಾಗೂ ಪಾಲಿಕೆಯ ಅಧಿಕಾರಿಗಳು ಶುಭ ಕೋರಿದರು.

# ಡಿಸೆಂಬರ್ 3 ರಂದು ವಿಶ್ವ ವಿಕಲಚೇತನರ ದಿನಾಚರಣೆ

**ದಾವಣಗೆರೆ :** ಡಿಸೆಂಬರ್ 3 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಾರ್ಯಾಲಯದ ತುಂಗಭದ್ರ ಸಭಾಂಗಣದಲ್ಲಿ ವಿಶ್ವ ವಿಕಲಚೇತನರ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಗಿದೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ವಿಕಲಚೇತನರ ಶ್ರೇಯೋಭಿವೃದ್ಧಿಗಾಗಿ ಶ್ರಮಿಸುತ್ತಿರುವ ಸ್ವಯಂ ಸೇವಾ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಆಯೋಜಿಸಲಾದ ಕಾರ್ಯಕ್ರಮವನ್ನು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ಉದ್ಘಾಟಿಸುವರು. ಶಾಸಕರಾದ ಡಾ.ಶಾಮನೂರು ಶಿವಶಂಕರಪ್ಪ ಅಧ್ಯಕ್ಷತೆ ವಹಿಸುವರು.ಮುಖ್ಯ ಅತಿಥಿಗಳಾಗಿ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್, ಮಾಯಕೊಂಡ ಶಾಸಕರಾದ ಕೆ.ಎಸ್.ಬಸವಂತಪ್ಪ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ಹೊನ್ನಾಳಿ ಶಾಸಕ ಶಾಂತನಗೌಡ ಡಿ.ಜಿ, ಚನ್ನಗಿರಿ ಶಾಸಕ ಬಸವರಾಜು ವಿ.ಶಿವಗಂಗಾ, ಹರಿಹರ ಶಾಸಕ ಬಿ.ಪಿ ಹರೀಶ್, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್.ಭೋಜೇಗೌಡ, ಚಿದಾನಂದ ಎಂ.ಗೌಡ, ಡಿ.ಎಸ್ ಅರುಣ್, ಕೆ.ಎಸ್.ನವೀನ್, ಕೆ.ಅಬ್ದುಲ್ ಜಬ್ಬಾರ್, ಡಾ.ಧನಂಜಯ್ ಸರ್ಜಿ, ಡಿ.ಟಿ.ಶ್ರೀನಿವಾಸ್, ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾದ ಅಸಗೋಡು ಜಯಸಿಂಹ, ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರಾದ ಎನ್ ಜಯದೇವನಾಯ್ಕ, ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ಅಧ್ಯಕ್ಷರಾದ ಹೆಚ್.ಬಿ ಮಂಜಪ್ಪ, ಕರ್ನಾಟಕ ಜೀವ ವೈವಿಧ್ಯ ಮಂಡಳಿಯ ಅಧ್ಯಕ್ಷರಾದ ವಡ್ನಾಳ್ ಜಗದೀಶ್, ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜಿ.ಹೆಚ್ ಮರಿಯೋಜಿರಾವ್, ದೂಡಾ ಅಧ್ಯಕ್ಷರಾದ ದಿನೇಶ್.ಕೆ.ಶೆಟ್ಟಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಶಾಮನೂರು ಟಿ ಬಸವರಾಜ್, ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಗಿತ್ತೆ ಮಾದವ್ ವಿಠ್ಠಲರಾವ್ ಉಪಸ್ಥಿತರಿರುವರು.

# 28ರಂದು ಉತ್ಸವಾಂಭ ದೇವಿ ದೇವಸ್ಥಾನದಲ್ಲಿ ಕಾರ್ತಿಕ ದೀಪೋತ್ಸವ

**ದಾವಣಗೆರೆ :** ವಸಂತ ರಸ್ತೆಯ ಹಾಲೇಶ್ವರ ಪ್ರಿಂಟಿಂಗ್ ಪ್ರೆಸ್ ಹಿಂಭಾಗದಲ್ಲಿರುವ ಶ್ರೀ ಉತ್ಸವಾಂಬ ದೇವಸ್ಥಾನದಲ್ಲಿ ಇದೇ ದಿನಾಂಕ 28ರ ಶುಕ್ರವಾರ ಕಾರ್ತಿಕ ದೀಪೋತ್ಸವ ಹಾಗೂ ವಿಶೇಷ ಪೂಜಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.ಅಂದು ಬೆಳಗಿನ ಜಾವ 4.30 ರಿಂದ ಸರಿಯಾಗಿ ಮಹಾರುದ್ರಾಭಿಷೇಕ ನಡೆಯಲಿದೆ. ಸಂಜೆ 7.30ಕ್ಕೆ ದೇವಸ್ಥಾನದಲ್ಲಿ ಕಾರ್ತಿಕ ದೀಪೋತ್ಸವವು ವಿಜೃಂಭಣೆಯಿಂದ ಜರುಗಲಿದೆ ಎಂದು ಶ್ರೀ ಉತ್ಸವಾಂಬ ದೇವಿ ಭಕ್ತ ಮಂಡಳಿ

# ನವಂಬರ್ 28 ರಂದು ಆಯ–ವ್ಯಯ ಸಭೆ

**ದಾವಣಗೆರೆ :** ಪಾಲಿಕೆಯ ಬರುವ ವರ್ಷದ ಆಯವ್ಯಯವನ್ನು ತಯಾರಿಸಲು ಸಂಘ ಸಂಸ್ಥೆಗಳು ಮತ್ತು ಸಾರ್ವಜನಿಕರಿಂದ ನವಂಬರ್ 28 ರಂದು ಮಧ್ಯಾಹ್ನ 3 ಗಂಟೆಗೆ ಮಹಾನಗರಪಾಲಿಕೆಯ ಕೌನ್ಸಿಲ್ ಸಭಾಂಗಣದಲ್ಲಿ ಮೊದಲನೇಯ ಸಭೆಯನ್ನು ಆಯೋಜಿಸಲಾಗಿದೆ ಎಂದು ಪಾಲಿಕೆ ಆಯುಕ್ತೆ ರೇಣುಕಾ ತಿಳಿಸಿದ್ದಾರೆ.





Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**